

ಕನ್ನಡದ ನಟ ರುಕ್ಮಿಣಿ ವಸಂತ್‌ಗೆ ಸೌತ್‌ನಲ್ಲಿ ಬೇಡಿಕೆ ಹೆಚ್ಚಾಗಿದೆ. ಸದ್ಯ ಕನ್ನಡ ಸಿನಿಮಾಗಳ ಜೊತೆ ಕಾಲಿವುಡ್‌ನಲ್ಲಿ ಬ್ಯುಸಿಯಿರುವ ಬೆಡಗಿ ಈಗ ತೆಲುಗಿನಿಂದ ಬುಲಾವ್ ಬಂದಿದೆ. ಟಾಲಿವುಡ್‌ನ ಸ್ಟಾರ್ ನಟನಿಗೆ ರುಕ್ಮಿಣಿ ವಸಂತ್ ನಾಯಕಿಯಾಗಿ ಆಯ್ಕೆ ಯಾಗಿದ್ದಾರೆ.

2 ಜನರ ಕಣ್ಮನ ಸೆಳೆಯಲಿರುವ "ರಗ್ ಉತ್ಸವ್ 2024"

3 ಕಾಂಗ್ರೆಸ್ ಮುಕ್ತ ಕರ್ನಾಟಕ: ಬಿಜೆಪಿ-ಜೆಡಿಎಸ್ ಹುನ್ನಾರ

6 'ದೂರದರ್ಶನ ಚಂದನದಲ್ಲಿ ನಾಟಕಗಳ ಪ್ರದರ್ಶನಕ್ಕೆ ವ್ಯವಸ್ಥೆ'

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

VOLUME: 14 02 OCTOBER 2024 ಬುಧವಾರ RS: 2 PAGE: 06 ISSUE: 163

CALL 9740160669

# ಭಾರತ ಸಾರಥಿ

BHARATHA SARATHI
KANNADA DAILY NEWS PAPER

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ


ಸಂಪಾದಕ
ಗಂಡಸಿ ಸದಾನಂದಸ್ವಾಮಿ

RNI KARKAN2011/44806


ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com


**ಅದನ್ನು ಮುಡಾದವರು ಒತ್ತುವರಿ ಮಾಡಿಕೊಂಡು ನಿವೇಶನಗಳನ್ನು ರಚಿಸಿ ಮಾರಿಕೊಂಡಿದ್ದರು. ಅದಕ್ಕೆ ಬದಲಿ ನಿವೇಶನ ಕೋರಿದ್ದು, ವಿಜಯನಗರದ 3 ಮತ್ತು 4 ನೇ ಹಂತದಲ್ಲಿ ನಿವೇಶನ ಮಂಜೂರು ಮಾಡಿತ್ತು. ನನ್ನ ಪತ್ನಿಯವರು ವಿಜಯನಗರದಲ್ಲೇ ನೀಡುವಂತೆ ಕೇಳಿರಲಿಲ್ಲ. ಈಗ ಅದು ದೊಡ್ಡ ವಿವಾದವಾಗಿದೆ. ಇದರಿಂದ ನನ್ನ ಪತಿಯ ತೇಜೋವಧೆಯಾಗುತ್ತಿರುವುದು ಹಾಗೂ ರಾಜಕೀಯ ದ್ವೇಷ ಹಾಗೂ ಸೇಡನ್ನು ತೀರಿಸಿಕೊಳ್ಳತ್ತಿರುವ ಕೆಲಸವನ್ನು ವಿರೋಧಿಗಳು ಮತ್ತು ವಿರೋಧ ಪಕ್ಷಗಳು ಮಾಡುತ್ತಿರುವುದರಿಂದ ಮನನೊಂದು ನಿವೇಶನಗಳನ್ನು ಮರಳಿ ನೀಡಲು ತೀರ್ಮಾನಿಸಿದ್ದಾರೆ**

# ರಾಜೀನಾಮೆ ನೀಡಲ್ಲ: ಸಿದ್ದರಾಮಯ್ಯ ಖಡಕ್ ಮಾತು...!

ಬೆಂಗಳೂರು: ನಾನು ಅತ್ಮಸಾಕ್ಷಿಯಾಗಿ ಕೆಲಸ ಮಾಡುತ್ತೇನೆ ರಾಜಿನಾಮೆ ನೀಡುವ ಅಗತ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿದರು.

ಮುಖ್ಯಮಂತ್ರಿಯವರು ಇಂದು ರವೀಂದ್ರ ಕಲಾ ಕ್ಷೇತ್ರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ನನ್ನ ಪತ್ನಿ ಸ್ವತಂತ್ರವಾಗಿ ತೀರ್ಮಾನ ತೆಗೆದುಕೊಂಡಿದ್ದಾರೆ. ಪತ್ರ ಬರೆದಿರುವ ಕುರಿತು ನನಗೆ ಯಾವುದೇ ಮಾಹಿತಿಯಿಲ್ಲ. ಅವರ ಸಹೋದರ ಮಲ್ಲಿಕಾರ್ಜುನ ಸ್ವಾಮಿಯವರು ಜಮೀನಿನ ಮಾಲೀಕರಾಗಿದ್ದರು. ಉಡುಗೊರೆ ರೂಪದಲ್ಲಿ ನನ್ನ ಪತ್ನಿಗೆ 3 ಎಕರೆ 16 ಗುಂಟೆ ಜಮೀನು ನೀಡಿದ್ದರು.


ಭಾರತ ಸಾರಥಿ

ಅದನ್ನು ಮುಡಾದವರು ಒತ್ತುವರಿ ಮಾಡಿಕೊಂಡು ನಿವೇಶನಗಳನ್ನು ರಚಿಸಿ ಮಾರಿಕೊಂಡಿದ್ದರು. ಅದಕ್ಕೆ ಬದಲಿ ನಿವೇಶನ ಕೋರಿದ್ದು, ವಿಜಯನಗರದ 3 ಮತ್ತು 4 ನೇ ಹಂತದಲ್ಲಿ ನಿವೇಶನ ಮಂಜೂರು ಮಾಡಿತ್ತು. ನನ್ನ ಪತ್ನಿಯವರು ವಿಜಯನಗರದಲ್ಲೇ ನೀಡುವಂತೆ ಕೇಳಿರಲಿಲ್ಲ. ಈಗ ಅದು ದೊಡ್ಡ ವಿವಾದವಾಗಿದೆ. ಇದರಿಂದ ನನ್ನ ಪತಿಯ ತೇಜೋವಧೆ ಯಾಗುತ್ತಿರುವುದು ಹಾಗೂ ರಾಜಕೀಯ ದ್ವೇಷ ಹಾಗೂ ಸೇಡನ್ನು ತೀರಿಸಿಕೊಳ್ಳತ್ತಿರುವ ಕೆಲಸವನ್ನು ವಿರೋಧಿಗಳು ಮತ್ತು ವಿರೋಧ ಪಕ್ಷಗಳು ಮಾಡುತ್ತಿರುವುದರಿಂದ ಮನನೊಂದು ನಿವೇಶನಗಳನ್ನು ಮರಳಿ ನೀಡಲು ತೀರ್ಮಾನಿಸಿದ್ದಾರೆ ಎಂದು ತಿಳಿಸಿದರು.

ನಿನ್ನೆ ಇಡಿಯವರು ಇಸಿಐಆರ್ ಫೈಲ್ ಮಾಡಿದ್ದಾರೆ ಎಂಬ ಮಾಧ್ಯಮದವರ ಪ್ರಶ್ನೆಗೆ ಮುಖ್ಯಮಂತ್ರಿಯವರು ಕಾನೂನು ರೀತಿ ಯಾವೆಲ್ಲಾ ಕ್ರಮವಿದೆ ತೆಗೆದುಕೊಳ್ಳಲಿ ಎಂದರು.

ಜಮೀನಿನ ಬದಲಿಗೆ ನಿವೇಶನಗಳನ್ನು ಹಂಚಿಕೆ ಮಾಡಿರುವುದು ನನ್ನ ಪ್ರಕಾರ ಮನಿ ಲಾಂಡ್ರಿಂಗ್ ಆಗುವುದಿಲ್ಲ ಈ ಪ್ರಕರಣದಲ್ಲಿ ನನ್ನ ಪಾತ್ರವೇನು? ವಿರೋಧ ಪಕ್ಷದವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು ರಾಜಿನಾಮೆ ನೀಡುವುದರಿಂದ ಎಲ್ಲವೂ ಮುಗಿಯುತ್ತದೆಯೇ? ಅನಗತ್ಯವಾಗಿ ರಾಜಿನಾಮೆ ಕೇಳುತ್ತಿದ್ದಾರೆ ನನ್ನ ತಪ್ಪಿಲ್ಲ ಎಂದ ಮೇಲೆ ರಾಜಿನಾಮೆ ಯಾಕೆ ನೀಡಬೇಕು ಎಂದು ಮಾಧ್ಯಮದವರಿಗೆ ಉತ್ತರಿಸಿದರು.

ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ನವರ ಪ್ರಕರಣಕ್ಕೂ ಹಾಗೂ ನನ್ನ ಪ್ರಕರಣಕ್ಕೂ ವ್ಯತ್ಯಾಸವಿದೆ. ಇದರಲ್ಲಿ ನನ್ನ ಪಾತ್ರವಿಲ್ಲ ಯಡಿಯೂರಪ್ಪ ಡಿನೊಟಿಫೈ ಮಾಡಿದ್ದರು ನಾನು ಡಿನೋಟಿಫೈ ಮಾಡಿಲ್ಲ; ಮನಿ ಲಾಂಡ್ರಿಂಗ್ ಮಾಡಿಲ್ಲ ನಾನು ಅತ್ಮಸಾಕ್ಷಿಯಾಗಿ ಕೆಲಸ ಮಾಡುತ್ತೇನೆ ರಾಜಿನಾಮೆ ನೀಡುವ ಅಗತ್ಯವಿಲ್ಲ ಎಂದು ಹೇಳಿದರು.

# ಸಿಎಂ ವಿರುದ್ಧ ಮತ್ತೊಂದು ಗಂಭೀರ ಆರೋಪ ಮಾಡಿದ ಎಚ್‌ಡಿಕೆ

**ಈ ಆದೇಶವನ್ನು ಸಿದ್ದರಾಮಯ್ಯ ಹೈಕೋರ್ಟ್‌ನಲ್ಲಿ ಪ್ರಶ್ನೆ ಮಾಡಿದ್ದರು. ಹೈಕೋರ್ಟ್‌ನಲ್ಲಿ ಸಿದ್ದರಾಮಯ್ಯನವರಿಗೆ ರಿಲೀಫ್ ಸಿಕ್ಕಿತ್ತು. ಈ ರಿಲೀಫ್ ಕೊಟ್ಟವರು ನ್ಯಾ. ಮೈಕೆಲ್ ಡಿ ಕುನ್ಹಾ. ನ್ಯಾಯಮೂರ್ತಿಗಳ ಆದೇಶದ ಬಗ್ಗೆ ನಾನು ಏನು ಮಾತನಾಡುವುದಿಲ್ಲ. ಈ ನ್ಯಾಯಧೀಶರು ಈಗ ಕರ್ನಾಟಕದಲ್ಲಿನ ಕೋವಿಡ್ ಅಕ್ರಮದ ಬಗ್ಗೆ ತನಿಖೆ ನಡೆಸುತ್ತಿದ್ದಾರೆ ಎಂದು ತಿಳಿಸಿದರು.**

ನವದೆಹಲಿ: ಚುನಾವಣಾ ಸಾಲಕ್ಕಾಗಿ ಸೈಟು ಮಾರಾಟ ಮಾಡಿದ್ದರಲ್ಲ ಅದು ಎಲ್ಲಿಂದ ಬಂತು? ಇದು 14 ಸೈಟ್ ಪ್ರಕರಣಕ್ಕಿಂತ ದೊಡ್ಡ ಪ್ರಕರಣ ಎಂದು ಹೆಚ್‌ಡಿ ಕುಮಾರಸ್ವಾಮಿ ಸಿದ್ದರಾಮಯ್ಯ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.


ಭಾರತ ಸಾರಥಿ

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಮೈಸೂರಿನ ಹಿನಕಲ್ ಗ್ರಾಮ ಪಂಚಾಯತ್‌ನಲ್ಲಿ ಬಡವರ ಮಕ್ಕಳ ವಸತಿ ಶಾಲೆ ನಿರ್ಮಾಣಕ್ಕಾಗಿ ಭೂಮಿ ಡಿನೋಟಿಫಿಕೇಷನ್ ಮಾಡಿಸಿಕೊಂಡು ಅದನ್ನು ಸಿದ್ದರಾಮಯ್ಯ ಪಡೆದುಕೊಂಡಿದ್ದಾರೆ. ಈ ಪ್ರಕರಣದಲ್ಲಿ ಸಿದ್ದರಾಮಯ್ಯ ಮೊದಲ ಆರೋಪಿ. ಒಟ್ಟು 18 ಮಂದಿ ಆರೋಪಿಗಳಿದ್ದಾರೆ. ಕೆಳಹಂತದ ನ್ಯಾಯಾಲಯ ಸಿದ್ದರಾಮಯ್ಯ ವಿರುದ್ಧ ತೀರ್ಪು ನೀಡಿತ್ತು. ಅಷ್ಟೇ ಅಲ್ಲದೇ ತನಿಖೆ ನಡೆಸುವಂತೆ ಆದೇಶಿಸಿತ್ತು ಎಂದು ಹೇಳಿದರು.

ಈ ಆದೇಶವನ್ನು ಸಿದ್ದರಾಮಯ್ಯ ಹೈಕೋರ್ಟ್‌ನಲ್ಲಿ ಪ್ರಶ್ನೆ ಮಾಡಿದ್ದರು. ಹೈಕೋರ್ಟ್‌ನಲ್ಲಿ ಸಿದ್ದರಾಮಯ್ಯನವರಿಗೆ ರಿಲೀಫ್ ಸಿಕ್ಕಿತ್ತು. ಈ ರಿಲೀಫ್ ಕೊಟ್ಟವರು ನ್ಯಾ. ಮೈಕೆಲ್ ಡಿ ಕುನ್ಹಾ. ನ್ಯಾಯಮೂರ್ತಿಗಳ ಆದೇಶದ ಬಗ್ಗೆ ನಾನು ಏನು ಮಾತನಾಡುವುದಿಲ್ಲ. ಈ ನ್ಯಾಯಧೀಶರು ಈಗ ಕರ್ನಾಟಕದಲ್ಲಿನ ಕೋವಿಡ್ ಅಕ್ರಮದ ಬಗ್ಗೆ ತನಿಖೆ ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಈ ಪ್ರಕರಣ 14 ಸೈಟ್‌ಗಿಂತಲೂ ದೊಡ್ಡದು. ಊರಿಗೆ ಬುದ್ದಿ ಹೇಳುವವರು ಇಲ್ಲಿ ಏನೇನು ಮಾಡಿದ್ದೀರಿ. ಈಗ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಹೋಗಿ ಕುಂಕುಮ ಇಟ್ಟುಕೊಂಡು ರಕ್ಷಣೆ ಪಡೆಯುತ್ತಿದ್ದಾರೆ. ಇದರ ಜೊತೆಗೆ ಇನ್ನು ಎರಡು ಪ್ರಕರಣಗಳಿವೆ.

ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ದೂರುದಾರರು ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದಾರೆ. ಈ ಸಂದರ್ಭದಲ್ಲಿ ಅರ್ಜಿದಾರರ ಒಬ್ಬರು ವಕೀಲರು ಮೃತಪಟ್ಟರೆ ಇನ್ನೊಬ್ಬರು ಜಡ್ಜ್ ಆಗಿ ನೇಮಕವಾಗಿದ್ದಾರೆ. ಸದ್ಯ ಈ ಪ್ರಕರಣ ಸುಪ್ರೀಂಕೋರ್ಟ್‌ನಲ್ಲಿದೆ ಎಂದು ಹೇಳಿದರು.

ಕೃಷ್ಣ ಬೈರೇಗೌಡ ಮೇಧಾವಿಯಲ್ವ ಇದನ್ನು ಪರಿಶೀಲನೆ ಮಾಡಪ್ಪ. ನಾನು ಇಂತಹ ಕೆಲಸ ಮಾಡಿಲ್ಲ. ಸಮಸ್ಯೆ ಬಂದಿದ್ದಕ್ಕೆ ಚುನಾವಣಾ ಖರ್ಚಿನ ಹೆಸರಿನಲ್ಲಿ ಈ ಜಾಗವನ್ನು ಮಾರಾಟ ಮಾಡಿದ್ದಾರೆ. ತಾನೊಂದು ಬಗೆದರೆ ದೈವ ಮತ್ತೊಂದು ಬಗೆಯುವುದು. ಈಗ ಅಧಿಕಾರ ದುರ್ಬಳಕೆ ಮಾಡಿಕೊಂಡು ನಮ್ಮನ್ನು ಮುಗಿಸಲು ಬಂದಿದ್ದಾರೆ ಎಂದು ಕಿಡಿಕಾರಿದರು.

1988ರಲ್ಲಿ ಮುಡಾ ವಿಜಯನಗರ 2ನೇ ಹಂತದ ಬಡಾವಣೆ ನಿರ್ಮಾಣಕ್ಕೆ ಹಿನಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿದ್ದ 535 ಎಕರೆ ಪ್ರದೇಶವನ್ನು ವಶಪಡಿಸಿಕೊಂಡಿತ್ತು.

10 ವರ್ಷಗಳ ಬಳಿಕ ಬಡಾವಣೆ ರಚನೆಗೊಂಡು ನಿವೇಶನ ಹಂಚಿಕೆ ಮಾಡಿತ್ತು. ಈ ಹಂಚಿಕೆ ವೇಳೆ ಅಕ್ರಮ ನಡೆದ ವಿಚಾರವನ್ನು ಹೆಚ್‌ಡಿ ಕುಮಾರಸ್ವಾಮಿ ಇಂದಿನ ಸುದ್ದಿಗೋಷ್ಠಿಯಲ್ಲಿ ಪ್ರಸ್ತಾಪ ಮಾಡಿ ಸಿಎಂ ವಿರುದ್ಧ ಕಿಡಿಕಾರಿದ್ದಾರೆ.

# ಉಗ್ರನಿಂದ ಸ್ಫೋಟಕ ರಹಸ್ಯ ಬಹಿರಂಗ

ಬೆಂಗಳೂರು: ಅಸ್ಸಾಂ ಎನ್‌ಐಎ ಅಧಿಕಾರಿಗಳಿಂದ ಬೆಂಗಳೂರು ಗ್ರಾಮಾಂತರದ ಜಿಗಣಿಯಲ್ಲಿ ಬಂಧಿತನಾಗಿದ್ದ ಉಲ್ಫಾ ಉಗ್ರನಿಂದ ಸ್ಫೋಟಕ ರಹಸ್ಯವೊಂದು ಬಯಲಾಗಿದೆ. ಶಂಕಿತ ಉಗ್ರನ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿರುವ ಎನ್‌ಐಎ ಅಧಿಕಾರಿಗಳು ಮಂಗಳವಾರ ಅಸ್ಸಾಂನ ಉತ್ತರ ಲಖೀಂಪುರದಲ್ಲಿ ಜೀವಂತ ಐಇಡಿಗಳನ್ನ (ಸುಧಾರಿತ ಸ್ಫೋಟಕ ಸಾಧನ) ವಶಕ್ಕೆ ಪಡೆದಿದ್ದಾರೆ.

ಎನ್‌ಐಎ ಅಧಿಕಾರಿಗಳ ವಿಚಾರಣೆ ವೇಳೆ ಶಂಕಿತ ಉಗ್ರ ಗಿರಿಸ್ ಬೋರಾ ಅಲಿಯಾಸ್ ಗೌತಮ್,

**ಆಗಸ್ಟ್ 15ರಂದು ಸ್ಫೋಟಿಸಲು ಸಂಚು ರೂಪಿಸಲಾಗಿತ್ತು ಎಂದೂ ಸಹ ಒಪ್ಪಿಕೊಂಡಿದ್ದಾನೆ. ಶಂಕಿತ ಉಗ್ರನ ಮಾಹಿತಿ ಮೇರೆಗೆ ತನಿಖೆ ನಡೆಸಿದ ಎನ್‌ಐಎ ಅಧಿಕಾರಿಗಳು ಲಖೀಂಪುರ ಜಿಲ್ಲೆಯಲ್ಲಿ ಇಟ್ಟಿದ್ದ ಕೆಲವು ಜೀವಂತ ಐಇಡಿಗಳನ್ನ ವಶಕ್ಕೆ ಪಡೆದಿದ್ದಾರೆ. ಈ ಸಂಬಂಧ ತನಿಖೆಯನ್ನೂ ಮುಂದುವರಿಸಿದ್ದಾರೆ.**

ಅಸ್ಸಾಂನಲ್ಲಿ ಐಇಡಿ ಇಟ್ಟ ಸ್ಫೋಟಕ ವಿಚಾರ ಬಾಯ್ಬಿಟ್ಟಿದ್ದಾನೆ. ಅಲ್ಲದೇ ಉಲ್ಫಾ ಸಂಘಟನೆಯ ನಾಯಕರು ಹೇಳಿದಂತೆ ಐಇಡಿಗಳನ್ನ ಇಟ್ಟಿದ್ದೆ.

ಆಗಸ್ಟ್ 15ರಂದು ಸ್ಫೋಟಿಸಲು ಸಂಚು ರೂಪಿಸಲಾಗಿತ್ತು ಎಂದೂ ಸಹ ಒಪ್ಪಿಕೊಂಡಿದ್ದಾನೆ. ಶಂಕಿತ ಉಗ್ರನ ಮಾಹಿತಿ ಮೇರೆಗೆ ತನಿಖೆ ನಡೆಸಿದ ಎನ್‌ಐಎ ಅಧಿಕಾರಿಗಳು ಲಖೀಂಪುರ ಜಿಲ್ಲೆಯಲ್ಲಿ ಇಟ್ಟಿದ್ದ ಕೆಲವು ಜೀವಂತ ಐಇಡಿಗಳನ್ನ ವಶಕ್ಕೆ ಪಡೆದಿದ್ದಾರೆ. ಈ ಸಂಬಂಧ ತನಿಖೆಯನ್ನೂ ಮುಂದುವರಿಸಿದ್ದಾರೆ. ಪಾಕಿಸ್ತಾನಿ ನ್ಯಾಷನಲಾಟಿ ಗುಮಾನಿ ಮೇಲೆ ನಾಲ್ವರು ಪಾಕ್ ಪ್ರಜೆಗಳು






# ಮೂಡಾ ಸೈಟ್‌ಗಳ ಬಳಿ ಸ್ಥಳ ಮಹಜರು

ಮೈಸೂರು: ಸಿಎಂ ಹಾಗೂ ಪತ್ನಿ ಸೇರಿದಂತೆ ಇತರರ ವಿರುದ್ಧ ಲೋಕಾಯುಕ್ತದಲ್ಲಿ ದಾಖಲಾಗಿರುವ ಪ್ರಕರಣ ಮುಂದುವರೆದಿದ್ದು, ಮೂಲ ಜಮೀನು ಸ್ಥಳಕ್ಕೆ ದೂರುದಾರ ಸ್ನೇಹಮಯಿ ಕೃಷ್ಣ ಅವರನ್ನು ಲೋಕಾಯುಕ್ತ ಪೊಲೀಸರು ಕರೆದೊಯ್ದು ಮಹಜರು ನಡೆಸಿದರು. ಈ ವೇಳೆ ಕಂದಾಯ, ಸರ್ವೇ ಇಲಾಖೆಯ ಅಧಿಕಾರಿಗಳು ಹಾಜರಿದ್ದರು. ಈ ವೇಳೆ ಲೋಕಾಯುಕ್ತ ಪೊಲೀಸರು ಟೇಪ್ ಹಿಡಿದು ಅಳತೆ ಮಾಡಿ ತನಿಖೆ ಮಾಡಿದರು.


ಭಾರತ ಸಾರಥಿ

ಮುಡಾ ಪ್ರಕರಣ ಸಂಬಂಧ ವಿಚಾರಣೆಗೆ ಬರುವಂತೆ ಮೈಸೂರು ಲೋಕಾಯುಕ್ತ ಕರೆದ ಹಿನ್ನೆಲೆ ಬೆಳ್ಳಂಬೆಳಗ್ಗೆ 7.30ಕ್ಕೆ ದೂರುದಾರ ಸ್ನೇಹಮಯಿ ಕೃಷ್ಣ ಮೈಸೂರಿನ ಲೋಕಾಯುಕ್ತ ಕಚೇರಿಗೆ ಆಗಮಿಸಿದ್ದರು. ಬಳಿಕ ಲೋಕಾ ಪೊಲೀಸರು, ಸ್ನೇಹಮಯಿ ಕೃಷ್ಣ ಅವರನ್ನು ಮಹಜರು ಮಾಡಲು ಸ್ಥಳಕ್ಕೆ ಕರೆದೊಯ್ದರು.

ಈ ಬಗ್ಗೆ ದೂರವಾಣಿಯಲ್ಲಿ ಮಾಹಿತಿ ನೀಡಿದ ದೂರದಾರ ಸ್ನೇಹಮಯಿ ಕೃಷ್ಣ, ಲೋಕಾಯುಕ್ತ ಪೊಲೀಸರು ದೂರು ನೀಡಿರುವ ಸ್ಥಳದ ಮಾಹಿತಿ ನೀಡುವಂತೆ ಕರೆ ಮಾಡಿದ್ದರು. ಅದರಂತೆ ಇಂದು ಬೆಳಗ್ಗೆ ಲೋಕಾಯುಕ್ತ ಕಚೇರಿಗೆ ಆಗಮಿಸಿ, ಕೆಲವು ಮಾಹಿತಿಗಳನ್ನ ಲೋಕಾಯುಕ್ತರಿಗೆ ನೀಡಿದ್ದೇನೆ. ನಂತರ ಕೆಸರೆ ಗ್ರಾಮದ ಸರ್ವೆ ನಂಬರ್ 464 ರಲ್ಲಿ ಇರುವ 3 ಎಕರೆ 16 ಗುಂಟೆ ಜಮೀನಿನ ಮಹಜರಿಗೆ ಕರೆದೊಯ್ದರು. ಬಳಿಕ ಮಧ್ಯಾಹ್ನ ವಿಜಯನಗರದಲ್ಲಿ 14 ಬದಲಿ ನಿವೇಶನ ಪಡೆದ ಸ್ಥಳದ ಮಹಜರು ಮಾಡಲಿದ್ದಾರೆ. ಲೋಕಾಯುಕ್ತರಿಗೆ ತನಿಖೆಗೆ ಬೇಕಾದ ಎಲ್ಲಾ ರೀತಿಯ ಮಾಹಿತಿಯನ್ನ ನಾನು ನೀಡಲು ಸಿದ್ಧನಿದ್ದೇನೆ ಎಂದು ದೂರವಾಣಿಯಲ್ಲಿ ಮಾಧ್ಯಮಕ್ಕೆ ಸ್ನೇಹಮಯಿ ಕೃಷ್ಣ ಮಾಹಿತಿ ನೀಡಿದರು.

ಸ್ಥಳ ಮಹಜರು ಮುನ್ನ ಮಾತನಾಡಿದ್ದ ಸ್ನೇಹಮಯಿ ಕೃಷ್ಣ, "ದಾಖಲೆಗಳಿಗೆ ಸಂಬಂಧಿಸಿದ ಯಾವುದೇ ನೋಟಿಸ್ ಬಂದಿಲ್ಲ. ಆದರೆ, ವಿಚಾರಣೆಯಲ್ಲಿ ಯಾವುದೇ ದಾಖಲಾತಿ ಕೋರಿದ್ದರೆ ನಾನು ಕೊಡಲು ಸಿದ್ಧ.

ಮೊದಲು ದೂರು ನೀಡಿದ ಸಂದರ್ಭ ನೀಡಿದ ದಾಖಲಾತಿಗಳನ್ನು ಈಗಾಗಲೇ ಕೊಟ್ಟಿದ್ದೇನೆ. ಈಗ ಮತ್ತೆ ವಿಚಾರಣೆ ಸಂದರ್ಭದಲ್ಲಿ ದಾಖಲಾತಿಗಳನ್ನು ಕೇಳಿದರೆ ಕೊಡಲು ಸಿದ್ಧ. ಇದರ ಜೊತೆಗೆ ಮುಡಾದಲ್ಲಿ ನಡೆದ ಎಲ್ಲ ಅಕ್ರಮಗಳ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂಬುದು ನನ್ನ ಒತ್ತಾಯ" ಎಂದರು. ಇಡಿಯಲ್ಲಿ ಎಫ್‌ಐಆರ್ ದಾಖಲಾಗಿದೆ. ಸಿಎಂ ಪತ್ನಿ 14 ನಿವೇಶನಗಳನ್ನು ಹಿಂತಿರುಗಿಸುವುದಾಗಿ ಮುಡಾಗೆ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯಿಸಿ ಸ್ನೇಹಮಯಿ ಕೃಷ್ಣ, "ಯಾವುದೇ ಸಾಕ್ಷ್ಯಾಧಾರಗಳಿಲ್ಲದೇ ಸುಳ್ಳು ಆರೋಪ ಮಾಡುವುದಿಲ್ಲ. ಈವರೆಗಿನ ಎಲ್ಲಾ ಪ್ರಕರಣಗಳಲ್ಲೂ ಜಯಗಳಿಸಿದ್ದೇನೆ.

ಅದೇ ರೀತಿ ಇಲ್ಲೂ ಜಯ ಗಳಿಸುವ ವಿಶ್ವಾಸವಿದೆ. ನನ್ನ ಹೋರಾಟಕ್ಕೆ ಮೊದಲ ಜಯ ಸಿಕ್ಕಿದೆ" ಎಂದು ಹೇಳಿದರು.

## ವೈದ್ಯರಿಗೆ ತಾಯಿ ಹೃದಯ ಇರಬೇಕು: ಉಪಲೋಕಾಯುಕ್ತ



ಚಿಂತಾಮಣಿ

ನಗರದ ಸರ್ಕಾರಿ ಆಸ್ಪತ್ರೆಯ ಅವ್ಯವಸ್ಥೆಯನ್ನು ಕಣ್ಣಾರೆ ಕಂಡ ಉಪಲೋಕಾಯುಕ್ತ ವೀರಪ್ಪ ವೈದ್ಯರ ಮೇಲೆ ಗರಂ ಆದ ಘಟನೆ ನಡೆಯಿತು.

ನಗರದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ ಆಸ್ಪತ್ರೆಯ ಅವ್ಯವಸ್ಥೆಯನ್ನು ಕಂಡು ವೈದ್ಯರ ಮೇಲೆ ಗರಂ ಆಗಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಸ್ಪತ್ರೆಯಲ್ಲಿ ಶೌಚಾಲಯ ಸ್ವಚ್ಛತೆ ಇಲ್ಲ,ರೋಗಿಗಳು ಮಲಗುವಂತಹ ಹಾಸಿಗೆಗಳು ಹರಿದು ಹೋಗಿವೆ, ಮಾತ್ರೆಗಳಿಗೆ ಎಕ್ಸ್‌ಪೈರಿ ಡೇಟ್ ಆಗಲು ಇನ್ನೂ ಮೂರೆ ದಿನ ಇರುವಂತಹವುದಾಗಿದ್ದು, ಇಂತಹ ಅವ್ಯವಸ್ಥೆಗಳ ಅಗರವಾಗಿದ್ದು, ಇದಕ್ಕಿಂತ ಹೆಚ್ಚಾಗಿ ಚಿಕಿತ್ಸೆಗೆ ಬಂದವರಿಗೆ ಯಾವುದೇ ಕಾರಣಕ್ಕೂ ಹೊರಗೆ ಔಷಧಿ ತರುವಂತೆ ಚೀಟಿ ಬರೆದುಕೊಡಬಾರದೆಂದು ಎಚ್ಚರಿಸಿದರು.

ಸರ್ಕಾರದಿಂದ ಲಕ್ಷಾಂತರ ರೂಪಾಯಿ ಅನುದಾನ ಬರುತ್ತಿದೆ. ಈ ಹಣ ಎಲ್ಲಿ ಹೋಗುತ್ತಿದೆಯೆಂದು ಪ್ರಶ್ನಿಸಿದ ಅವರು ವೈದ್ಯರಿಗೆ ತಾಯಿ ಹೃದಯ ಇರಬೇಕೆಂದು ವೈದ್ಯರಿಗೆ ತರಾಟೆಗೆ ತೆಗೆದುಕೊಂಡರು.

ಮುಂದಿನ ತಿಂಗಳು ಮತ್ತೊಮ್ಮೆ ಇಲ್ಲಿಗೆ ಭೇಟಿ ನೀಡಲಿದ್ದು, ಅಷ್ಟರೊಳಗೆ ಅವ್ಯವಸ್ಥೆಗಳನ್ನು ಸರಿಪಡಿಸುವಂತೆ ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ಡಾ. ಸಂತೋಷ್ ಸೇರಿದಂತೆ ಆರೋಗ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ನಗರದಲ್ಲಿರುವ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಡಾ. ಬಿ.ಆರ್ ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ವರ್ಗೀಕೃತ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಕಳಪೆ ಗುಣಮಟ್ಟದ ಆಹಾರ ಸಾಮಗ್ರಿಗಳನ್ನು ಬಳಸುತ್ತಿರುವುದಕ್ಕೆ ಸಿಬ್ಬಂದಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

## ‘ರಾಜ್ಯ ಮಟ್ಟದ ಶಿಕ್ಷಕರ ಪ್ರಶಸ್ತಿ’





ಬೆಂಗಳೂರು

ರಾಜಾಜಿನಗರದ ಸೇಂಟ್ ಆನ್ಸ್ ಪ್ರೌಢ ಶಾಲೆಯಲ್ಲಿ ಚಿತ್ರಕಲಾ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಮುರಳಿಧರ ಕುಲಕರ್ಣಿ ‘ರಾಜ್ಯ ಮಟ್ಟದ ಶಿಕ್ಷಕರ ಪ್ರಶಸ್ತಿ’ ಲಭಿಸಿದೆ.

ಇತ್ತೀಚೆಗೆ ನಗರದ ಪುರಭವನನಲ್ಲಿ ನಡೆದ ಕಾರ್ಯಕ್ರಮದಲ್ಲಿ ಜನಸಿರಿ ಫೌಂಡೇಷನ್ ವತಿಯಿಂದ ರಾಜ್ಯ ಮಟ್ಟದ ಶಿಕ್ಷಕರ ಹಬ್ಬ– 2024ನೇ ಸಾಲಿನ ಕೊಡ ಮಾಡುವ ರಾಜ್ಯ ಮಟ್ಟದ ಶಿಕ್ಷಕರ ಪ್ರಶಸ್ತಿಯನ್ನು ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿದ ಶ್ರೀ ಡಾ. ಅರೂಢ ಭಾರತಿ ಸ್ವಾಮೀಜಿರವರು ಸಿದ್ದಾರೂಢ ಮಿಷನ್ ಆಶ್ರಮ ರಾಮೋಹಳ್ಳಿ ಬೆಂಗಳೂರು ಶ್ರೀಶ್ರೀಶ್ರೀ ತಪೋನಿಧಿ ಮುತ್ತೇಶ್ವರ ಮಹಾಸ್ವಾಮಿಗಳು, ಸಂಸ್ಕೃತ ವಿದ್ವಾಂಸರು ಬೆಂಗಳೂರು ಉದ್ಘಾಟಿಸಿ, ವಿಧಾನ ಪರಿಷತ್ ಸದಸ್ಯ ಸುಧಾಂ ದಾಸ, ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್, ಖ್ಯಾತ ಚಲನ ಚಿತ್ರ ನಟ ಆನೇಕಲ್ ಗಣೇಶ್, ಡಿವೈಎಸ್‌ಪಿ ಪೋಲೀಸ್ ಇಲಾಖೆ ಮಹಾನಂದ್, ತಿಲಕ ನಗರ ಸರ್ಕಲ್ ಇನ್ಸ್‌ಪೆಕ್ಟರ್ ವಿಶ್ವನಾಥ್ ಹಾಗೂ ಜನಸಿರಿ ತಂಡದ ನಾಗಲೇಖ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದ ವೇದಿಕೆಯಲ್ಲಿ ಮುರಳಿಧರ ಕುಲಕರ್ಣಿ ಅವರ ಸೇವೆಯನ್ನು ಪರಿಗಣಿಸಿ ರಾಜ್ಯ ಮಟ್ಟದ ಶಿಕ್ಷಕರ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ಕಾಂಗ್ರೆಸ್ ಮುಕ್ತ ಕರ್ನಾಟಕ: ಬಿಜೆಪಿ-ಜೆಡಿಎಸ್ ಹುನ್ನಾರ




ತುಮಕೂರು

ಅಪ್ಪಟ ರಾಜಕಾರಣಿ ಸಿದ್ದರಾಮಯ್ಯ ಅವರ ತೇಜೋವಧೆ ಮಾಡುವ ಮೂಲಕ, ಕಾಂಗ್ರೆಸ್ ಮುಕ್ತ ಕರ್ನಾಟಕ ಮಾಡುವ ಬಿಜೆಪಿ–ಜೆಡಿಎಸ್ ಹುನ್ನಾರ ಕೈಗೂಡಲು ಅಹಿಂದ ಮುಖಂಡರು ಎಂದಿಗೂ ಅವಕಾಶ ನೀಡುವುದಿಲ್ಲ. ಯಾವ ಹಂತದ ಹೋರಾಟಕ್ಕೂ ಸಿದ್ದ ಎಂದು ಕಾಂಗ್ರೆಸ್ ಮುಖಂಡ ಕೆಂಚಮಾರಯ್ಯ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿ ಅವರು, ತಮ್ಮ 45 ವರ್ಷಗಳ ರಾಜಕೀಯ ಜೀವನದಲ್ಲಿ ಕಳಂಕ ರಹಿತ ಅಧಿಕಾರ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ಮುಡಾ ಹಗರಣದ ಕಪ್ಪು ಚುಕ್ಕೆ ಇಟ್ಟು ರಾಜಕೀಯ ಜೀವನಕ್ಕೆ ಇತೀಶ್ರೀ ಹಾಡಲು ಹೊರಟಿರುವ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಹುನ್ನಾರ ಕೈಗೂಡುವುದಕ್ಕೆ ಎಂದಿಗೂ ಅವಕಾಶ ನೀಡುವುದಿಲ್ಲ. ಜೆಡಿಎಸ್–ಬಿಜೆಪಿ ಪದೇ ಪದೇ ಮುಖ್ಯಮಂತ್ರಿಗಳ ರಾಜೀನಾಮೆಗೆ ಒತ್ತಾಯಿಸಿದರೆ ಸಮಸ್ತ ಅಹಿಂದ ವರ್ಗ ಬೀದಿ ಗಿಳಿದು ಹೋರಾಟ ನಡೆಸಲಿದೆ ಎಂದರು.

ಗೊಲ್ಲಸಮುದಾಯದ ಚಿಕ್ಕರಾಜು ಮಾತನಾಡಿ,ತಮ್ಮ ಇಡೀ ರಾಜಕೀಯ ಜೀವನದಲ್ಲಿ ಕಿಚನ್ ಕ್ಯಾಬಿನೇಟ್‌ಗೆ ಅವಕಾಶ ನೀಡದೆ, ಸಾರ್ವಜನಿಕವಾಗಿ ಕುಟುಂಬಸ್ಥರು ಅಧಿಕಾರದಲ್ಲಿ ಮೂಗು ತೂರಿಸಿದಂತೆ ನೋಡಿಕೊಂಡು ಕ್ಲೀನ್ ಇಮೇಜ್ ಹೊಂದಿದ್ದ ಸಿದ್ದರಾಮಯ್ಯ ಅವರ ಮೇಲೆ ರಾಜಕೀಯ ದ್ವೇಷದಿಂದ ಮುಡಾ ಹಗರಣವನ್ನು ಮುಂದು ಮಾಡಿ, ರಾಜಕೀಯವಾಗಿ ಮುಗಿಸಲು ಬಿಜೆಪಿ,ಜೆಡಿಎಸ್ ಮುಂದಾಗಿವೆ. ಬಡವರಿಗೆ,ದೀನ ದಲಿತರಿಗೆ ,ಹಿಂದುಳಿದ ಸಮುದಾಯಗಳ ಜನರಿಗೆ ಶಕ್ತಿ ತುಂಬುವ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದ ಪರಿಣಾಮ ಸಿದ್ದರಾಮಯ್ಯ ಅವರ ಜನಪ್ರಿಯತೆಯನ್ನು ಸಹಿಸದೆ ಇಂತಹ ದುಷ್ಕೃತ್ಯಕ್ಕೆ ಕೈ ಹಾಕಿವೆ. ಕಾನೂನು ಹೋರಾಟದ ಜೊತೆ ಜೊತೆಗೆ, ಸಿದ್ದರಾಮಯ್ಯ ಅವರಿಗೆ ನೈತಿಕವಾಗಿ ಬಲ ತುಂಬುವ ಕೆಲಸವನ್ನು ನಾಡಿನ ಎಲ್ಲಾ ಶೋಷಿತ ಸಮುದಾಯಗಳು ಒಗ್ಗೂಡಿ ಮಾಡಲಿವೆ ಎಂದರು.

ಸುದ್ದಿಗೋಷ್ಠಿಯಲ್ಲಿ ಹಿಂದುಳಿದ ವರ್ಗಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಕೆಂಪರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೆಬ್ಬೂರು ಶ್ರೀನಿವಾಸಮೂರ್ತಿ, ಕುಮಾರಸ್ವಾಮಿ, ಗೊಲ್ಲ ಸಮಾಜದ ಮುಖಂಡರಾದ ಚಿಕ್ಕರಾಜು,ದಲಿತ ಮುಖಂಡರಾದ ನರಸೀಯಪ್ಪ, ತಿಗಳ ಸಮುದಾಯದ ಮುಖಂಡರಾದ ರೇವಣಸಿದ್ದಯ್ಯ, ಉದ್ದಿಮೆದಾರರ ಡಿ.ಕೆ. ವೆಂಕಟೇಶ್, ನಿವೃತ್ತ ಅಧಿಕಾರಿ ಡಾ.ವೈ.ಕೆ. ಬಾಲಕೃಷ್ಣಪ್ಪ, ಡ್ಯಾಗೇರಹಳ್ಳಿ ವಿರೂಪಾಕ್ಷ, ವಕೀಲರಾದ ಸುನಿಲ್, ಕೆಂಪಣ್ಣ,ಜಯಮೂರ್ತಿ ಉಪಸ್ಥಿತರಿದ್ದರು.

## ಸ್ವಚ್ಛತಾ ಕಾರ್ಯ ಪ್ರತಿನಿತ್ಯ ಜರುಗಲಿ: ನ್ಯಾ.ಹರೀಶ್

ಗುಡಿಬಂಡೆ

ಸ್ವಚ್ಛತೆ ಎಂಬುದು ಒಂದು ದಿನಕ್ಕೆ ಸೀಮಿತವಾಗಬಾರದು, ಬದಲಿಗೆ ಪ್ರತಿನಿತ್ಯ ಅದು ನಡೆಯುತ್ತಿರಬೇಕು ಆಗ ಮಾತ್ರ ನಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಳ್ಳಬಹುದು, ಜೊತೆಗೆ ನಾವೂ ಸಹ ಆರೋಗ್ಯಕರವಾದ ಜೀವನ ಸಾಗಿಸಬಹುದು ಎಂದು ಸಿವಿಲ್ ಮತ್ತು ಜೆಎಂಎಫ್.ಸಿ ನ್ಯಾಯಾಧೀಶರಾದ ಕೆ.ಎಂ.ಹರೀಶ್ ಸಲಹೆ ನೀಡಿದರು.

ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕಾಪಾಡುವಲ್ಲಿ, ತ್ಯಾಜ್ಯವನ್ನು ಸಂಗ್ರಹಿಸಿ ವಿಲೇವಾರಿ ಮಾಡುವಲ್ಲಿ ಪೌರ ಕಾರ್ಮಿಕರ ಕಾರ್ಯ ಮೆಚ್ಚುವಂಥದ್ದು, ಹಸಿ ಕಸ, ಒಣ ಕಸ ಹಾಗೂ ಇತರೆ ತ್ಯಾಜ್ಯವನ್ನು ಬೇರ್ಪಡಿಸುವ ಮೂಲಕ, ಸ್ಥಳೀಯ ಕಸ ಸಂಗ್ರಹ ವಾಹನಗಳಿಗೆ ನೀಡುವ ಮೂಲಕ ಸ್ವಚ್ಛತಾ ಕಾರ್ಯದಲ್ಲಿ ನಮ್ಮನ್ನು ನಾವು ತೊಡಗಿಸಿಕೊಳ್ಳಬೇಕು. ಅವರ ಸೇವೆಯನ್ನು ಯಾರು ಮರೆಯಬಾರದು ಅವರನ್ನು ನಿರ್ಲಕ್ಷ್ಯ ಮಾಡದೇ ಅವರ ಕಾರ್ಯಕ್ಕೆ ಸಾಥ್ ನೀಡಬೇಕೆಂದು ಮನವಿ ಮಾಡಿದರು.

ಬಳಿಕ ವಕೀಲರ ಸಂಘದ ಅಧ್ಯಕ್ಷ ಎ. ರಾಮನಾಥ್ ರೆಡ್ಡಿ ಮಾತನಾಡಿದರು.

ಈ ಸಂದರ್ಭದಲ್ಲಿ ನ್ಯಾಯಧೀಶರು ಸ್ವಚ್ಛತೆ ಕಾಪಾಡುವ ಬಗ್ಗೆ ಪ್ರತಿಜ್ಞೆ ಬೋಧಿಸಿದರು. ಈ ಮೂಲಕ ಸ್ವಚ್ಛ ಭಾರತ್ ಮಿಷನ್ ಅನ್ನು ಯಶಸ್ವಿಗೊಳಿಸಲು ಕೈ ಜೋಡಿಸುವಂತೆ ಮನವಿ ಮಾಡಿದರು.

ಈ ವೇಳೆ ಪ.ಪಂ. ಮುಖ್ಯಾಧಿಕಾರಿ ಶ್ರೀನಿವಾಸ್, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಎ.ರವೀಂದ್ರ, ವಕೀಲರ ಸಂಘದ ಉಪಾಧ್ಯಕ್ಷ ನಂದೀಶ್ವರ ರೆಡ್ಡಿ, ವಕೀಲ ಬಾಬಾಜಾನ್, ವಕೀಲರಾದ ಟಿ.ಸಿ. ಅಶ್ವತ್ಥರೆಡ್ಡಿ, ಬಾಬಾಜಾನ್, ನ್ಯಾಯಾಲಯದ ಶಿರಸ್ತೇದಾರ್ ನಟರಾಜ್, ಸತೀಶ್, ಹಿರಿಯ ಉಪನ್ಯಾಸಕ ಆರ್.ಜಿ.ಸೋಮಶೇಖರ್, ನ್ಯಾಯಾಲಯದ ಸಿಬ್ಬಂದಿ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಪೌರ ಕಾರ್ಮಿಕರು ಹಾಜರಿದ್ದರು.

## ಸ್ವಚ್ಛತಾ ಆಂದೋಲನಾ ಕಾರ್ಯಕ್ರಮ

ಚಿಕ್ಕಬಳ್ಳಾಪುರ

ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಪ್ರಯುಕ್ತ ಹಸಿರು–ಸ್ವಚ್ಛ ಚಿಕ್ಕಬಳ್ಳಾಪುರ ಮತ್ತು ಪ್ಲಾಸ್ಟಿಕ್ ಮುಕ್ತ ಚಿಕ್ಕಬಳ್ಳಾಪುರಕ್ಕೆ ಜಿಲ್ಲಾಡಳಿತ ಸಂಕಲ್ಪ ಮಾಡಿದ್ದು, ಜಿಲ್ಲೆಯ ನಾಗರಿಕರು ಮತ್ತು ಪ್ರವಾಸಿಗರು ಸಹಕರಿಸಬೇಕು ಎಂದು ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಬಿ.ಟಿ ಯಶ್ವಂತ್ ಕುಮಾರ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರವಾಸೋದ್ಯಮ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಚಿಕ್ಕಬಳ್ಳಾಪುರ ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಪ್ರಯುಕ್ತ ನಂದಿಗಿರಿಧಾಮದಲ್ಲಿ ಸ್ವಚ್ಛತಾ ಆಂದೋಲನಾ ಕಾರ್ಯಕ್ರಮವನ್ನು ಸ್ವಚ್ಛತಾ ಕಾರ್ಯ ಮಾಡುವ ಮೂಲಕ ಚಾಲನೆ ನೀಡಿದರು.

ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಅಂಗವಾಗಿ ಪ್ರವಾಸಿಗರಿಗೆ ನಂದಿ ಗಿರಿಧಾಮದಲ್ಲಿ ಸ್ವಚ್ಛತೆ ಕುರಿತು ಅರಿವು ಮೂಡಿಸುವ ಉದ್ದೇಶದೊಂದಿಗೆ “ಸ್ವಚ್ಛತಾ ಹೀ ಸೇವಾ ಪಾಕ್ಷಿಕ–2024” ಕಾರ್ಯಕ್ರಮ ಆಚರಿಸಿದ್ದೇವೆ. ಪ್ರವಾಸಿಗರು ಪ್ರವಾಸಿ ತಾಣಗಳಿಗೆ ಬರುವಾಗ ಪ್ರವಾಸಿ ತಾಣಗಳ ನಿಯಮಗಳು ಹಾಗೂ ನಿಬಂಧನೆಗಳನ್ನು ಪಾಲಿಸಬೇಕು. ಪ್ಲಾಸ್ಟಿಕ್ ಯುಕ್ತ ವಸ್ತುಗಳನ್ನು ಬಳಸಬಾರದು, ರಾಜ್ಯದಲ್ಲಿ ನಂದಿ ಗಿರಿಧಾಮವು ಒಂದು ಪ್ರಮುಖ ಪ್ರವಾಸಿ ತಾಣವಾಗಿದೆ. ಪ್ರವಾಸಿಗರು ಯಾವುದೇ ಅವಗಢಗಳಿಗೆ ಅವಕಾಶ ನೀಡದೆ ವೀಕ್ಷಣಾ ಕಾರ್ಯಗಳಲ್ಲಿ ಜಾಗ್ರತೆ ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಈಶ್ವರಪ್ಪ ಮಾತನಾಡಿದರು.

ಈ ವೇಳೆ ಕಲಾತಂಡಗಳು ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವ ಕಲೆಗಳನ್ನು ಪ್ರದರ್ಶಿಸಿದರು. ವಿಶ್ವ ಪ್ರವಾಸೋದ್ಯಮ ದಿನಾಚರಣೆ ಘೋಷ ವಾಕ್ಯವಾದ ಪ್ರವಾಸೋದ್ಯಮ ಮತ್ತು ಶಾಂತಿಯ ಬಗ್ಗೆ ಅಧಿಕಾರಿಗಳು ತಿಳಿಸಿಕೊಟ್ಟು ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಪ್ರಯುಕ್ತ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಕುಮಾರ್, ಪೌರಾಯುಕ್ತರು, ಪ್ರವಾಸಿಗರು, ಬಿ.ಜಿ.ಎಸ್ ಪಿಯು ಕಾಲೇಜ್‌ನ ವಿದ್ಯಾರ್ಥಿಗಳು, ಪ್ರವಾಸಿಗರು ಹಾಗೂ ಸಾರ್ವಜನಿಕರು ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

## ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಅನಿರ್ದಿಷ್ಟಾವಧಿ ಮುಷ್ಕರ



ದೇವನಹಳ್ಳಿ

ಪಟ್ಟಣದ ಆಡಳಿತಸೌಧದ ಮುಂಭಾಗದಲ್ಲಿರುವ ಬಾಬಾ ಸಾಹೇಬ್ ಡಾ. ಅಂಬೇಡ್ಕರ್ ಮೂರ್ತಿಯ ಮುಂದೆ ತಾಲೂಕು ಕಂದಾಯ ಇಲಾಖೆಯ ಅಧಿಕಾರಿಗಳು ರಾಜ್ಯ ಸಂಘದ ಕಾರ್ಯಕಾರಿಣಿ ಸಭೆಯ ನಿರ್ಣಯದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸಿದರು.

ಕಂದಾಯ ನೌಕರರ ಸಂಘದ ತಾಲೂಕು ಅಧ್ಯಕ್ಷ ಎಸ್.ವಿ.ಶ್ರೀನಿವಾಸ್ ಮಾತನಾಡಿ, ತಾಲೂಕು ಮಟ್ಟದಲ್ಲಿ ಮೌನ ಪ್ರತಿಭಟನೆಯ ಮೂಲಕ ಗ್ರಾಮ ಆಡಳಿತ ಅಧಿಕಾರಿಗಳ ನಾನಾ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಅನಿರ್ದಿಷ್ಟಾವಧಿ ಮುಷ್ಕರವನ್ನು ಮಾಡಲಾಗುತ್ತಿದೆ. ಕಾರಣ ತಾಂತ್ರಿಕ ಯೋಜನೆಗಳ ಮೂಲಕ ಅಧಿಕಾರಿಗಳ ಮೇಲೆ ಒತ್ತಡ ಹೆಚ್ಚುತ್ತಿದೆ, ತಾಂತ್ರಿಕ ಕೆಲಸಗಳಿಗೆ ಅವಶ್ಯಕವಾದ ಸೂಕ್ತ ತರಬೇತಿ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ಬೆಳೆ ಸಮೀಕ್ಷೆ, ಕೃಷಿ ಗಣತಿ, ನೀರಾವರಿ ಗಣತಿ, ದಿಶಾಂಕ್, ವೋಟರ್ ಹೆಲ್ಪ್‌ಲೈನ್, ಪೌತಿ ಆಂದೋಲನ ಆ್ಯಪ್, ಸಿ–ವಿಜಿಲ್ ಆ್ಯಪ್, ಇ–ಆಫೀಸ್, ಹಕ್ಕುಪತ್ರ, ಆಧಾರ್ ಸೀಡ್ ಸೇರಿದಂತೆ ಇನ್ನಿತರೆ ಸೇವೆಗಳನ್ನು ಸ್ಥಗಿತಗೊಳಿಸಿ ರಾಜ್ಯದ ಎಲ್ಲ ತಾಲೂಕು ಕಚೇರಿಗಳ ಮುಂದೆ ಮುಷ್ಕರ ಹೂಡಲು ತೀರ್ಮಾನಿಸಿದ್ದಾರೆ ಎಂದರು. ಉಪಾಧ್ಯಕ್ಷೆ ಗ್ರಾಮ ಲೆಕ್ಕಾಧಿಕಾರಿ ಶೈಲಜಾ ಮಾತನಾಡಿದರು. ಇದೇ ಸಂದರ್ಭದಲ್ಲಿ ಆರ್‌ಹೆಚ್‌ಐ ಗಂಗಾಧರ್ ಕಂದಾಯ ನೌಕರರ ಸಂಘದ ಜಿಲ್ಲಾಧ್ಯಕ್ಷ ಸುದೀಪ್ ಮಹೇಶ್ ಚೈತ್ರ ಸೇರಿದಂತೆ ಹಲವು ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಭಗವಾನ್ ಬ್ರಾಹ್ಮಣ ವಿರೋಧಿ ಹೇಳಿಕೆಗೆ ರಾಘವೇಂದ್ರ ಮಯ್ಯ ಖಂಡನೆ



ಬೆಂಗಳೂರು

ಮೈಸೂರಿನಲ್ಲಿ ಮಹಿಷ ದಸರಾ ಸಂದರ್ಭದಲ್ಲಿ ಮಾತನಾಡಿದ ಪ್ರೊಫೆಸರ್ ಭಗವಾನ್ ಬ್ರಾಹ್ಮಣರು ಕಲಿಯುಗದ ರಾಕ್ಷಸರು ಎಂದು ಸ್ವಾಮಿ ವಿವೇಕಾನಂದರು ಹೇಳಿದ್ದಾರೆ ಎಂದಿದ್ದು, ಈ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿದ ಅಖಿಲ ಕರ್ನಾಟಕ ಬ್ರಾಹ್ಮಣ ರಾಜಕೀಯ ವೇದಿಕೆಯ ರಾಜ್ಯಾಧ್ಯಕ್ಷ ರಾಘವೇಂದ್ರಮಯ್ಯ, ಬ್ರಾಹ್ಮಣರನ್ನ ನಿಂದಿಸುವ ಭರದಲ್ಲಿ ಸ್ವಾಮಿ ವಿವೇಕಾನಂದರ ಹೆಸರನ್ನು ಯಾಕೆ ಹೇಳುತ್ತೀರಾ, ಸ್ವಾಮಿ ವಿವೇಕಾನಂದರು ಎಂದಿಗೂ ಯಾವ ಜಾತಿಯ ವಿರುದ್ಧ ಮಾತನಾಡಿಲ್ಲ. ಅಮೆರಿಕದಲ್ಲೂ ಸಹ ಅಕ್ಕ ತಂಗಿಯರೇ, ಅಣ್ಣ ತಮ್ಮಂದಿರೇ ಎಂದು ತಮ್ಮ ಭಾಷಣವನ್ನು ಶುರು ಮಾಡಿದ್ದರು ಇಂತಹ ಮಹಾನ್ ವ್ಯಕ್ತಿಯ ವಿರುದ್ಧ ಒಂದು ಜಾತಿ ನಿಂದಿಸಿರುವ ಅಪಚಾರ ಸೃಷ್ಟಿಸುವ ಕೆಲಸ ಮಾಡಬಾರದು ಎಂದು ಹೇಳಿದ್ದಾರೆ.

ಭಗವಾನ್, ಬ್ರಾಹ್ಮಣರು ತಮ್ಮನ್ನು ಹೊರತು ಪಡಿಸಿ ಇತರರನ್ನು ಸೇವೆಗೆ ಇರುವ ಶೂದ್ರರು ಎಂದು ಕರೆದಿದ್ದಾರೆ ಮತ್ತು ಅವರನ್ನು ಗುಲಾಮರನ್ನಾಗಿರಿಸಿಕೊಂಡಿದ್ದಾರೆ ಮತ್ತು ಬುದ್ಧನ ಆರಾಧಕರನ್ನು ರಾಕ್ಷಸರು ಎಂದಿದ್ದಾರೆ ಇದಕ್ಕೂ ಸಹ ಆಕ್ಷೇಪ ವ್ಯಕ್ತಪಡಿಸಿದ ರಾಘವೇಂದ್ರಮಯ್ಯ, ಶ್ರೇಷ್ಠತೆಯನ್ನು ಗುರುತಿಸುವ ಕೆಲಸ ಬ್ರಾಹ್ಮಣ್ಯ ಮಾಡುತ್ತದೆ.

ಬುದ್ಧನ ಸಾಮ್ರಾಜ್ಯ ಸ್ಥಾಪಿಸಲು ಕಾರಣಕರ್ತರಾದ ಸಾಮ್ರಾಟ್ ಅಶೋಕನ ತಾತ ಚಂದ್ರಗುಪ್ತ ಮೌರ್ಯರನ್ನು ಸಾಮ್ರಾಟನಾಗಿರಿಸಿದ್ದು ಚಾಣಕ್ಯ ಒಬ್ಬ ಬ್ರಾಹ್ಮಣ, ಬ್ರಾಹ್ಮಣ ಸಮಾಜಕ್ಕೆ ಸೇರಿದ್ದ ಎಷ್ಟೋ ಪ್ರೊಫೆಸರ್‌ಗಳು ತಮ್ಮ ಸ್ವಂತ ಸಂಬಳದಿಂದ ಹತ್ತಾರು ಮಕ್ಕಳ ಜೀವನವನ್ನು ಕಟ್ಟಿದ್ದಾರೆ. ನಿಮ್ಮ ಸಂಬಳದಿಂದ ಎಷ್ಟು ಜನಕ್ಕೆ ಉಪಯೋಗವಾಗಿದೆ? ತಿಳಿಸಿ ಎಂದು ಸವಾಲ್ ಎಸೆದಿದ್ದಾರೆ.

ಇದೇ ರೀತಿ ಬ್ರಾಹ್ಮಣರ ವಿರುದ್ಧ ಮಾತನಾಡಿದರೆ ನಿಮ್ಮ ಮನೆ ಮುಂದೆ ಪ್ರತಿಭಟನೆ ನಡೆಸಬೇಕಾದೀತು ಎಂಬ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಅರ್ಚಕ ಮತ್ತು ಪುರೋಹಿತ ಪರಿಷತ್ತಿನ ಉಪಾಧ್ಯಕ್ಷರಾದ ಸ್ವಾಮಿನಾಥ್ ಚರ್ಮ ಮತ್ತು ಧೀರೇಂದ್ರ ಹಾಜರಿದ್ದರು.



ಬೆಂಗಳೂರಿನಲ್ಲಿ ಸೋಮವಾರ ಗ್ರಾಮ ಪಂಚಾಯತಿಗಳಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಬಳಸುತ್ತಿರುವ ಪಂಚತಂತ್ರ ಆಪ್ ಸೌಲಭ್ಯವನ್ನು ಮತ್ತಷ್ಟು ಜನಸ್ನೇಹಿಯಾಗಿ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಗೃಹ ಸಚಿವ ಡಾ.ಡಿ. ಕೆ.ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಧಿಕಾರಿಗಳು ಹಾಗೂ ಪರಣಿತರ ಸಭೆ ನಡೆಸಿದರು.

# ಸ್ಥನ ಕ್ಯಾನ್ಸರ್ ಜಾಗೃತಿಗಾಗಿ ಬೃಹತ್ ಯಶಸ್ವಿ ಪಿಂಕ್ ರನ್






ಹೈದರಾಬಾದ್

ರತದಲ್ಲಿ ಸ್ತನ ಕ್ಯಾನ್ಸರ್ ಹೆಚ್ಚುತ್ತಿರುವ ಬಗ್ಗೆ ಜಾಗೃತಿ ಮೂಡಿಸಲು, ಎಂಇಐಎಲ್ ಮೇಘಾ ಎಂಜಿನಿಯರಿಂಗ್ ಮತ್ತು ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ ಮತ್ತು ಸುಧಾ ರೆಡ್ಡಿ ಫೌಂಡೇಶನ್ಸ್ ಭಾನುವಾರ ಇಲ್ಲಿನ ಗಚಿಬೌಲಿ ಕ್ರೀಡಾಂಗಣದಲ್ಲಿ ಬೃಹತ್ ಪಿಂಕ್ ಪವರ್ ರನ್–2024 ಮ್ಯಾರಥಾನ್ ಆಯೋಜಿಸಿತ್ತು.

ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ, ಸ್ತನ ಕ್ಯಾನ್ಸರ್ ವಿರುದ್ಧದ ಹೋರಾಟದಲ್ಲಿ ಆರೋಗ್ಯ ಮತ್ತು ಆರಂಭಿಕ ಪತ್ತೆಯ ಮಹತ್ವವನ್ನು ಒತ್ತಿ ಹೇಳಿದರಲ್ಲದೆ. ಮ್ಯಾರಥಾನ್ ಓಟಗಾರರನ್ನು ತಮ್ಮ ಸ್ಫೂರ್ತಿದಾಯಕ ಮಾತುಗಳಿಂದ ಪ್ರೋತ್ಸಾಹಿಸಿದರು, ರಾಜ್ಯದ ಆರೋಗ್ಯ ಮೂಲ ಸೌಕರ್ಯವನ್ನು ಸುಧಾರಿಸುವ ಸರ್ಕಾರದ ಬದ್ಧತೆಯನ್ನು ಒತ್ತಿ ಹೇಳಿದರು.

ಕುಟುಂಬಗಳು ಮತ್ತು ಸಮುದಾಯಗಳ ಯೋಗ ಕ್ಷೇಮದ ಅಡಿಪಾಯವಾಗಿರುವ ಮಹಿಳೆಯರ ಆರೋಗ್ಯವನ್ನು ಪೂರೈಸಲು ಆಸ್ಪತ್ರೆಗಳು ಮತ್ತು ಆರೋಗ್ಯ ಸೌಲಭ್ಯಗಳನ್ನು ಬಲಪಡಿಸುವ ಭರವಸೆ ನೀಡಿದರು. ಪಿಂಕ್ ಪವರ್ ರನ್ ಕಾರ್ಯಕ್ರಮವು ತೆಲಂಗಾಣದ ಮಹಿಳೆಯರಿಗೆ ಆರೋಗ್ಯಕರ, ಹೆಚ್ಚು ಸಶಕ್ತ ಭವಿಷ್ಯದ ಆರಂಭವನ್ನು ಸೂಚಿಸುತ್ತದೆ ಎಂದು ಅವರು ಹೇಳಿದರು.

ಈ ಕಾರ್ಯಕ್ರಮವನ್ನು ಆಯೋಜಿಸಿದ್ದಕ್ಕಾಗಿ ಮೇಘಾ ಕೃಷ್ಣ ರೆಡ್ಡಿ, ಸುಧಾ ರೆಡ್ಡಿ ಮತ್ತು ಭಾಗವಹಿಸಿದ ಎಲ್ಲರನ್ನೂ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅಭಿನಂದಿಸಿದರು.

ಈ ಬೃಹತ್ ಮ್ಯಾರಥಾನ್ ಸ್ತನ ಕ್ಯಾನ್ಸರ್ ಬಗ್ಗೆ ಇರುವ ಕಟ್ಟು ಕಥೆಗಳನ್ನು ತೊಡೆದುಹಾಕಲು, ಆರಂಭಿಕ ಪತ್ತೆ ಮತ್ತು ಚಿಕಿತ್ಸೆಯ ಉಪಕ್ರಮಗಳನ್ನು ಉತ್ತೇಜಿಸಲು ಮತ್ತು ಅದಮ್ಯ ಮಾನವ ಮನೋಭಾವವನ್ನು ಆಚರಿಸಲು ಎಲ್ಲಾ ವರ್ಗದ ಸಾವಿರಾರು ವ್ಯಕ್ತಿಗಳನ್ನು ಒಟ್ಟುಗೂಡಿಸಿತು.

ಪಿಂಕ್ ಪವರ್ ರನ್ 3 ಕಿ. ಮೀ., 5 ಕಿ. ಮೀ. ಮತ್ತು 10 ಕಿ. ಮೀ. ಓಟದ ವಿಭಾಗಗಳನ್ನು ಒಳಗೊಂಡಿತ್ತು, ಕ್ಯಾನ್ಸರ್ ವಿರುದ್ಧ ಹೋರಾಡಲು ಬದ್ಧರಾಗಿರುವ ಗಮನಾರ್ಹ ಸಂಖ್ಯೆಯ ಸ್ಪರ್ಧಿಗಳನ್ನು ಸೆಳೆಯಿತು. ಸ್ಪರ್ಧಿಗಳಿಗೆ ವಿಶೇಷ ಓಟದ ಕಿಟ್‌ಗಳು, ಪೌಷ್ಟಿಕ ತಿಂಡಿಗಳು ಮತ್ತು ಮ್ಯಾರಥಾನ್ ಪೂರ್ವ ಮತ್ತು ನಂತರದ ವ್ಯಾಯಾಮದ ಸಲಹೆಗಳನ್ನು ನೀಡಲಾಯಿತು.

ಸಾಮಾಜಿಕ ಕಳಕಳಿಯ ಈ ಬೃಹತ್ ಮ್ಯಾರಥಾನ್‌ಗೆ ತೆಲಂಗಾಣ ಆರೋಗ್ಯ ಸಚಿವ ದಾಮೋದರ್ ರಾಜಾ ನರಸಿಂಹ, ಎಂಇಐಎಲ್ ವ್ಯವಸ್ಥಾಪಕ ನಿರ್ದೇಶಕ ಪಿ.ವಿ. ಕೃಷ್ಣರೆಡ್ಡಿ ಮತ್ತು ಸುಧಾರೆಡ್ಡಿ ಫೌಂಡೇಶನ್ ಸಂಸ್ಥಾಪಕಿ ಸುಧಾರೆಡ್ಡಿ ಈ ರೋಮಾಂಚಕ ಪಿಂಕ್ ಪವರ್ ರನ್‌ಗೆ ಹಸಿರು ನಿಶಾನೆ ತೋರಿದರು.

ಎಸ್‌ಆರ್ ಫೌಂಡೇಶನ್ ಅಧ್ಯಕ್ಷೆ ಸುಧಾ ರೆಡ್ಡಿ, ಪಿಂಕ್ ಪವರ್ ರನ್ ಕೇವಲ ಒಂದು ಓಟವಲ್ಲ; ಇದು ಕ್ಯಾನ್ಸರ್‌ನಿಂದ ಬದುಕುಳಿದವರ ಸ್ಫೂರ್ತಿದಾಯಕ ಕಥೆಗಳನ್ನು ಹಂಚಿಕೊಳ್ಳಲು, ಇತರರನ್ನು ಪ್ರೇರೇಪಿಸಲು ಮತ್ತು ಬೆಂಬಲಿಸುವ ಸಮುದಾಯವನ್ನು ನಿರ್ಮಿಸಲು ಒಂದು ವೇದಿಕೆಯಾಗಿದೆ. ಒಟ್ಟಾಗಿ, ನಾವು ಮಾನಸಿಕ ಅಡೆತಡೆಗಳನ್ನು ಮುರಿಯಬಹುದು, ಸಾಮಾಜಿಕ ಪುರಾಣಗಳನ್ನು ಹೋಗಲಾಡಿಸಬಹುದು ಮತ್ತು ವ್ಯಕ್ತಿಗಳು ತಮ್ಮ ಆರೋಗ್ಯದ ಮೇಲೆ ಹಿಡಿತ ಸಾಧಿಸಲು ಅಧಿಕಾರ ನೀಡಬಹುದು" ಎಂದು ನುಡಿದರು.

ಸ್ತನ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸುವ ಮತ್ತು ಬಾಧಿತರಿಗೆ ಭರವಸೆ ನೀಡುವ ಗುರಿಯನ್ನು ಹೊಂದಿರುವ ಈ ಮಹತ್ವದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಕ್ಕಾಗಿ ನಾನು ಎಲ್ಲರಿಗೂ ಹೃತ್ಪೂರ್ವಕವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಇಂದು ತೆಗೆದುಕೊಳ್ಳುವ ಪ್ರತಿಯೊಂದು ಹೆಜ್ಜೆಯೂ ನಮ್ಮನ್ನು ಕ್ಯಾನ್ಸರ್ ಮುಕ್ತ ಜಗತ್ತಿಗೆ ಹತ್ತಿರ ತರುತ್ತದೆ "ಎಂದು ಶ್ರೀಮತಿ ಸುಧಾ ರೆಡ್ಡಿ ಹೇಳಿದರು.

10 ಕಿ.ಮೀ. ಮ್ಯಾರಥಾನ್ ಓಟದಲ್ಲಿ, ಪುರುಷರ ವಿಭಾಗದಲ್ಲಿ ಲವ್ ಪ್ರೀತ್ ಗೆದ್ದರೆ, ಮೋಹನ್ ಮೊದಲ ರನ್ನರ್ ಅಪ್ ಸ್ಥಾನ ಮತ್ತು ಅರಿಶ್ ಯಾದವ್ ಎರಡನೇ ರನ್ನರ್ ಅಪ್ ಸ್ಥಾನ ಪಡೆದರು. 6 ವರ್ಷದ ಬಾಲಕಿ ಎನ್. ಪಾರ್ವತಿ 10 ಕಿ. ಮೀ. ಓಟವನ್ನು ಪೂರ್ಣಗೊಳಿಸಿ ಎಲ್ಲರ ಗಮನವನ್ನು ಸೆಳೆದಳು. ಮಹಿಳೆಯರ ವಿಭಾಗದಲ್ಲಿ, ಸೀಮಾ ವಿಜೇತರಾಗಿ ಹೊರಹೊಮ್ಮಿದರು, ಸಂಜೀವನಿ ಎರಡನೇ ರನ್ನರ್ ಅಪ್ ಸ್ಥಾನವನ್ನು ಪಡೆದರು. 10 ಕಿಮೀ ಮ್ಯಾರಥಾನ್‌ನ ವಿಜೇತರಿಗೆ 2,50,000, ಮೊದಲ ರನ್ನರ್ ಅಪ್‌ಗೆ 1,75,000 ಮತ್ತು ಎರಡನೇ ರನ್ನರ್ ಅಪ್‌ಗೆ 1,00,000 ನೀಡಲಾಯಿತು. 5 ಕಿ.ಮೀ. ಮ್ಯಾರಥಾನ್‌ನಲ್ಲಿ, ಶಂಕರ್ ಲಾಲ್ ಪುರುಷರ ವಿಭಾಗದಲ್ಲಿ ಗೆದ್ದರು, ಅಖಿಲ ಕುಮಾರ್ ಮೊದಲ ರನ್ನರ್–ಅಪ್ ಮತ್ತು ಅಮನ್ ಕುಮಾರ್ ಎರಡನೇ ರನ್ನರ್–ಅಪ್ ಆಗಿದ್ದರು, ಎಲ್ಲರೂ ನಗದು ಬಹುಮಾನಗಳನ್ನು ಪಡೆದರು. ಅಂತೆಯೇ, ಮಹಿಳೆಯರ ವಿಭಾಗದಲ್ಲಿ, ಪ್ರೀತಿ ವಿಜೇತರಾಗಿ ಹೊರಹೊಮ್ಮಿದರು, ಸೋನಿಕಾ ಮೊದಲ ರನ್ನರ್–ಅಪ್ ಆಗಿ ಮತ್ತು ರೀನು ಎರಡನೇ ರನ್ನರ್–ಅಪ್ ಆಗಿ ನಗದು ಬಹುಮಾನಗಳನ್ನು ಪಡೆದರು.

5 ಕಿ.ಮೀ ಮ್ಯಾರಥಾನ್‌ನ ವಿಜೇತರಿಗೆ 1,25,000, ಮೊದಲ ರನ್ನರ್ ಅಪ್‌ಗೆ 1,00,000 ಮತ್ತು ಎರಡನೇ ರನ್ನರ್ ಅಪ್‌ಗೆ 75,000 ನೀಡಲಾಯಿತು. ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಎಂಇಐಎಲ್ ಎಂ.ಡಿ ಕೃಷ್ಣರೆಡ್ಡಿ, ಸುಧಾ ರೆಡ್ಡಿ, ಉಷಾ ಲಕ್ಷ್ಮಿ ಮತ್ತು ಸರ್ಕಾರಿ ಅಧಿಕಾರಿ ಕ್ರಿಸ್ಟಿನಾ ಸೇರಿದಂತೆ ಇತರರು ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಭಾಗವಹಿಸಿದ್ದರು. ಸಂಪೂರ್ಣವಾಗಿ ಗುಲಾಬಿ ಬಣ್ಣದಲ್ಲಿ ಅಲಂಕರಿಸಲಾದ ಪಕ್ಷಿಯ ಬೃಹತ್ ಮಾನವ ಚಿತ್ರವನ್ನು ರಚಿಸಲು ಒಟ್ಟುಗೂಡಿದ ಸಾವಿರಾರು ಮಂದಿ ಯುವಕ, ಯುವತಿಯರು ಮತ್ತು ವೃದ್ಧರು ಗಿನ್ನೆಸ್ ವಿಶ್ವ ದಾಖಲೆಯನ್ನು ಸ್ಥಾಪಿಸುವ ಪ್ರಯತ್ನವುದ ಮೂಲಕ ಜಾಗೃತಿ ಮೂಡಿಸುವುದು ಈ ಮ್ಯಾರಥಾನ್ನಿನ ಉದ್ದೇಶಗಳಲ್ಲಿ ಒಂದಾಗಿತ್ತು.

ಕಾರ್ಯಕ್ರಮವನ್ನು ಭವ್ಯವಾಗಿ ಯಶಸ್ವಿಗೊಳಿಸಿದ ತೆಲಂಗಾಣ ಸರ್ಕಾರ, ಒಲೆಕ್ಟ್ರಾ, ಎಐಜಿ ಆಸ್ಪತ್ರೆ, ಮ್ಯಾರಥಾನ್ ಓಟಗಾರರು ಮತ್ತು ಸ್ವಯಂ ಸೇವಕರಿಗೆ ತಮ್ಮ ಹೃತ್ಪೂರ್ವಕ ಕೃತಜ್ಞತೆಯನ್ನು ವ್ಯಕ್ತಪಡಿಸುವ ಮೂಲಕ ಸುಧಾ ರೆಡ್ಡಿ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಿದರು.

### ಸಮಾಜ ಸೇವೆಯಲ್ಲಿ ಗಮನಾರ್ಹ ಕೊಡುಗೆ

ಮೇಘಾ ಎಂಜಿನಿಯರಿಂಗ್, ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ (ಎಂಇಐಎಲ್) ನಿರ್ದೇಶಕರಾದ ಸುಧಾ ರೆಡ್ಡಿ ಅವರು ಮಹತ್ವಾಕಾಂಕ್ಷೆಯ ಉದ್ಯಮಿಯಾಗಿದ್ದು, ಕಾರ್ಪೊರೇಟ್ ಜಗತ್ತಿನಲ್ಲಿ ತಮ್ಮ ಛಾಪು ಮೂಡಿಸಿದ್ದಾರೆ. ಅವರು ಮೆಚ್ಚುಗೆ ಪಡೆದ ಕಲಾ ಉತ್ಸಾಹಿ ಮತ್ತು ಫ್ಯಾಷನ್ ಐಕಾನ್ ಆಗಿದ್ದು, ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ. ಭಾವೋದ್ರಿಕ್ತ ತಾಯಿಯಾಗಿ ಮತ್ತು ಮಹಿಳಾ ಸಬಲೀಕರಣದ ವಾದಿಯಾಗಿ, ಸುಧಾರೆಡ್ಡಿ ಅವರು ಸುಧಾ ರೆಡ್ಡಿ ಫೌಂಡೇಶನ್, ಯುನಿಸೆಫ್‌ನ ಗ್ಲೋಬಲ್ ಗಿಫ್ಟ್ ಫೌಂಡೇಶನ್, ಸ್ತನ ಕ್ಯಾನ್ಸರ್ ರಿಸರ್ಚ್ ಫೌಂಡೇಶನ್, ಫೈಟ್ ಹಂಗರ್ ಫೌಂಡೇಶನ್ ಮತ್ತು ಆಕ್ಷನ್ ಎಗೇನೆಸ್ಟ್ ಹಂಗರ್ ಮೂಲಕ ಸಾಮಾಜಿಕ ಕಾರ್ಯಗಳಿಗೆ ಗಮನಾರ್ಹ ಕೊಡುಗೆ ನೀಡಿದ್ದಾರೆ. ಸಮಾಜದ ಕಲ್ಯಾಣಕ್ಕೆ, ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳ ಸಬಲೀಕರಣಕ್ಕೆ ಅವರ ಬದ್ಧತೆಯು ಅವರನ್ನು ಪ್ರಭಾವಿ ಮತ್ತು ಬಹುಮುಖಿ ನಾಯಕರಾಗಿ ಸ್ಥಾಪಿಸಿದೆ.



# ಈ ವರ್ಷ ದುರ್ಗಾ ದೇವಿ ಯಾವ ವಾಹನವೇರಿ ಭೂಮಿಗೆ ಬರುತ್ತಾಳೆ?

ಒಂದು ವರ್ಷದಲ್ಲಿ ಬರೋಬ್ಬರಿ 4 ಬಾರಿ ನವರಾತ್ರಿ ಹಬ್ಬವನ್ನು ಆಚರಿಸಲಾಗುತ್ತದೆ. ಆದರೆ, ಅಶ್ವೀಜ ಮಾಸದಲ್ಲಿ ಬರುವ ಶಾರದೀಯ ನವರಾತ್ರಿಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಲಾಗಿದೆ. ಈ 9 ದಿನಗಳ ಹಬ್ಬವು ಅಶ್ವಿಜ ಮಾಸದ ಶುಕ್ಲ ಪಕ್ಷದ ಪ್ರತಿಪಾದ ತಿಥಿಯಿಂದ ಆರಂಭವಾಗಿ, ನವಮಿ ತಿಥಿಯವರೆಗೆ ಇರುತ್ತದೆ. ಈ 9 ದಿನಗಳಲ್ಲಿ ಪ್ರತಿ ದಿನವೂ ದುರ್ಗಾ ದೇವಿಯ 9 ಅವತಾರಗಳನ್ನು ಪೂಜಿಸಲಾಗುತ್ತದೆ.

ಈ ವರ್ಷ, ಶಾರದೀಯ ನವರಾತ್ರಿಯು ಅಕ್ಟೋಬರ್ 3 ರಂದು ಗುರುವಾರದಿಂದ ಪ್ರಾರಂಭವಾಗುತ್ತದೆ ಮತ್ತು ಅಕ್ಟೋಬರ್ 12 ರಂದು ಮುಕ್ತಾಯಗೊಳ್ಳುತ್ತದೆ. ಪ್ರತಿ ವರ್ಷ, ನವರಾತ್ರಿಯ ಸಮಯದಲ್ಲಿ ದುರ್ಗಾ ದೇವಿಯು ವಿಶಿಷ್ಟವಾದ ವಾಹನದಲ್ಲಿ ಭೂಮಿಗೆ ಆಗಮಿಸುತ್ತಾಳೆ ಎನ್ನುವ ನಂಬಿಕೆಯಿದೆ. ದುರ್ಗಾದೇವಿಯ ಆಗಮನ ಮತ್ತು ನಿರ್ಗಮನದ ವಾಹನವು ಹಿಂದೂ ಧರ್ಮದಲ್ಲಿ ಗಣನೀಯವಾಗಿದೆ. ಇದು ಪ್ರಪಂಚದ ಭವಿಷ್ಯ, ಪ್ರಕೃತಿ, ಬೆಳೆಗಳು ಮತ್ತು ಮಾನವ ಜೀವನದ ಭವಿಷ್ಯವನ್ನು ದುರ್ಗಾ ದೇವಿಯು ಆಗಮಿಸುವ ವಾಹನವು ಪ್ರತಿನಿಧಿಸುತ್ತದೆ. ಹಾಗಾದರೆ, ದುರ್ಗಾ ದೇವಿ ಈ ವರ್ಷ ಭೂಮಿಗೆ ಯಾವ ವಾಹನದ ಮೂಲಕ ಭೂಮಿಗೆ ಆಗಮಿಸುತ್ತಾಳೆ.?

ಈ ವರ್ಷ ಶಾರದೀಯ ನವರಾತ್ರಿ ಗುರುವಾರದಂದು ಪ್ರಾರಂಭವಾಗುತ್ತದೆ. ಅದರಂತೆ, ದುರ್ಗಾದೇವಿಯ ವಾಹನವು ಪಲ್ಲಕ್ಕಿಯಾಗಿರುತ್ತದೆ. ಗುರುವಾರದಂದು ನವರಾತ್ರಿ ಆರಂಭವಾದಾಗ ದೇವಿಯು ಪಲ್ಲಕ್ಕಿ ಅಥವಾ ಉಯ್ಯಾಲೆಯ ಮೂಲಕ ಭೂಮಿಗೆ ಆಗಮಿಸುತ್ತಾಳೆ ಎಂದು ಶಾಸ್ತ್ರ ಹೇಳುತ್ತದೆ.

ಶಾಸ್ತ್ರದಲ್ಲಿನ ನಂಬಿಕೆಗಳ ಪ್ರಕಾರ, ನವರಾತ್ರಿಯ ಸಮಯದಲ್ಲಿ ದುರ್ಗಾದೇವಿಯು ಪಲ್ಲಕ್ಕಿಯ ಮೇಲೆ ಭೂಮಿಗೆ ಆಗಮಿಸುವುದು



ಅಶುಭವೆಂದು ಪರಿಗಣಿಸಲಾಗಿದೆ. ಇದು ಸಂಭಾವ್ಯ ಆರ್ಥಿಕ ಕುಸಿತ, ವ್ಯಾಪಾರ ನಿಶ್ಚಲತೆ, ಹೆಚ್ಚಿದ ಹಿಂಸೆ, ಜಾಗತಿಕವಾಗಿ ಸಾಂಕ್ರಾಮಿಕ ರೋಗಗಳ ಹರಡುವಿಕೆ ಮತ್ತು ಅಸ್ವಾಭಾವಿಕ ವಿಪತ್ತುಗಳನ್ನು ಸೂಚಿಸುತ್ತದೆ. ಈ ಅಶುಭ ಚಿಹ್ನೆಯು ಕಳವಳವನ್ನು ಉಂಟುಮಾಡುತ್ತದೆ. ಹಾಗೂ ಇದು ಮುಂದೆ ಸವಾಲಿನ ಅವಧಿಯನ್ನು ಸೂಚಿಸುತ್ತದೆ.

ದೇವಿ ಭಾಗವತ ಪುರಾಣದಲ್ಲಿ ದುರ್ಗಾ ದೇವಿ ನವರಾತ್ರಿಯ 9 ದಿನಗಳ ಕಾಲ ಭೂಮಿಯಲ್ಲಿ ನೆಲೆಸಲು ಯಾವ ವಾಹನವನ್ನು ಅಥವಾ ಸವಾರಿಯನ್ನು ಆಯ್ದುಕೊಳ್ಳುತ್ತಾಳೆ ಎಂಬುದರ ಕುರಿತು ವಿವರವಾಗಿ ಉಲ್ಲೇಖಿಸಲಾಗಿದೆ. ಪ್ರಾಚೀನ ಗ್ರಂಥಗಳ ಪ್ರಕಾರ, ದುರ್ಗಾ ದೇವಿಯ ಆಗಮನದ ವಾಹನವು ವಾರದ ಆಯಾ ದಿನಗಳಿಗೆ ಅನುಗುಣವಾಗಿ ಬಲಾಗುತ್ತದೆ. ಸೋಮವಾರ ಅಥವಾ ಭಾನುವಾರದಂದು ಪ್ರಾರಂಭವಾಗುವ ನವರಾತ್ರಿಯು ಆನೆಯ ಮೇಲೆ ಅವಳ ಆಗಮನವನ್ನು ಸೂಚಿಸುತ್ತದೆ, ಆದರೆ ಶನಿವಾರ ಅಥವಾ ಮಂಗಳವಾರ ಅವಳು ಕುದುರೆಯ ಮೇಲೆ ಆಗಮನವನ್ನು ಸೂಚಿಸುತ್ತದೆ. ಗುರುವಾರ ಅಥವಾ ಶುಕ್ರವಾರ ಪಲ್ಲಕ್ಕಿಯಲ್ಲಿ ಮತ್ತು ಬುಧವಾರ ದೋಣಿಯಲ್ಲಿ ಆಕೆಯ ಆಗಮನವನ್ನು ಸೂಚಿಸುತ್ತದೆ. ಈ ಪವಿತ್ರ ಸಂಪ್ರದಾಯವು ಪ್ರತಿ ದಿನವೂ ಒಂದು ವಿಶಿಷ್ಟವಾದ ದೇವಿಯ ಸವಾರಿಯೊಂದಿಗೆ ಸಂಬಂಧವನ್ನು ಹೊಂದಿರುತ್ತದೆ. ಇದು ದೇವಿಯ ದೈವಿಕ ಪ್ರಯಾಣವನ್ನು ಸಂಕೇತಿಸುತ್ತದೆ ಮತ್ತು ಶಾಸ್ತ್ರದ ಮೇಲೂ ಪ್ರಭಾವ ಬೀರುತ್ತದೆ.

ಈ ಬಾರಿ ನವರಾತ್ರಿ ಹಬ್ಬವು ಗುರುವಾರದ ದಿನದಂದು ಬಂದಿರುವುದರಿಂದ ದುರ್ಗಾ ದೇವಿಯು ಪಲ್ಲಕ್ಕಿಯನ್ನೇರಿ ಭೂಮಿಗೆ ಆಗಮಿಸುತ್ತಾಳೆ. ಈಕೆಯು ಸವಾರಿ ಮಾಡಿಕೊಂಡು ಭೂಮಿಗೆ ಬರುವ ಸೂಚನೆಯು ಅಶುಭವಾಗಿರುತ್ತದೆ. ಹಾಗೂ ಭೂಲೋಕದಲ್ಲಿ ಎದುರಾಗಬಹುದಾದ ಸಮಸ್ಯೆಗಳನ್ನು ಸೂಚಿಸುತ್ತದೆ.

## ಚಿನ್ನದ ಅಂಬಾರಿ ಹಿಂದಿರುವ ಇತಿಹಾಸ

*ವಿಶ್ವವಿಖ್ಯಾತ ಮೈಸೂರು ಎಂದಾಕ್ಷಣ ಎಲ್ಲರಿಗೂ ನೆನಪಾಗುವುದು ಮೈಸೂರು ಅರಮನೆ, ಆನೆ, ಅಂಬಾರಿ... ಮೈಸೂರು ಅರಮನೆ, ದಸರಾ ಹಾಗೂ ಅಂಬಾರಿ ಹೊರುವ ಆನೆಯ ಇತಿಹಾಸದ ಕಥೆಗಳು ಸಾಕಷ್ಟು ಜನರಿಗೆ ತಿಳಿದಿರುತ್ತದೆ. ಆದರೆ, ಅದೆಷ್ಟೋ ಮಂದಿಗೆ ಅಂಬಾರಿ ಬಗೆಗಿನ ಇತಿಹಾಸ ಹಾಗೂ ಅದರ ಮೂಲ ತಿಳಿದಿಲ್ಲ.*



*ದಸರಾ ಹಬ್ಬದ ಸಂಬೂ ಸವಾರಿಯಲ್ಲಿ ಪ್ರಮುಖ ಆಕರ್ಷಣೆಯೇ ಈ ಅಂಬಾರಿ. ಅಂಬಾರಿಯಲ್ಲಿರುವ ತಾಯಿ ಚಾಮುಂಡೇಶ್ವರಿ ದೇವಿಯೇ ಈ ಮೆರವಣಿಗೆಯ ಪ್ರಮುಖ ಆಕರ್ಷಣೆ. ರಸ್ತೆಯ ಮೂಲೆಮೂಲೆಗಳಲ್ಲಿ ಜನಸಾಗರವೇ ಈ ಅಂಬಾರಿಯನ್ನು ನೋಡುತ್ತಿರುತ್ತದೆ. ತಾಯಿಚಾಮುಂಡೇಶ್ವರಿಯ ಅಂಬಾರಿಯನ್ನು ಹೊತ್ತ ಆಮೆ ಬನ್ನಿ ಮಂಟಪದತ್ತ ಹೋಗುವ ದೃಶ್ಯ ನೋಡುಗರನ್ನು ಮನಸೂರೆಗೊಳಿಸುತ್ತದೆ.*

*ಮೈಸೂರು ದಸರಾ ಉತ್ಸವದಲ್ಲಿ ಗಮನ ಸೆಳೆಯುವುದು ರತ್ನ ಖಚಿತ 750 ಕೆಜಿ ತೂಕದ ತಾಯಿಚಾಮುಂಡೇಶ್ವರಿಯ ಅಂಬಾರಿ. ಈ ಅಂಬಾರಿಯ ಮೂಲ ಹಾಗೂ ನಡೆದು ಬಂದ ದಾರಿಯಲ್ಲಿ ರೋಚಕತೆಯಿದೆ. ಅಂಬಾರಿಯ ನಂಟು ಕೊಪ್ಪಳದ ಕುಮ್ಮಟದುರ್ಗಕ್ಕೂ ಇದೆ. ಅಂಬಾರಿಯು 14ನೇ ಶತಮಾನದ ಪ್ರಾರಂಭದಲ್ಲಿ ಕಂಪಿಲರಾಯನ ಆಡಳಿತದ ಕುಮ್ಮಟ ದುರ್ಗದಲ್ಲಿತ್ತು ಎಂಬುದು ಇತಿಹಾಸದಲ್ಲಿ ದಾಖಲಾಗಿದೆ.*

*ಮಹಾರಾಷ್ಟ್ರದ ದೇವಗಿರಿಯಲ್ಲಿ ಮೂಲತಃ ಈ ರತ್ನ ಖಚಿತ ಅಂಬಾರಿ ಇತ್ತು. ದೇವಗಿರಿ ನಾಶವಾದ ವೇಳೆ ಇದನ್ನು ದೇವಗಿರಿಯ ರಾಜ ಮುಮ್ಮಡಿ ಸಿಂಗ ನಾಯಕ ಎನ್ನುವವರಿಗೆ ಹಸ್ತಾಂತರ ಮಾಡಿ, ಕಾಪಾಡುವಂತೆ ಕೋರಲಾಗಿರುತ್ತದೆ. ಮುಮ್ಮಡಿ ಸಿಂಗ ನಾಯಕ ಇದನ್ನು ಬಳ್ಳಾರಿ ಬಳಿಯ ರಾಮದುರ್ಗ ಕೋಟೆಯಲ್ಲಿ ಮುಚ್ಚಿಟ್ಟಿರುತ್ತಾರೆ. ಈತರ ಮಗ ಕಂಪಿಲರಾಯ ರಾಜ್ಯ ವಿಸ್ತರಿಸುತ್ತಾನೆ. ಕುಮ್ಮಟದುರ್ಗವನ್ನು ರಾಜಧಾನಿಯಾಗಿ ಮಾಡಿಕೊಳ್ಳುತ್ತಾನೆ. ಶ್ರೀ ದುರ್ಗಾದೇವಿಯನ್ನು ಸ್ಥಾಪಿಸಿ ಪೂಜಿಸಲಾಗುತ್ತದೆ. ಈ ಪೂಜೆಯನ್ನು ಮಗ ಯುವರಾಜನ ಕಾಲದಲ್ಲಿಯೂ ನಡೆಯುತ್ತದೆ.*

*1327ರಲ್ಲಿ ದೆಹಲಿ ಸುಲ್ತಾನರು ದಾಳಿಗೆ ಕಂಪಿಲ ರಾಜ್ಯ ನಾಶವಾಗುತ್ತದೆ. ಆಗ ಭಂಡಾರ ಸಂರಕ್ಷಣೆ ಮಾಡುತ್ತಿದ್ದ ಹಕ್ಕಬುಕ್ಕರು ಈ ಅಂಬಾರಿಯನ್ನು ಹುತ್ತವೊಂದರಲ್ಲಿ ಮುಚ್ಚಿಟ್ಟು ಕಾಣೆಯಾಗುತ್ತಾರೆ. 1336ರ ವೇಳೆಗೆ ದೆಹಲಿ ಸುಲ್ತಾನರು ನಾಶವಾದ ಸಮಯದಲ್ಲಿ ಪುನಃ ರಾಜ್ಯ ಸ್ಥಾಪಿಸುವುದಕ್ಕೆ ಹಕ್ಕ ಮುಂದಾಗುತ್ತಾನೆ. ಆನೆಗೊಂದಿಯಲ್ಲಿ ವಿಜಯನಗರ ಸಾಮ್ರಾಜ್ಯ ಸ್ಥಾಪನೆ ಮಾಡಲಾಗುತ್ತದೆ. ಇದು ವಿಜಯನಗರ ಸಾಮ್ರಾಜ್ಯದ ಮೊದಲನೇ ರಾಜಧಾನಿ. ನಂತರ ಬುಕ್ಕನು ಹಂಪಿಯಲ್ಲಿ ವಿಜಯನಗರ ಸಾಮ್ರಾಜ್ಯದ ಎರಡನೇ ರಾಜಧಾನಿ ಸ್ಥಾಪನೆ ಮಾಡುತ್ತಾನೆ. ಅಲ್ಲಿಗೆ ಈ ಅಂಬಾರಿ ಸ್ಥಳಾಂತರ ಮಾಡಲಾಗುತ್ತದೆ.*

*ಸಂಗಮ, ಸಾಳವ, ತುಳು ಹಾಗೂ ಅರವಿಡು ಎನ್ನುವ ನಾಲ್ಕು ವಂಶಗಳು ವಿಜಯನಗರ ಸಾಮ್ರಾಜ್ಯ ಆಳ್ವಿಕೆ ಮಾಡುತ್ತವೆ. ಇದು ನಾಶವಾದಾಗ ಅಂಬಾರಿಯನ್ನು ಸಂರಕ್ಷಣೆಗಾಗಿ ಆಂಧ್ರದ ಪೆನಗೊಂಡಕ್ಕೆ ಸ್ಥಳಾಂತರ ಮಾಡುಲಾಗುತ್ತದೆ. ಬಳಿಕೆ ಕೆಲವು ವರ್ಷದ ನಂತರ ಶ್ರೀರಂಗಪಟ್ಟಣ, ಆದಾದ ನಂತರ ಮೈಸೂರಿಗೆ ಬರುತ್ತದೆ. ಹೀಗೆ ಅಂಬಾರಿ ಹಲವು ರೋಚಕತೆಯ ಮೂಲಕ ಇಂದು ಮೈಸೂರಿನಲ್ಲಿ ನೆಲೆಯೂರಿದೆ.*

## ‘ಅಭಿವೃದ್ಧಿ ಹೊಂದಿದ ಭಾರತ ನೋಡಲು ಖರ್ಗೆ ಬದುಕಿರಬೇಕು’

ನವದೆಹಲಿ

ಅಭಿವೃದ್ಧಿ ಹೊಂದಿದ ಭಾರತವ ನೋಡಲು ನೀವು ಬದುಕಿರಬೇಕು, ದೀರ್ಘ ಆಯುಷ್ಯ ನಿಮ್ಮದಾಗಲಿ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ನನಗೆ ಈಗ 83 ವರ್ಷ, ಪ್ರಧಾನಿ ಮೋದಿಯನನ್ನು ಕುರ್ಚಿಯಿಂದ ಕೆಳಗಿಳಿಸುವವರೆಗೂ ನಾನು ಸಾಯುವುದಿಲ್ಲ ಎಂದು ಹೇಳಿಕೆ ನೀಡಿದ್ದ ಖರ್ಗೆಗೆ ಶಾ ಪ್ರತ್ಯುತ್ತರ ನೀಡಿದ್ದಾರೆ.

ಖರ್ಗೆಯವರು ಸಂಪೂರ್ಣವಾಗಿ ಅಸಹ್ಯಕರ ಮತ್ತು ಅವಮಾನಕರವಾಗಿ ಮಾತನಾಡಿದ್ದಾರೆ, ಅನಾವಶ್ಯಕವಾಗಿ ವೈಯಕ್ತಿಕ ವಿಚಾರಗಳಿಗೆ ಮೋದಿಯವರನ್ನು ಎಳೆದು ತಂದಿದ್ದಾರೆ. ಪ್ರಧಾನಿ ಮೋದಿಯವರ ಮೇಲೆ ಎಷ್ಟು ದ್ವೇಷ ಇದೆ ಎನ್ನುವುದನ್ನು ತೋರಿಸುತ್ತದೆ.



ಖರ್ಗೆಯವರ ಆರೋಗ್ಯ ಸುಧಾರಿಸಲಿ ಎಂದು ಮೋದಿಯವರು ಹಾಗೂ ನಾನು ಪ್ರಾರ್ಥನೆ ಮಾಡುತ್ತೇನೆ ಮೋದಿ 2047 ಅಭಿವೃದ್ಧಿ ಹೊಂದಿದ ಭಾರತವನ್ನು ನೋಡುವವರೆಗೂ ಬದುಕಿರಲಿ ಎಂದು ಹೇಳಿದ್ದಾರೆ. ಜಮ್ಮುವಿನ ಚುನಾವಣಾ ರ್ಯಾಲಿಯನ್ನುದ್ದೇಶಿಸಿ ಮಾತನಾಡುತ್ತಾ ಖರ್ಗೆ ಅಸ್ವಸ್ಥರಾಗಿದ್ದರು. ಈ ಸಂದರ್ಭದಲ್ಲಿ ಮೋದಿಯನ್ನು ಅಧಿಕಾರದಿಂದ ಕೆಳಗಿಳಿಸುವವರೆಗೂ ನಾನು ಸಾಯುವುದಿಲ್ಲ ಎಂದರು. ಪ್ರಧಾನಿ ಮೋದಿಯವರ ಬಗ್ಗೆ ಕಾಂಗ್ರೆಸ್‌ನವರಿಗೆ ಎಷ್ಟು ದ್ವೇಷ ಮತ್ತು ಭಯವಿದೆ ಎಂಬುದನ್ನು ಇದು ತೋರಿಸುತ್ತದೆ, ಅವರು ನಿರಂತರವಾಗಿ ಮೋದಿ ಬಗ್ಗೆ ಯೋಚಿಸುತ್ತಿದ್ದಾರೆ ಎಂದು ಶಾ ಹೇಳಿದರು. ಖರ್ಗೆ ಅವರ ಆರೋಗ್ಯದ ಬಗ್ಗೆ ಹೇಳುವುದಾದರೆ, ಮೋದಿ ಕೂಡ ಪ್ರಾರ್ಥಿಸುತ್ತಾರೆ, ನಾನು ಪ್ರಾರ್ಥಿಸುತ್ತೇನೆ ಮತ್ತು ನಾವೆಲ್ಲರೂ ಅವರು ದೀರ್ಘ ಮತ್ತು ಆರೋಗ್ಯಕರವಾಗಿ ಬದುಕಲಿ ಎಂದು ಪ್ರಾರ್ಥಿಸುತ್ತೇವೆ. ಅವರು ಇನ್ನೂ ಹಲವು ವರ್ಷಗಳ ಕಾಲ ಬದುಕಲಿ ಮತ್ತು 2047 ರ ಹೊತ್ತಿಗೆ ಅಭಿವೃದ್ಧಿ ಹೊಂದಿದ ಭಾರತದ ನಿರ್ಮಾಣವನ್ನು ನೋಡಲು ಬದುಕಲಿ ಎಂದರು.

ಪ್ರಧಾನಿ ನರೇಂದ್ರ ಮೋದಿ ದೂರವಾಣಿ ಮೂಲಕ ಕರೆ ಮಾಡಿ ಖರ್ಗೆಯವರು ಆರೋಗ್ಯ ವಿಚಾರಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಗಣಿಗಾರಿಕೆ ಮತ್ತು ಮದ್ಯದ ಒಪ್ಪಂದಗಳಂತಹ ಪ್ರಮುಖ ಕ್ಷೇತ್ರಗಳಲ್ಲಿ ಹೊರಗಿನವರಿಗೆ ಪ್ರಾಬಲ್ಯ ಸಾಧಿಸಲು ಬಿಜೆಪಿ ಅವಕಾಶ ನೀಡುತ್ತಿದೆ ಎಂದು ಖರ್ಗೆ ಆರೋಪಿಸಿದರು.

ಕೆಲಕಾಲ ಅವರನ್ನು ವೇದಿಕೆಯ ಮೇಲೆ ಕೂರಿಸಲಾಯಿತು. ಸ್ವಲ್ಪ ಹೊತ್ತು ಕುಳಿತ ನಂತರ ಮತ್ತೊಮ್ಮೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ ಅವರು ನಂತರ ವೇದಿಕೆ ಮೇಲೆ ನಿಂತು ಭಾಷಣ ಆರಂಭಿಸಿ ಜಮ್ಮು-ಕಾಶ್ಮೀರ ರಾಜ್ಯ ಸ್ಥಾನಮಾನ ಮರುಸ್ಥಾಪಿಸಲು ಹೋರಾಟ ನಡೆಸುತ್ತೇವೆ ಎಂದರು.

# ಗಾಜಾ, ಲೆಬನಾನ್ ಆಯ್ತು.. ಈಗ ಯಮನ್ ಸರದಿ!


ಟೆಲ್ ಅವೀವ್ (ಇಸ್ರೇಲ್)

ಗಾಜಾ ಪಟ್ಟಿ ಹಾಗೂ ವೆಸ್ಟ್ ಬ್ಯಾಂಕ್‌ನಲ್ಲಿ ಹಮಾಸ್ ಉಗ್ರರ ವಿರುದ್ಧ ಕಾರ್ಯಾಚರಣೆ ನಡೆಸುತ್ತಿರುವ ಇಸ್ರೇಲ್ ಸೇನೆ, ಲೆಬನಾನ್‌ನಲ್ಲೂ ಹೆಜ್ಬೊಲ್ಲಾ ಉಗ್ರ ಸಂಘಟನೆಗೆ ಆಘಾತ ಕೊಟ್ಟಿದೆ. ಈ ನಡುವಲ್ಲೇ ಇದೀಗ ದೂರದ ಯಮನ್ ದೇಶದಲ್ಲಿ ಹೌತಿ ಉಗ್ರರ ವಿರುದ್ಧ ದಾಳಿ ಆರಂಭಿಸಿದೆ!

ಯಮನ್ ದೇಶದ ಸಾಗರ ತೀರದ ಉದ್ದಕ್ಕೂ ಇರುವ ಹಲವು ಬಂದರುಗಳಲ್ಲಿ ಹೌತಿ ಉಗ್ರರ ನೆಲೆಗಳಿವೆ. ಈ ನೆಲೆಗಳ ಮೇಲೆ ಇಸ್ರೇಲ್ ವಾಯು ಪಡೆಯ ಹತ್ತಾರು ಯುದ್ಧ ವಿಮಾನಗಳು ಭಾನುವಾರ ಬೆಳಗ್ಗೆ ಏಕಾಏಕಿ ದಾಳಿ ನಡೆಸಿದವು. ಈ ದಾಳಿಗಳಲ್ಲಿ ಕನಿಷ್ಟ ನಾಲ್ವರು ಮೃತಪಟ್ಟಿರುವ ಶಂಕೆ ಇದೆ. ಈ ಬಂದರುಗಳು ಹೌತಿ ಉಗ್ರರ ನೆಲೆಗಳಾಗಿದ್ದವು ಎಂದು ಇಸ್ರೇಲ್ ತಿಳಿಸಿದೆ. ಇಸ್ರೇಲ್ ಏರ್ ಸ್ಟ್ರೈಕ್‌ನಲ್ಲಿ ಓರ್ವ ಬಂದರು ಕಾರ್ಮಿಕ ಹಾಗೂ ಮೂವರು ಎಲೆಕ್ಟ್ರಿಕ್ ಎಂಜಿನಿಯರ್‌ಗಳು ಸಾವನ್ನಪ್ಪಿದ್ದಾರೆ ಎಂದು ತಿಳಿದು ಬಂದಿದೆ.

ಬಂದರು, ವಿದ್ಯುತ್ ಉತ್ಪಾದನಾ ಸ್ಥಾವರಗಳೇ ಟಾರ್ಗೆಟ್!

ಇಸ್ರೇಲ್ ವಾಯು ಪಡೆಯ ಯುದ್ಧ ವಿಮಾನಗಳು ಹೌತಿ ಉಗ್ರರ ನೆಲೆ ಇರುವ ಯಮನ್ ದೇಶದ ಹಲವು ಬಂದರುಗಳನ್ನು ಧ್ವಂಸಗೊಳಿಸಿವೆ. ಅಷ್ಟೇ ಅಲ್ಲ, ವಿದ್ಯುತ್ ಉತ್ಪಾದನಾ ಘಟಕಗಳನ್ನೇ ಗುರಿಯಾಗಿಸಿ ದಾಳಿ ನಡೆಸಿವೆ. ಈ ಮೂಲಕ ಹೌತಿ ಉಗ್ರರ ಬಲ ಕುಗ್ಗಿಸುವಲ್ಲಿ ಇಸ್ರೇಲ್ ಶಕ್ತವಾಗಿದೆ. ಕಳೆದ ವಾರ ಇಸ್ರೇಲ್ ಕೇಂದ್ರ ಭಾಗಕ್ಕೇ



ಹೌತಿ ಉಗ್ರರು ಖಂಡಾಂತರ ಕ್ಷಿಪಣಿಗಳನ್ನು ಉಡಾಯಿಸಿದ್ದರು. ಈ ಕ್ಷಿಪಣಿಗಳನ್ನು ಇಸ್ರೇಲ್ ಸೇನೆಯ ವಾಯು ರಕ್ಷಣಾ ವ್ಯವಸ್ಥೆ ಆಗಸದಲ್ಲೇ ನಿಷ್ಕ್ರಿಯಗೊಳಿಸಿದ್ದವು. ಇದೀಗ ಇಸ್ರೇಲ್ ಹೌತಿ ಉಗ್ರರ ಮೇಲೆ ಪ್ರತೀಕಾರದ ದಾಳಿಗಳನ್ನು ನಡೆಸಿದೆ.

ಕಳೆದ ಜುಲೈನಲ್ಲಿ ಯಮನ್‌ನ ಹೌತಿ ಉಗ್ರರ ಮೇಲೆ ದಾಳಿ ನಡೆಸಿದ್ದ ಇಸ್ರೇಲ್, ಇದೀಗ ಎರಡನೇ ಬಾರಿ ದಾಳಿ ನಡೆಸಿದೆ. ಜುಲೈನಲ್ಲಿ ಇಸ್ರೇಲ್ ಮೇಲೆ ಮೊದಲಿಗೆ ಹೌತಿ ಉಗ್ರರೇ ಡ್ರೋನ್ ದಾಳಿ ನಡೆಸಿದ್ದರು. ಈ ಸಂದರ್ಭದಲ್ಲಿ ಓರ್ವ ವ್ಯಕ್ತಿ ಸಾವನ್ನಪ್ಪಿದ್ದ. ಈ ಹಿನ್ನೆಲೆಯಲ್ಲಿ ಪ್ರತೀಕಾರದ ದಾಳಿ ನಡೆಸಿದ್ದ ಇಸ್ರೇಲ್, ಬಂದರುಗಳ ಮೇಲೆ ಬಾಂಬ್‌ಗಳ ಮಳೆಗರೆದಿತ್ತು. ಇದೀಗ ಮತ್ತೊಮ್ಮೆ ಬಂದರುಗಳನ್ನೇ ಗುರಿಯಾಗಿಸಿ ಇಸ್ರೇಲ್ ಯುದ್ಧ ವಿಮಾನಗಳು ದಾಳಿ ನಡೆಸಿವೆ.

ಈ ದಾಳಿ ಕುರಿತಾಗಿ ಮಾಹಿತಿ ನೀಡಿರುವ ಹೌತಿ ಉಗ್ರ ಸಂಘಟನೆ ನಾಲ್ವರು ಸಾವಪ್ಪಿರುವ ಮಾಹಿತಿ ಬಹಿರಂಗ ಮಾಡಿದೆ. ಅಷ್ಟೇ ಅಲ್ಲ, 33 ಮಂದಿಗೆ ಗಾಯಗಳಾಗಿವೆ ಎಂದೂ ಹೇಳಿವೆ. ಈ ದಾಳಿಗಳಿಂದಾಗಿ ಯಮನ್ ದೇಶದ ವಿದ್ಯುತ್ ಉತ್ಪಾದನಾ ಘಟಕಗಳು ಹಾನಿಗೊಂಡಿವೆ. ಜೊತೆಯಲ್ಲೇ ಯಮನ್ ದೇಶಕ್ಕೆ ಮಾನವೀಯ ನೆರವು ರವಾನೆಯಾಗುವ ಬಂದರುಗಳನ್ನೇ ಇಸ್ರೇಲ್ ಧ್ವಂಸಗೊಳಿಇದೆ. ಹೀಗಾಗಿ, ಯಮನ್ ದೇಶಕ್ಕೆ ಭಾರೀ ಸಂಕಷ್ಟ ಎದುರಾಗಲಿದೆ.

ಆದರೆ ಇಸ್ರೇಲ್ ದಾಳಿಗೆ ಹೌತಿ ಉಗ್ರ ಸಂಘಟನೆ ಮತ್ತಷ್ಟು ಪ್ರತೀಕಾರದ ದಾಳಿಗಳನ್ನು ನಡೆಸೋದಾಗಿ ಹೇಳಿದೆ. ನಮ್ಮನ್ನು ತಡೆಯಲು ಸಾಧ್ಯವೇ ಇಲ್ಲ ಎಂದು ಹೌತಿ ಉಗ್ರ ಸಂಘಟನೆ ವಕ್ತಾರರು ತಿರುಗೇಟು ನೀಡಿದ್ದಾರೆ. ಹೌತಿ ಉಗ್ರರಿಗೆ ಬೆಂಬಲವಾಗಿ ನಿಂತಿರುವ ಇರಾನ್ ಕೂಡಾ ಇಸ್ರೇಲ್ ವಿರುದ್ಧ ಕೆಂಡ ಕಾರಿದೆ. ಮಾನವೀಯ ನೆರವು ರವಾನೆಯಾಗುವ ಬಂದರು ಹಾಗೂ ವಿದ್ಯುತ್ ಸ್ಥಾವರಗಳನ್ನೇ ಧ್ವಂಸ ಮಾಡುವ ಮೂಲಕ ಇಸ್ರೇಲ್ ವಿಕೃತಿ ಮೆರೆದಿದೆ ಎಂದು ಇರಾನ್ ಆಕ್ರೋಶ ವ್ಯಕ್ತಪಡಿಸಿದೆ.

## ’ಇದು ಕಾಫಿ ಶಾಪ್ ಅಲ್ಲ’! ಸಿಜೆಐ ಚಂದ್ರಚೂಡ್ ಚಾಟಿ

ಹೊಸದಿಲ್ಲಿ

ನ್ಯಾಯಪೀಠಕ್ಕೆ ವಿವರಣೆ ನೀಡುವಾಗ 'ಹೌದು' ಎನ್ನಲು ಅನೌಪಚಾರಿಕವಾದ 'ಯೆಹ್' (ಜಜಚು) ಪದ ಬಳಸಿದ ವಕೀಲರನ್ನು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸಿಜೆಐ ಡಿವೈ ಚಂದ್ರಚೂಡ್ ಅವರು ಸೋಮವಾರ ತರಾಟೆಗೆ ತೆಗೆದುಕೊಂಡರು.

ಈ ರೀತಿಯ ಹಾವಭಾವಗಳೆಂದರೆ ತಮಗೆ ಅಲರ್ಜಿ ಎಂದ ಸಿಜೆಐ, ಇದು ಕೆಫೆ ಅಲ್ಲ ಕೋರ್ಟ್ ಕೊಠಡಿ ಎನ್ನುವುದನ್ನು ಗಮನದಲ್ಲಿಡಿ ಎಂದು ವಕೀಲರಿಗೆ ನೆನಪಿಸಿದರು.

ವಿವಾದವಾದ ಸಿಜೆಐ ಚಂದ್ರಚೂಡ ಮನೆಯಲ್ಲಿ ಮೋದಿ ಗಣೇಶ ಹಬ್ಬ: ವಿಪಕ್ಷಗಳಿಂದ ಟೀಕೆ, ನ್ಯಾಯಾಂಗದ ರಾಜಿ ಆರೋಪ

ಮಾಜಿ ಮುಖ್ಯ ನ್ಯಾಯಮೂರ್ತಿ ರಂಜನ್ ಗೊಗೊಯ್ ಅವರನ್ನು ಪ್ರತಿವಾದಿಯನ್ನಾಗಿ ಸೇರಿಸಿದ್ದ 2018ರ ಅರ್ಜಿಯೊಂದನ್ನು ವಕೀಲರು ನ್ಯಾಯಪೀಠದ ಮುಂದೆ ಪ್ರಸ್ತಾಪಿಸಿದ್ದರು. "ಆದರೆ ಇದು 32ನೇ ವಿಧಿಯ ಅರ್ಜಿಯೇ? ನ್ಯಾಯಾಧೀಶರನ್ನು ಪ್ರತಿವಾದಿಯನ್ನಾಗಿಸಿ ನೀವು ಹೇಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸುತ್ತೀರಿ?" ಎಂದು ಸಿಜೆಐ ಪ್ರಶ್ನಿಸಿದ್ದರು. ತಮ್ಮ ಮೂಲಭೂತ ಹಕ್ಕುಗಳ ಉಲ್ಲಂಘನೆಯಾದಾಗ ನಾಗರಿಕರು



ಸಂವಿಧಾನಾತ್ಮಕ ಪರಿಹಾರ ಕೋರುವ ಹಕ್ಕಿನ ಕುರಿತು 32ನೇ ವಿಧಿಯು ಸಾಂವಿಧಾನಿಕ ಖಾತರಿಯನ್ನು ನೀಡಿದೆ.

ಇದಕ್ಕೆ ಪ್ರತಿಕ್ರಿಯೆ ನೀಡಿದ ವಕೀಲರು, ’"ಹೌದು, ಹೌದು (ಯಾ, ಯಾ) ಆಗಿನ ಸಿಜೆಯ ರಂಜನ್ ಗೊಗೊಯ್... ನನಗೆ ಕ್ಯುರೇಟಿವ್ ಅರ್ಜಿ ಸಲ್ಲಿಸಲು ಸೂಚಿಸಲಾಗಿತ್ತು..." ಎಂದು ಹೇಳುವಾಗ ಸಿಜೆಐ ಡಿವೈ ಚಂದ್ರಚೂಡ್ ಅವರ ಮಾತನ್ನು ಅರ್ಧದಲ್ಲಿಯೇ ತುಂಡರಿಸಿದರು. "ಇದು ಕಾಫಿ ಶಾಪ್ ಅಲ್ಲ! ಏನಿದು ಯಾ ಯಾ? ಈ ಯಾ ಯಾ ಎಂದರೆ ನನಗೆ ಅಲರ್ಜಿ. ಇದಕ್ಕೆ ಅವಕಾಶ ನೀಡಲು ಸಾಧ್ಯವಿಲ್ಲ" ಎಂದು ಖಾರವಾಗಿ ಹೇಳಿದರು.

"ನ್ಯಾ ಗೊಗೊಯ್ ಅವರು ಈ ನ್ಯಾಯಾಲಯದ ಮಾಜಿ ನ್ಯಾಯಾಧೀಶರು. ನೀವು ನ್ಯಾಯಾಧೀಶರೊಬ್ಬರ ವಿರುದ್ಧ ಹೀಗೆ ಅರ್ಜಿ ಸಲ್ಲಿಸಲು ಸಾಧ್ಯವಿಲ್ಲ ಮತ್ತು ಆಂತರಿಕ ತನಿಖೆಗೆ ಕೋರುವಂತೆ ಇಲ್ಲ. ಏಕೆಂದರೆ ನೀವು ಪೀಠದ ಮುಂದೆ ವಾದ ಮಂಡಿಸಲು ವಿಫಲರಾಗಿದ್ದೀರಿ" ಎಂದು ಸಿಜೆಐ ಹೇಳಿದರು.

ನಾನು ತಪ್ಪು ಮಾಡಿಲ್ಲ ಎಂದ ವಕೀಲ

ಇದಕ್ಕೆ ಪ್ರತಿಕ್ರಿಯೆ ನೀಡಿದ ವಕೀಲ, "ಆದರೆ ನ್ಯಾ ರಂಜನ್ ಗೊಗೊಯ್ ಅವರು ನಾನು ಕಾನೂನುಬಾಹಿರವಾಗಿ ನಡೆದುಕೊಂಡಿರುವ ಆರೋಪದ ಕುರಿತಾದ ಹೇಳಿಕೆ ಆಧಾರದಲ್ಲಿ ನನ್ನ ಅರ್ಜಿಯನ್ನು ವಜಾಗೊಳಿಸಿದ್ದರು. ನಾನು ಯಾವ ತಪ್ಪೂ ಮಾಡಿರಲಿಲ್ಲ. ಕಾರ್ಮಿಕ ಕಾನೂನುಗಳ ಬಗ್ಗೆ ತಿಳಿವಳಿಕೆ ಇರುವ ಪೀಠದ ಮುಂದೆ ನನ್ನ ಪರಾಮರ್ಶನಾ ಅರ್ಜಿಯನ್ನು ವರ್ಗಾಯಿಸುವಂತೆ ಸಿಜೆಐ ಠಾಕೂರ್ ಅವರಿಗೆ ಮನವಿ ಮಾಡಿದ್ದೆನಷ್ಟೆ. ಆದರೆ ಅದು ಸಾಧ್ಯವಾಗಲಿಲ್ಲ. ಬದಲಾಗಿ ಅರ್ಜಿಯನ್ನು ವಜಾಗೊಳಿಸಲಾಯಿತು" ಎಂದು ಅಲವತ್ತುಕೊಂಡರು.

ಅರ್ಜಿ ಪರಿಶೀಲಿಸಲು ಸೂಚನೆ

ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿರುವ ಸಂದರ್ಭದಲ್ಲಿ ನ್ಯಾಯಾಧೀಶರನ್ನು ವಿರೋಧಿಸಲು ಸಾಧ್ಯವಿಲ್ಲ ಎಂದು ವಕೀಲರಿಗೆ ಮರಾಠಿಯಲ್ಲಿ ಸಿಜೆಐ ತಿಳಿಸಿದರು. ಈ ಅರ್ಜಿಯನ್ನು ರಿಜಿಸ್ಟ್ರಿ ಪರಿಶೀಲಿಸಲಿದೆ ಎಂದ ಸಿಜೆಐ ಡಿವೈ ಚಂದ್ರಚೂಡ್, ಮಾಜಿ ನ್ಯಾಯಮೂರ್ತಿ ರಂಜನ್ ಗೊಗೊಯ್ ಅವರ ಹೆಸರನ್ನು ಅರ್ಜಿಯಿಂದ ಅಳಿಸಿ ಹಾಕುವಂತೆ ವಕೀಲರಿಗೆ ಸೂಚಿಸಿದರು. ರಂಜನ್ ಗೊಗೊಯ್ ಅವರು ಪ್ರಸ್ತುತ ರಾಜ್ಯಸಭಾ ಸಂಸದರಾಗಿದ್ದಾರೆ.




ಬೆಂಗಳೂರಿನಲ್ಲಿ ಸೋಮವಾರ ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವ 2024ರ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ, ಆಹಾರ ಮೇಳದ ಪೋಸ್ಟರ್ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಆಯುಕ್ತೆ ವಾಸಿರೆಡ್ಡಿ ವಿಜಯಾ ಜ್ಯೋತ್ಸ್ನಾ , ನಿಗಮ ನಿರ್ದೇಶಕರಾದ ಚಂದ್ರಕಾಂತ್, ಪ್ರಧಾನ ವ್ಯವಸ್ಥಾಪಕರಾದ ಮಂಜುನಾಥ್, ಮೂಡಾ ಆಯುಕ್ತರಾದ ರಘುನಂದನ್, ಸಚಿವರ ಆಪ್ತ ಕಾರ್ಯದರ್ಶಿ ಡಾ.ನಟರಾಜ್ ಉಪಸ್ಥಿತರಿದ್ದರು.

## ಭಾರತ್‌ಪೇ, ಅಶ್ನೀರ್ ಗ್ರೋವರ್ ತಿಕ್ಕಾಟಕ್ಕೆ ಪೂರ್ಣವಿರಾಮ

ನವದೆಹಲಿ

ಭಾರತದ ಪ್ರಮುಖ ಯುಪಿಐ ಪ್ಲಾಟ್‌ಫಾರ್ಮ್‌ಗಳಲ್ಲಿ ಒಂದಾದ ಭಾರತ್‌ಪೆ ಸಂಸ್ಥೆ ಹಾಗೂ ಅದರ ಒಬ್ಬ ಸಹ-ಸಂಸ್ಥಾಪಕ ಅಶ್ನೀರ್ ಗ್ರೋವರ್ ಮಧ್ಯೆ ವರ್ಷಗಳಿಂದ ಇದ್ದ ವ್ಯಾಜ್ಯ ಕೊನೆಗೂ ಶಮನವಾಗಿದೆ. ಇಬ್ಬರ ಮಧ್ಯೆ ಒಂದು ಇತ್ಯರ್ಥಕ್ಕೆ (ಸೆಟಲ್ಮೆಂಟ್) ಬರಲಾಗಿದೆ. ಈ ಸೆಟಲ್ಮೆಂಟ್ ಪ್ರಕಾರ, ಭಾರತ್‌ಪೆನಲ್ಲಿರುವ ಅಶ್ನೀರ್ ಗ್ರೋವರ್ ಅವರ ಕೆಲ ಷೇರುಗಳನ್ನು ರೆಸಿಲಿಯೆಂಟ್ ಗ್ರೋತ್ ಟ್ರಸ್ಟ್‌ಗೆ ವರ್ಗಾಯಿಸಬೇಕು. ಇನ್ನುಳಿದ ಷೇರುಗಳನ್ನು ಅವರ ಫ್ಯಾಮಿಲಿ ಟ್ರಸ್ಟ್‌ನಿಂದ ನಿರ್ವಹಣೆ ಆಗಬೇಕು ಎಂದಿದೆ. ಭಾರತ್ ಪೆ ಸಂಸ್ಥೆಯಾಗಲೀ ಅಶ್ನೀರ್ ಗ್ರೋವರ್ ಆಗಲೀ ಪರಸ್ಪರರ ಮೇಲೆ ಈಗಿರುವ ಕಾನೂನು ಹೋರಾಟಗಳನ್ನು ಮುಂದುವರಿಸಬಾರದು ಎನ್ನುವ ನಿರ್ಧಾರಕ್ಕೆ ಬರಲಾಗಿದೆ.

ಮನಿಕಂಟ್ರೋಲ್ ವರದಿ ಪ್ರಕಾರ ಅಶ್ನೀರ್ ಗ್ರೋವರ್ ಅವರು ತಮ್ಮ ಹೆಸರಿನ ಶೆ. 1.5ರಷ್ಟು ಷೇರುಗಳನ್ನು ಭಾರತ್ ಪೆ ಬೋರ್ಡ್‌ಗೆ ವರ್ಗಾವಣೆ ಮಾಡಲಿದ್ದಾರೆ. ಇನ್ನುಳಿದ ಶೇ. 3.5ರಿಂದ 3.7ರಷ್ಟು ಷೇರುಗಳನ್ನು ಫ್ಯಾಮಿಲಿ ಟ್ರಸ್ಟ್‌ಗೆ ಬಿಟ್ಟುಕೊಡಲಿದ್ದಾರೆ. ಇದರೊಂದಿಗೆ ಭಾರತ್ ಪೇ ಸಂಸ್ಥೆಯಲ್ಲಿ ಅಶ್ನೀರ್ ಗ್ರೋವರ್ ಹೊಂದಿರುವ ಅಲ್ಪ ಷೇರುದಾರಿಕೆಯೂ ಕೈಬಿಟ್ಟು ಹೋಗಲಿದೆ. ತಾವೇ ಹುಟ್ಟುಹಾಕಿದ್ದ ಕಂಪನಿಯಿಂದ ಅವರು ಪೂರ್ಣ ತೊರೆದಂತಾಗಲಿದೆ.

ಇದೇ ವೇಳೆ, ಭಾರತ್‌ಪೇ ಸಂಸ್ಥೆಯ ಮತ್ತೊಬ್ಬ ಸಹ-ಸಂಸ್ಥಾಪಕ ಭಾವಿಕ್ ಕೊಲಾದಿಯ ಅವರಿಗೂ ಗ್ರೋವರ್ ತಮ್ಮ ಷೇರುಗಳನ್ನು ಮರಳಿಸಲಿದ್ದಾರೆ. ಇವರಿಬ್ಬರ ಮಧ್ಯೆ ಈ ವಿಚಾರವಾಗಿ ವ್ಯಾಜ್ಯ ಇದೆ. ಅಶ್ನೀರ್ ಗ್ರೋವರ್ ಅವರಿಗೆ ತಾನು ವರ್ಗಾಯಿಸಿದ್ದ 88 ಲಕ್ಷ ರೂ ಮೌಲ್ಯದ 1,611 ಷೇರುಗಳಿಗೆ ಗ್ರೋವರ್ ಹಣಪಾವತಿಸಿಲ್ಲ ಎಂದು 2023ರ ಜನವರಿಯಲ್ಲಿ ಭಾವಿಕ್ ಕೊಲಾಡಿಯಾ ಆರೋಪಿಸಿ ಕೋರ್ಟ್ ಕಟಕಟೆ ಏರಿದ್ದರು. ಆ ಷೇರುಗಳ ಸಂಖ್ಯೆ ಈಗ 16,110 ಆಗಿದೆ. ಈ ಷೇರುಗಳನ್ನು ಮಾರದಂತೆ ಕೋರ್ಟ್ ನಿರ್ಬಂಧ ವಿಧಿಸಿತ್ತು. ಈಗ ಗ್ರೋವರ್ ಅವರು ಆ ಷೇರುಗಳೆಲ್ಲವನ್ನೂ ಭಾವಿಕ್ ಅವರಿಗೆ ಟ್ರಾನ್ಸ್‌ಫರ್ ಮಾಡಲಿದ್ದಾರೆ.

ಅಶ್ನೀರ್ ಗ್ರೋವರ್ ಮತ್ತು ಭಾರತ್ ಪೇ ಗುದ್ದಾಟ ಏನು?

ಭಾರತ್‌ಪೆ 2018ರಲ್ಲಿ ಆರಂಭವಾದ ಫಿನ್‌ಟೆಕ್ ಕಂಪನಿ. ಅಶ್ನೀರ್ ಗ್ರೋವರ್, ಶಾಶ್ವತ್ ನಕ್ರಾನಿ ಮತ್ತು ಭಾವಿಕ್ ಕೊಲಾದಿಯಾ ಅವರು ಸೇರಿ ಈ ಕಂಪನಿ ಸ್ಥಾಪಿಸಿದ್ದರು. 2022ರಿಂದ ಭಾರತ್ ಪೇ ಕಂಪನಿಯ ಮಂಡಳಿಗೂ ಅಶ್ನೀರ್ ಗ್ರೋವರ್‌ಗೂ ಭಿನ್ನಾಭಿಪ್ರಾಯ ಮತ್ತು ತಿಕ್ಕಾಟ ಶುರುವಾಗಿದ್ದು.

ನಕಲಿ ಕನ್ಸಲ್ಟೆಂಟ್ಸ್‌ಗಳಿಗೆ ಅಕ್ರಮವಾಗಿ ಹಣ ಪಾವತಿಸಲಾಗಿದೆ; ಅಶ್ನೀರ್ ಗ್ರೋವರ್ ಮತ್ತವರ ಕುಟುಂಬಕ್ಕೆ ಸಂಬಂಧಿಸಿದ ವೆಂಡರ್‌ಗಳಿಗೆ ಹೆಚ್ಚು ಹಣ ಪಾವತಿಸಲಾಗಿದೆ; ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್‌ನಲ್ಲಿ ನಕಲಿ ವಹಿವಾಟು ನಡೆದಿದೆ; ಟ್ರಾವೆಲ್ ಏಜೆನ್ಸಿಗಳಿಗೆ ಅಕ್ರವಾಗಿ ಪಾವತಿಸಲಾಗಿದೆ; ಹೀಗೆ ಹಲವು ಅಕ್ರಮ ವ್ಯವಹಾರಗಳ ಆರೋಪಗಳನ್ನು ಅಶ್ನೀರ್ ಗ್ರೋವರ್ ಮತ್ತವರ ಕುಟುಂಬ ಸದಸ್ಯರ ಮೇಲೆ ಮಾಡಲಾಗಿತ್ತು. ಅಶ್ನೀರ್ ಗ್ರೋವರ್, ಅವರ ಪತ್ನಿ ಮಾಧುರಿ ಗ್ರೋವರ್, ಮಧುರಿಯವರ ಸಹೋದರ ಶ್ವೇತಾಂಕ್ ಜೈನ್, ಮಾಧುರಿ ಅವರ ತಂದೆ ಸುರೇಶ್ ಜೈನ್, ಮಾಧುರಿ ಅವರ ಸೋದರಿಯ ಪತಿ ದೀಪಕ್ ಗುಪ್ತಾ ವಿರುದ್ಧ 2022ರಲ್ಲಿ ಭಾರತ್‌ಪೇ ಕ್ರಿಮಿನಲ್ ದೂರು ದಾಖಲಿಸಿತ್ತು.

ಶಾರ್ಕ್‌ಟ್ಯಾಂಕ್ ಕಾರ್ಯಕ್ರಮದ ಮೂಲಕ ಜನಪ್ರಿಯರಾಗಿರುವ ಅಶ್ನೀರ್ ಗ್ರೋವರ್ ಅವರು ತಮ್ಮನ್ನು ಉದ್ದೇಶಪೂರ್ವಕವಾಗಿ ದಮನ ಮಾಡುವ ಪ್ರಯತ್ನಗಳಾಗಿವೆ ಎಂದು ಸಾಕಷ್ಟು ಬಾರಿ ಹೇಳಿಕೊಂಡಿದ್ದಿದೆ. ಭಾರತದಲ್ಲಿ ಬಿಸಿನೆಸ್ ಮಾಡುವ ಒಳ್ಳೆಯ ವಾತಾವರಣ ಇಲ್ಲ ಎಂದೂ ಹೇಳಿಕೊಂಡಿದ್ದಿದೆ.

## 8 ಬಂಡಾಯ ನಾಯಕರು ಉಚ್ಚಾಟನೆ!

ಚಂಡೀಗಢ

ಅಕ್ಟೋಬರ್ 5 ರಂದು ನಡೆಯಲಿರುವ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಬಂಡಾಯ ಅಭ್ಯರ್ಥಿಗಳಾಗಿ ಸ್ಪರ್ಧಿಸಲು ನಿರ್ಧರಿಸಿದ ನಂತರ ಹರಿಯಾಣದ ಮಾಜಿ ಸಚಿವ ರಂಜಿತ್ ಸಿಂಗ್ ಚೌಟಾಲಾ ಮತ್ತು ಇತರ ಏಳು ನಾಯಕರನ್ನು ಆರು ವರ್ಷಗಳ ಕಾಲ ಬಿಜೆಪಿಯಿಂದ ಉಚ್ಚಾಟಿಸಲಾಗಿದೆ.

ಈ ನಾಯಕರನ್ನು ತಕ್ಷಣವೇ ಜಾರಿಗೆ ಬರುವಂತೆ ಆರು ವರ್ಷಗಳ ಅವಧಿಗೆ ಹರಿಯಾಣ ಬಿಜೆಪಿಯ ಮುಖ್ಯಸ್ಥ ಮೋಹನ್ ಲಾಲ್ ಉಚ್ಚಾಟಿಸಿದ್ದಾರೆ ಎಂದು ಹರಿಯಾಣ ಬಿಜೆಪಿ ಹೇಳಿದೆ.

ಚೌಟಾಲಾ ಪಕ್ಷೇತರ ಶಾಸಕರಾಗಿದ್ದಾಗ ವಿಧಾನಸಭೆ ಪ್ರತಿನಿಧಿಸುತ್ತಿದ್ದ ರಾನಿಯಾ ಕ್ಷೇತ್ರದಿಂದ ಟಿಕೆಟ್ ನಿರಾಕರಿಸಿದ ನಂತರ ಕೇಸರಿ ಪಕ್ಷವನ್ನು ತೊರೆಯಲು ನಿರ್ಧರಿಸಿದ್ದಾರೆ.

ಈ ವರ್ಷದ ಆರಂಭದಲ್ಲಿ ನಡೆದ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಸೇರುವ ಮುನ್ನ ಚೌಟಾಲಾ ವಿಧಾನಸಭೆಯ ಸದಸ್ಯತ್ವವನ್ನು



ತೊರೆದಿದ್ದರು. ಅವರು ಹಿಸಾರ್‌ನಿಂದ ಸಂಸತ್ ಚುನಾವಣೆಗೆ ಸ್ಪರ್ಧಿಸಿ ಸೋತಿದ್ದರು.

90 ಸದಸ್ಯ ಬಲದ ಹರಿಯಾಣ ವಿಧಾನಸಭೆಗೆ ಅಕ್ಟೋಬರ್ 5 ರಂದು ಚುನಾವಣೆ ನಡೆಯಲಿದ್ದು, ಅಕ್ಟೋಬರ್ 8 ರಂದು ಮತ ಎಣಿಕೆ ನಡೆಯಲಿದೆ. ಬಿಜೆಪಿ ಸತತ ಮೂರನೇ ಅವಧಿಗೆ ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ಬರಲು ಹವಣಿಸುತ್ತಿದೆ.

## 3 ರಿಂದ ಸರ್ವಶಕ್ತಾತ್ಮಕ ಶ್ರೀಚೌಡೇಶ್ವರಿಗೆ ವಿಶೇಷ ಅಲಂಕಾರ



ದೇವನಹಳ್ಳಿ

ಪಟ್ಟಣದ ಪಾರ್ಕ್ ರಸ್ತೆಯಲ್ಲಿರುವ ಸರ್ವಶಕ್ತಾತ್ಮಕ ಶ್ರೀಚೌಡೇಶ್ವರಿ ದೇವಾಲಯದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಶರನ್ನವರಾತ್ರಿ ಅಂಗವಾಗಿ ವಿಶೇಷ ಅಲಂಕಾರಗಳು ನೆರವೇರಲಿದ್ದು, ಅದರ ಅಂಗವಾಗಿ ಶ್ರೀ ಚೌಡೇಶ್ವರಿ ದೇವಾಲಯ ಆವರಣದಲ್ಲಿ ದೇವಾಲಯ ಅಭಿವೃದ್ಧಿ ಸಮಿತಿ ವತಿಯಿಂದ ಪತ್ರಿಕಾಗೋಷ್ಠಿ ನಡೆಸಿದರು.

ಈ ವೇಳೆ ಅಧ್ಯಕ್ಷ ಸಿ. ಅಶ್ವತ್ಥ್ ನಾರಾಯಣ್ ಎಸ್.ಎಲ್.ಎನ್. ಮಾತನಾಡಿ, ನವರಾತ್ರಿಯ ಪ್ರಯುಕ್ತ ಅಮ್ಮನವರಿಗೆ ಇದೇ 3ರಿಂದ 12ರ ಶನಿವಾರದವರೆಗೆ ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮಗಳು, ಸಂಜೆ ಮಹಾ ಮಂಗಳಾರತಿ ಯೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರಸಾದ ವಿನಿಯೋಗ ನಡೆಯಲಿದೆ. ಸರ್ವರೂ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗಬೇಕು ಹಾಗೂ ಮುಖ್ಯವಾಗಿ ನವರಾತ್ರಿಯ ವಿಶೇಷ ದಿನಗಳಲ್ಲಿ ಪ್ರಮುಖವಾಗಿ ಅಕ್ಷರಭ್ಯಾಸ, ಚಾಮುಂಡೇಶ್ವರಿ ಅಲಂಕಾರ ಚಿನ್ನಲೇಪಿತ ಅಮ್ಮನವರ ಉತ್ಸವ ಮೂರ್ತಿ ಮೆರವಣಿಗೆ ನಂತರ ಉಯ್ಯಾ ಲೋತ್ಸವ ನಡೆಯಲಿದೆ ಭಕ್ತಾಧಿಗಳು ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಬಳಿಕ ಚೌಡೇಶ್ವರಿ ದೇವಾಲಯ ಅಭಿವೃದ್ಧಿ ಸಮಿತಿಯ ಸಂಚಾಲಕ ಗಂಗಾಧರ್ ಮಾತನಾಡಿ, ಅಮ್ಮನವರ ಆಶೀರ್ವಾದ ಪಡೆಯಲು ಪಕ್ಕದ ರಾಜ್ಯ ಜಿಲ್ಲೆಗಳಿಂದ ಪ್ರತಿದಿನ ದರ್ಶನಕ್ಕೆ ಆಗಮಿಸಿ ಉಚಿತವಾಗಿ ಸೇವೆ ಸಲ್ಲಿಸುತ್ತಾರೆ. ಶ್ರೀಚೌಡೇಶ್ವರಿ ಸಮುದಾಯ ಭವನ ನಿರ್ಮಾಣ ಮಾಡುವ ಉದ್ದೇಶವಿದ್ದು, ಭಕ್ತಾಧಿಗಳು ಮತ್ತು ದಾನಿಗಳು ಉದಾರ ಮನಸ್ಸಿನಿಂದ ಧನಸಹಾಯ ಹಾಗೂ ಕಟ್ಟಡ ನಿರ್ಮಾಣದ ಸಾಮಗ್ರಿಗಳನ್ನು ನೀಡಿ ಸಹಕರಿಸಬಹುದಾಗಿದೆ. ಶರನ್ನವರಾತ್ರಿ ಅಂಗವಾಗಿ ವಿಶೇಷ ಅಲಂಕಾರ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸಿ ಅಮ್ಮನವರ ಕೃಪೆಗೆ ಪಾತ್ರರಾಗಬೇಕೆಂದು ತಿಳಿಸಿದರು.

ಚೌಡೇಶ್ವರಿ ದೇವಾಲಯ ಅಭಿವೃದ್ಧಿ ಸಮಿತಿ ಸದಸ್ಯ ಎಸ್.ಆರ್.ಮುನಿರಾಜು, ಹನುಮಂತಪ್ಪ, ಗೋಪಿ, ಜಯರಾಮ್, ತೇಜು, ಮುನಿಸ್ವಾಮಿ, ರಂಗನಾಥ, ಹೇಮಂತ್, ಮಂಜುನಾಥ್ ಹಾಗೂ ಪ್ರಧಾನ ಅರ್ಚಕ ವೀರಯ್ಯ ಸ್ವಾಮಿ ಇದ್ದರು.

# ಸ್ವಚ್ಛತೆ ಕಾಣದ ರೈಲ್ವೆ ನಿಲ್ದಾಣ

ಚಿಂತಾಮಣಿ



ಕಸದ ರಾಶಿಗಳನ್ನು ವಿಲೇವಾರಿ ಮಾಡದೆ ಇರುವುದರಿಂದ ನಗರದ ರೈಲ್ವೆ ನಿಲ್ದಾಣದ ರಸ್ತೆ ಬಹುತೇಕ ಕಸದ ರಾಶಿಯಿಂದ ತುಂಬಿ ತುಳುಕುತ್ತಿದ್ದರೂ ಕೇಳುವವರೇ ಇಲ್ಲ ಎಂಬ ಆರೋಪ ಈ ಭಾಗದ ಸಾರ್ವಜನಿಕರಿಂದ ಕೇಳಿ ಬರುತ್ತಿದೆ.

ಈ ಭಾಗದ ಸಾರ್ವಜನಿಕರು ತಮ್ಮ ಮನೆಗಳ ಕಸ ಕಡ್ಡಿಗಳನ್ನು ತಂದು ಸುರಿಯುವ ಪ್ರದೇಶದಲ್ಲಿ ಇರುವ ಕಸದ ರಾಶಿಗಳನ್ನು ಕಾಲಕಾಲಕ್ಕೆ ವಿಲೇವಾರಿ ಮಾಡದೆ ಇರುವುದರಿಂದ ಈ ರಸ್ತೆ ಸಂಪೂರ್ಣವಾಗಿ ಗಬ್ಬುನಾತ ಬೀರುವಂತಾಗಿದೆ.

ಪ್ಲಾಸ್ಟಿಕ್ ಕವರ್, ಕೊಳೆತ ತರಕಾರಿ ಸಿಪ್ಪೆಗಳು, ಮನೆಗಳಲ್ಲಿ ಇದ್ದ ತ್ಯಾಜ್ಯ ವಸ್ತುಗಳು ಕಸದ ರಾಶಿ ಸೇರಿ ದಿನೇ ದಿನೇ ಹೆಚ್ಚಿನ ಪ್ರಮಾಣದಲ್ಲಿ ಶೇಖರ ಣೆಗೊಂಡು ಅವು ಇತ್ತೀಚೆಗೆ ಬಿದ್ದ ತುಂತುರು ಹನಿಗಳ ತೇವಾಂಶದಿಂದ ತ್ಯಾಜ್ಯ ವಸ್ತುಗಳು ಕೊಳೆತು ಕ್ರಿಮಿ ಕೀಟಗಳು ಉತ್ಪತ್ತಿ ಆಗುವ ತಾಣವಾಗಿದ್ದರೂ, ಸಂಬಂಧ ಪಟ್ಟ ನಗರಸಭೆ ಅಧಿಕಾರಿಗಳು ಕಾಲ ಕಾಲಕ್ಕೆ ಸರಿಯಾಗಿ ವಿಲೇವಾರಿ ಮಾಡದೆ ನಿರ್ಲಕ್ಷ್ಯ ತೋರುತ್ತಿರುವುದರಿಂದ ಲೋಡ್ ಗಟ್ಟಲೆ ಕಸ ಸಂಗ್ರಹಣೆಗೊಂಡು ಮೂಗು ಮುಚ್ಚಿಕೊಂಡು ಓಡಾಡುವ ದುಸ್ಥಿತಿ ಬಂದಿದ್ದರೂ ಕೇಳುವವರಿಲ್ಲ ಎಂಬ ಪ್ರಶ್ನೆ ಕೇಳಿ ಬರುತ್ತಿದೆ. ಪ್ರತಿ ನಿತ್ಯ ಬೆಳಗಾದರೆ ಈ ರಸ್ತೆಯಲ್ಲಿ ರೈಲಿಗೆ ಹೋಗುವವರು ಈ ರಸ್ತೆಯಲ್ಲಿ ಹೋಗುವಾಗ ಮೂಗು ಮುಚ್ಚಿಕೊಂಡು ಓಡಾಡಬೇಕು, ಸ್ಥಳೀಯರಂತೂ ಯಾವುದೋ ಗ್ರಾಮದಲ್ಲಿ ವಾಸಿಸುವ ಸ್ಥಿತಿಯಲ್ಲಿ ಇರುವ ಸನ್ನಿವೇಶ ನೆನಪಾಗುತ್ತದೆ ಎಂಬ ಅಸಹನೆ ವ್ಯಕ್ತಪಡಿಸುತ್ತಿದ್ದಾರೆ.

ಈಗಾಗಲೇ ಈ ಭಾಗದ ಹಲವರು ಕ್ರಿಮಿ ಕೀಟಗಳು, ಸೊಳ್ಳೆಗಳ ಕಾಟ ದಿಂದ ತತ್ತರಿಸಿ ಹೋಗಿದ್ದಾರೆ, ಕೆಲವರು ಅನಾರೋಗ್ಯಕ್ಕೀಡಾಗಿ ಆಸ್ಪತ್ರೆ ಪಾಲಾಗುತ್ತಿದ್ದರೆ ಮತ್ತೇ ಕೆಲವರ ಪಾಲಿಗೆ ಬಂದದ್ದು ಪಂಚಾಮೃತ ಎಂಬಂತೆ ಗಬ್ಬುನಾತದಲ್ಲೇ ಕಾಲ ಕಳೆಯುವಂತೆ ಆಗಿದ್ದು, ಸ್ವಚ್ಚತೆ ಮರೀಚಿಕೆ ಆಗಿದೆ ಎಂಬ ನೋವು ಜನರಿಂದ ವ್ಯಕ್ತವಾಗುತ್ತಿದೆ.

ಗಮನ ನೀಡದ ನಗರಸಭೆ: ಕೇವಲ ನಗರದ ಮುಖ್ಯ ಬೀದಿಗಳಲ್ಲಿ ಮಾತ್ರ ಕಸವನ್ನು ವಿಲೇವಾರಿ ಮಾಡಲು ಆದ್ಯತೆ ನೀಡುವ ನಗರಸಭೆ ಅಧಿಕಾರಿಗಳು ಬಡ ವರ್ಗದ ಜನರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಸಕಾಲಕ್ಕೆ ಕಸದ ರಾಶಿಗಳನ್ನು ವಿಲೇವಾರಿ ಮಾಡದೆ ನಿರ್ಲಕ್ಷ್ಯ ತೋರುತ್ತಿದ್ದು, ಈಗಲಾದರೂ ಈ ರೈಲ್ವೆ ನಿಲ್ದಾಣದ ರಸ್ತೆಯಲ್ಲಿರುವ ಕಸದ ರಾಶಿಗಳನ್ನು ವಿಲೇವಾರಿ ಮಾಡಲು ಮುಂದಾಗಬೇಕೆಂಬುದು ಈ ಭಾಗದ ಸಾರ್ವಜನಿಕರ ಆಗ್ರಹವಾಗಿದೆ.

# ವಿವಿಧ ಬೇಡಿಕೆಗಳಿಗೆ ಒತ್ತಾಯ

ತಿಪಟೂರು

ನಗರದ ಆಡಳಿತ ಸೌಧದ ಮುಂಭಾಗ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತಾಧಿಕಾರಿಗಳ ಸಂಘದಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಯಿತು.

ತಾಲೂಕು ಗ್ರಾಮ ಆಡಳಿತಾಧಿಕಾರಿಗಳ ಸಂಘದ ಅಧ್ಯಕ್ಷ ರವಿಕುಮಾರ್ ಮಾತನಾಡಿ, ಗ್ರಾಮ ಆಡಳಿತಾಧಿಕಾರಿಗಳು ಗ್ರಾಮೀಣ ಭಾಗದ ಸಂಪೂರ್ಣ ಜವಾಬ್ದಾರಿ ನಿರ್ವಹಿಸಬೇಕಿದ್ದು, ಪ್ರತಿಯೊಂದು ಕೆಲಸಕ್ಕೂ ಗ್ರಾಮ ಆಡಳಿತಾಧಿಕಾರಿಗಳನ್ನು ನೇಮಕ ಮಾಡುತ್ತಿದೆ, ಹಲವಾರು ಹೊಸ ಹೊಸ ಯೋಜನೆಗಳನ್ನು ರೂಪಿಸುತ್ತಿದ್ದು, ಮಾತೃ ಇಲಾಖೆಯಾದ ಕಾರಣ ಕಂದಾಯ ಇಲಾಖೆಗೆ ಯೋಜನೆ ಅನುಷ್ಠಾನದ ಜವಾಬ್ದಾರಿ ನೀಡುತ್ತಿರುವ ಕಾರಣ, ಗ್ರಾಮೀಣ ಭಾಗದಲ್ಲಿ ಕೆಲಸ ನಿರ್ವಹಿಸುವ ಗ್ರಾಮ ಆಡಳಿತಾಧಿಕಾರಿಗಳು ಹೆಚ್ಚಿನ ಒತ್ತಡಕ್ಕೆ ಒಳಗಾಗಿದ್ದಾರೆ. ಕೆಲಸದ ಒತ್ತಡದಿಂದಾಗಿ ಹಲವಾರು ಗ್ರಾಮ ಆಡಳಿತಾಧಿಕಾರಿಗಳು ವಿವಿಧ ಕಾಯಿಲೆಗಳಿಗೆ ತುತ್ತಾಗಿ ಸಾವನ್ನಪಿದ್ದಾರೆ ಕೆಲವರು ಇಲಾಖೆಯಿಂದಲೂ ಶಿಕ್ಷೆಗೆ ಗುರಿಯಾಗಿದ್ದಾರೆ. ಗ್ರಾಮ ಆಡಳಿತಾಧಿಕಾರಿಗಳಿಗೆ ಗ್ರಾಮೀಣ ಪ್ರದೇಶಗಳಲ್ಲಿ ಇರುವಂತಹ ಕಾರ್ಯಭಾರದ ಒತ್ತಾಡಗಳ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೂ ತರಲಾಗಿದೆ. 17ಕ್ಕೂ ಹೆಚ್ಚು ಹೊಸ ತಂತ್ರಾಂಶದ ಆಪ್‌ಗಳನ್ನ ನೀಡಿರುವ ಕಾರಣ ಕೆಲಸದ ಒತ್ತಡ ಹೆಚ್ಚಾಗಿರುವುದು ಸಹಜ. ಆದರೆ ಕೆಲಸದ ಒತ್ತಡ ಕಡಿಮೆ ಮಾಡಲು, ಸರಕಾರವೂ ಸಹ ಹಲವಾರು ಕ್ರಮಗಳನ್ನ ಕೈಗೊಂಡಿದೆ. ಸಿಬ್ಬಂದಿ ನೇಮಕಾತಿ ಹಾಗೂ ಮೂಲ ಸೌಕರ್ಯ ನೀಡಲು ಕ್ರಮವಹಿಸುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ಸಹಕರಿಸಲು ಸಿಬ್ಬಂದಿಗೆ ಮನವಿ ಮಾಡಲಾಗಿದೆ. ನಮ್ಮ ಗ್ರಾಮ ಆಡಳಿತಾಧಿಕಾರಿಗಳ ಬೇಡಿಕೆಗಳನ್ನು ಸರಕಾರದ ಗಮನಕ್ಕೆ ತರಲಾಗಿದೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಕಂದಾಯ ನೌಕರರ ಸಂಘದ ಅಧ್ಯಕ್ಷ ರವಿಕುಮಾರ್, ತಾಲೂಕು ಗ್ರಾಮ ಸಹಾಯಕರ ಸಂಘ ಸಂಪೂರ್ಣ ಬೆಂಬಲ ಸೂಚಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದರು. ಗ್ರಾಮ ಆಡಳಿತಾಧಿಕಾರಿಗಳ ಸಂಘದ ಉಪಾಧ್ಯಕ್ಷ ರವಿಶಂಕರ್, ದೀಪಕ್ ಬೂದಾಳ್, ರವಿಕುಮಾರ್, ಗ್ರೇಡ್ 2 ತಹಶೀಲ್ದಾರ್ ಜಗನ್ನಾಥ್, ಭವ್ಯ, ಯಮುನ, ಶಾಲಿನಿ, ಮನು ನಾಯಕ್, ಶಿವರಾಮ್, ಶ್ರೀಹರ್ಷ ಉಪಸ್ಥಿತರಿದರು.

# ವಿಶ್ವ ಹಿರಿಯ ನಾಗರಿಕರ ದಿನಾಚರಣೆ

ರಾಮನಗರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗ್ರಾಮೀಣ ಪುನರ್ವಸತಿ ಯೋಜನೆಯ ಕಾರ್ಯಕರ್ತರು ಹಾಗೂ ವಿವಿಧ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಬೆಳಿಗ್ಗೆ 10.30ಕ್ಕೆ ನಗರದ ಜಿ.ಪಂ. ಸಭಾಂಗಣದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಉಪ ಮುಖ್ಯಮಂತ್ರಿಗಳು, ಭಾರಿ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರ ಸಚಿವರಾದ ಡಿ.ಕೆ. ಶಿವಕುಮಾರ್ ಕಾರ್ಯಕ್ರಮ ಉದ್ಘಾಟಿಸುವರು..

ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಬೆಂಗಳೂರು (ಗ್ರಾ) ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ. ಸುಧಾಕರ್, ವಿಧಾನ ಪರಿಷತ್ ಶಾಸಕ ಎಸ್. ಪುಟ್ಟಣ್ಣ, ಎಸ್ ರವಿ, ಎನ್. ಶ್ರೀನಿವಾಸ್, ಸಿ.ಪಿ. ಯೋಗೇಶ್ವರ, ಎಚ್.ಪಿ ಸುಧಾಮ್‌ದಾಸ್, ರಾಮೋಜಿಗೌಡ, ರಾಮನಗರ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಕೆ.ರಾಜು, ಬಿ.ಎಂ.ಐ.ಸಿ.ಪಿ.ಎ. ಅಧ್ಯಕ್ಷರಾದ ರಘುನಂದನ್ ರಾಮಣ್ಣ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎನ್. ನಟರಾಜು ಗಾಣಕಲ್, ನಗರಾಭಿವೃದ್ಧಿ ಪ್ರಾಧಿಕಾರದ ಚೇತನ್ ಕುಮಾರ್ ಎ.ಬಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ದಸರಾ ಅಂಗವಾಗಿ ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಪೂಜಿಸುವ ಚಾಮುಂಡೇಶ್ವರಿ ದೇವಿಯನ್ನು ಶರನ್ನವರಾತ್ರಿಯ ಮೊದಲ ದಿನ ಇದೇ 3ರಂದು ಬೆಳಿಗ್ಗೆ 5.30 ಗಂಟೆಗೆ ಬ್ರಾಹ್ಮಿ ಮುಹೂರ್ತದಲ್ಲಿ ಪ್ರಾರಂಭಿಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಚೇರಿಯಲ್ಲಿ ಸೋಮವಾರ ದಸರಾ ಉತ್ಸವದ ವಿವಿಧ ಸಮಿತಿಗಳ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ದೇವಿಯನ್ನು ಶುಭ ಮುಹೂರ್ತದಲ್ಲಿ ಪ್ರತಿಷ್ಠಾಪಿಸುವುದರೊಂದಿಗೆ ಇದೇ 12ರವರೆಗೂ ಪ್ರತೀ ದಿನ ಬ್ರಾಹ್ಮಿ ಮುಹೂರ್ತದಲ್ಲಿ ಪುಣ್ಯಾಹ, ಗಣಪತಿ ಪೂಜೆ, ಪ್ರಧಾನ ಕಳಶಾರಾಧನೆ, ಪಂಚಾಮೃತ ಅಭಿಷೇಕ, ಹೋಮ–ಹವನ, ಮಹಾ ಮಂಗಳಾರತಿ, ಭಕ್ತಾಧಿಗಳಿಗೆ ತೀರ್ಥ ಪ್ರಸಾದ ವಿನಿಯೋಗ ಸೇರಿದಂತೆ ಎಲ್ಲಾ ಪೂಜಾ ವಿಧಾನಗಳು ಸಾಂಗವಾಗಿ ನಡೆಸಬೇಕು ಎಂದು ನಿರ್ದೇಶನ ನೀಡಿದರು.

ದಸರಾ ಸಂದರ್ಭದಲ್ಲಿ ಪೂಜಾ ವಿಧಿ– ವಿಧಾನಗಳೊಂದಿಗೆ ಪ್ರತಿ ದಿನ ಸಂಜೆ ಹರಿಕಥೆ, ಭಜನೆ, ಭಕ್ತಿಗೀತೆ, ಮತ್ತಿತರ ಭಕ್ತಿ ಪ್ರಧಾನ ಕಾರ್ಯಕ್ರಮಗಳನ್ನು ಏರ್ಪಡಿಸಲು ಕ್ರಮಕೈಗೊಳ್ಳಬೇಕು. ಜೂನಿಯರ್ ಕಾಲೇಜು ಮೈದಾನದಲ್ಲಿ ವೇದಿಕೆ ಸಿದ್ಧತೆ ಹಾಗೂ ಅಲಂಕಾರ, ನಿರಂತರ ವಿದ್ಯುತ್ ಸರಬರಾಜು, ಭಕ್ತಾದಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ನಗರ ಸ್ವಚ್ಛಗೊಳಿಸುವುದರೊಂದಿಗೆ ನಗರದಾದ್ಯಂತ ಎಲ್ಲಾ ಸರ್ಕಾರಿ ಇಲಾಖೆಗಳ ಕಚೇರಿ ಕಟ್ಟಡ ಹಾಗೂ ಪ್ರಮುಖ ಬೀದಿಗಳನ್ನು ವಿಶೇಷವಾಗಿ ವಿದ್ಯುತ್ ದೀಪಗಳಿಂದ ಕಂಗೊಳಿಸುವಂತೆ ಅಲಂಕರಿಸಬೇಕು ಎಂದು ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಜಿ.ಪ್ರಭು ಮಾತನಾಡಿ, ದಸರಾ ಉತ್ಸವ ಪ್ರಯುಕ್ತ ಇದೇ 12ರಂದು ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯಲ್ಲಿ ದೇವಿಯನ್ನು ಕೂರಿಸಿರುವ ಅಲಂಕೃತ ಅಂಬಾರಿ ಹೊತ್ತ ಆನೆ, ವಿಂಟೇಜ್ ಕಾರ್, ಹುಲಿವೇಷ, ಚಿಟ್ಟಿಮೇಳ, ವೀರಗಾಸೆ ಸೇರಿದಂತೆ ವಿವಿಧ ಕಲಾ ತಂಡಗಳು, ಹಳ್ಳಿಕಾರ್ ಎತ್ತುಗಳು, 70 ವಿವಿಧ ದೇವರ ಉತ್ಸವ ಮೂರ್ತಿಗಳು ಪಾಲ್ಗೊಳ್ಳಲಿವೆ ಎಂದು ತಿಳಿಸಿದರು. ಕಚೇರಿಯಲ್ಲಿ ಸೋಮವಾರ ದಸರಾ ಉತ್ಸವದ ವಿವಿಧ ಸಮಿತಿಗಳ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ದೇವಿಯನ್ನು ಶುಭ ಮುಹೂರ್ತದಲ್ಲಿ ಪ್ರತಿಷ್ಠಾಪಿಸುವುದರೊಂದಿಗೆ ಇದೇ 12ರವರೆಗೂ ಪ್ರತೀ ದಿನ ಬ್ರಾಹ್ಮಿ ಮುಹೂರ್ತದಲ್ಲಿ ಪುಣ್ಯಾಹ, ಗಣಪತಿ ಪೂಜೆ, ಪ್ರಧಾನ ಕಳಶಾರಾಧನೆ, ಪಂಚಾಮೃತ ಅಭಿಷೇಕ, ಹೋಮ–ಹವನ, ಮಹಾ ಮಂಗಳಾರತಿ, ಭಕ್ತಾಧಿಗಳಿಗೆ ತೀರ್ಥ ಪ್ರಸಾದ ವಿನಿಯೋಗ ಸೇರಿದಂತೆ ಎಲ್ಲಾ ಪೂಜಾ ವಿಧಾನಗಳು ಸಾಂಗವಾಗಿ ನಡೆಸಬೇಕು ಎಂದು ನಿರ್ದೇಶನ ನೀಡಿದರು.

ದಸರಾ ಸಂದರ್ಭದಲ್ಲಿ ಪೂಜಾ ವಿಧಿ– ವಿಧಾನಗಳೊಂದಿಗೆ ಪ್ರತಿ ದಿನ ಸಂಜೆ ಹರಿಕಥೆ, ಭಜನೆ, ಭಕ್ತಿಗೀತೆ, ಮತ್ತಿತರ ಭಕ್ತಿ ಪ್ರಧಾನ ಕಾರ್ಯಕ್ರಮಗಳನ್ನು ಏರ್ಪಡಿಸಲು ಕ್ರಮಕೈಗೊಳ್ಳಬೇಕು. ಜೂನಿಯರ್ ಕಾಲೇಜು ಮೈದಾನದಲ್ಲಿ ವೇದಿಕೆ ಸಿದ್ಧತೆ ಹಾಗೂ ಅಲಂಕಾರ, ನಿರಂತರ ವಿದ್ಯುತ್ ಸರಬರಾಜು, ಭಕ್ತಾದಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ನಗರ ಸ್ವಚ್ಛಗೊಳಿಸುವುದರೊಂದಿಗೆ ನಗರದಾದ್ಯಂತ ಎಲ್ಲಾ ಸರ್ಕಾರಿ ಇಲಾಖೆಗಳ ಕಚೇರಿ ಕಟ್ಟಡ ಹಾಗೂ ಪ್ರಮುಖ ಬೀದಿಗಳನ್ನು ವಿಶೇಷವಾಗಿ ವಿದ್ಯುತ್ ದೀಪಗಳಿಂದ ಕಂಗೊಳಿಸುವಂತೆ ಅಲಂಕರಿಸಬೇಕು ಎಂದು ಸೂಚನೆ ನೀಡಿದರು.

ದಸರಾ ಪ್ರಯುಕ್ತ ಇದೇ 11 ಮತ್ತು 12ರಂದು ಸಂಜೆ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದ ಪ್ರಧಾನ ವೇದಿಕೆಯಲ್ಲಿ ಖ್ಯಾತ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮ, ರಸಸಂಜೆ, ಡ್ರೋಣ್ ಶೋ, ಬಾಣ– ಬಿರುಸುಗಳ ಪ್ರದರ್ಶನ, ವಸ್ತು ಪ್ರದರ್ಶನಗಳು ನಡೆಯಲಿವೆಯಲ್ಲದೆ, ಯುವ ದಸರಾದ ಅಂಗವಾಗಿ ಇದೇ 6 ರಿಂದ 10ರವರೆಗೆ ಗುಬ್ಬಿ ವೀರಣ್ಣ ಕಲಾ ಕ್ಷೇತ್ರದಲ್ಲಿಯೂ ಸಹ ಖ್ಯಾತ ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿ ಕೊಡಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಪಾಲಿಕೆ ಆಯುಕ್ತ ಬಿ.ವಿ.ಅಶ್ವಿಜ, ಅರಣ್ಯ ಉಪ ಸಂರಕ್ಷಣಾಧಿಕಾರಿ ಅನುಪಮ, ಮುಜರಾಯಿ ತಹಶೀಲ್ದಾರ್ ಸವಿತ, ಅರ್ಚಕರ ಸಂಘದ ಅಧ್ಯಕ್ಷ ರಾಮತೀರ್ಥನ್, ವಿವಿಧ ದೇವಾಲಯದ ಧರ್ಮಾಧಿಕಾರಿಗಳು, ದಸರಾ ಉತ್ಸವ ಸಮಿತಿಗಳ ಪತ್ರಕರ್ತ ಸದಸ್ಯರು, ವಿವಿಧ ಅಧಿಕಾರಿಗಳು ಹಾಜರಿದ್ದರು.

# ನಿತ್ಯ ಮಕ್ಕಳಿಗೆ ಮೊಟ್ಟೆ ನೀಡುವ ಯೋಜನೆ ಸದ್ಬಳಕೆ ಮಾಡಿಕೊಳ್ಳಿ: ಶಾಸಕಿ



ಕೆಜಿಎಫ್

ಸರ್ಕಾರಿ ಶಾಲೆಗಳ ಮಕ್ಕಳಲ್ಲಿನ ಅಪೌಷ್ಟಿಕತೆ ನಿವಾರಣೆಗಾಗಿ ರಾಜ್ಯ ಸರ್ಕಾರ ಅಜೀಂಪ್ರೇಮ್‌ಜಿ ಫೌಂಡೇಷನ್ ಸಹಭಾಗಿತ್ವದಲ್ಲಿ ಶಾಲಾ ಮಕ್ಕಳಿಗೆ ಮೊಟ್ಟೆ,ಶೇಂಗಾ ಚಿಕ್ಕಿ ಅಥವಾ ಬಾಳೆಹಣ್ಣು ವಿತರಿಸುತ್ತಿದ್ದು, ಇದರ ಸದುಪಯೋಗ ಪಡೆದು ಶೈಕ್ಷಣಿಕವಾಗಿ ಸಾಧನೆ ಮಾಡಿ ಎಂದು ಶಾಸಕಿ ರೂಪಕಲಾ ಶಶಿಧರ್ ಹೇಳಿದರು.

ನಗರದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಕರ್ನಾಟಕ ಸರ್ಕಾರ ಹಾಗೂ ಅಜೀಂ ಪ್ರೇಮ್‌ಜಿ ಫೌಂಡೇಶನ್ ಸಹಭಾಗಿತ್ವದಲ್ಲಿ ವಾರದ ಎಲ್ಲಾ 6 ಶಾಲಾ ದಿನಗಳಲ್ಲಿಯೂ ಮೊಟ್ಟೆ, ಶೇಂಗಾ ಚಿಕ್ಕಿ ಅಥವಾ ಬಾಳೆಹಣ್ಣು ವಿತರಿಸುವ ಕಾಯಕ್ರಮಕ್ಕೆ ಚಾಲನೆ ನೀಡಿ, ಮಕ್ಕಳೊಂದಿಗೆ ನೆಲದಲ್ಲಿ ಕುಳಿತು ಊಟ ಸವಿದು ಮಾತನಾಡಿದರು.

ಈ ಹಿಂದೆ ವಾರದಲ್ಲಿ 2 ದಿನ ಮಾತ್ರ ಮಕ್ಕಳಿಗೆ ಮೊಟ್ಟೆಯನ್ನು ರಾಜ್ಯ ಸರ್ಕಾರ ನೀಡುತ್ತಿತ್ತು, ಆದರೆ ಇದೀಗ ಅಜೀಂ ಪ್ರೇಮ್‌ಜಿ ಫೌಂಡೇಷನ್ ಉಳಿದ 4 ಶಾಲಾ ದಿನಗಳಲ್ಲೂ ಮೊಟ್ಟೆ ವಿತರಣೆಗೆ ಉದಾರ ರೂಪದಲ್ಲಿ 1500 ಕೋಟಿ ರೂ. ಅನುದಾನ ನೀಡಿದ್ದು, ಇದೀಗ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲೂ ಈ ಯೋಜನೆ ಜಾರಿಗೆ ಬಂದಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ಪ್ರವೀಣ್ ಕುಮಾರ್, ಯುವರಾಜ್, ದಿನೇಶ್, ಶಾಸಕರ ಸೋಮಶೇಖರ್, ಕೃಷ್ಣಮೂರ್ತಿ, ಸುರೇಶ್, ಕೇಶವರೆಡ್ಡಿ, ಎಂ. ಶ್ರೀನಿವಾಸ್, ಆನಂದರೆಡ್ಡಿ, ಶಾಲೆಯ ಶಿಕ್ಷಕರಾದ ಅನುರಾಧ ಮುತಾಲಿಕ್, ಕವಿತಾ, ಕೋಮಲಾ, ಲೀಲಾವತಿ, ಮುಜಾಮಿಲ್, ಪ್ರೇಮವಾಣಿ, ಜೆ.ಕವಿತಾ ಮತ್ತಿತರರಿದ್ದರು.

# 'ರೈತರು ಆರ್ಥಿಕ ಅಭಿವೃದ್ಧಿ ಹೊಂದಲು ಸಲಹೆ'

ಕೋಲಾರ

ತಾಲೂಕಿನ ಹಂಚಾಳ ಗೇಟ್‌ನಲ್ಲಿರುವ ರೈತ ಉತ್ಪಾದಕರ ಕಂಪನಿಯ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಸಂಘದ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ವಿಕಸನ ಸಂಸ್ಥೆಯ ಕೆಂಪಯ್ಯ ಮಾತನಾಡಿ, ಜಿಲ್ಲೆಯ ರೈತರು ತುಂನಾ ಶ್ರಮಜೀವಿಗಳು, ಏನೇ ಕಷ್ಟ ಬಂದರೂ ಎದರದೆ ಮುನ್ನುಗ್ಗುವ ಛಲಗಾರರು. ರೈತ ಉತ್ಪಾದಕ ಸಂಸ್ಥೆಯಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳುವ ಮೂಲಕ ಕಂಪನಿಯ ಬಲವರ್ಧನೆಗೆ ಮುಂದಾಗಿ ಎಂದರು.

ರೈತರು ಆಯಾ ಕಾಲಮಾನಕ್ಕೆ ತಕ್ಕಂತ ಬೆಳೆಗಳನ್ನು ಬೆಳೆಯುವ ಮೂಲಕ ಆದಾಯವನ್ನು ಗಳಿಸಬೇಕು, ಮಣ್ಣಿನ ಫಲವತ್ತತೆ ಗುಣಲಕ್ಷಣಗಳ ಬಗ್ಗೆ ವೈಜ್ಞಾನಿಕ ಮಾಹಿತಿ ಪಡೆದುಕೊಳ್ಳಬೇಕೆಂದರು.

ಈ ವೇಳೆ ಸೆಹಗಲ್ ಪೌಂಡೇಶನ್‌ನ ವಿಜಯ್‌ಪುಲಿ ಮಾತನಾಡಿದರು.

ಸಭೆಯಲ್ಲಿ ಮಾರುಕಟ್ಟೆ ಅಧಿಕಾರಿ ರವೀಂದ್ರ ಚಾವನ್, ಚನ್ನಪ್ಪ ಪಿ, ನಿರ್ದೇಶಕ ಮುನಿವೆಂಕಟಪ್ಪ, ನಾಗರಾಜು ಎನ್, ಯಶೋಧ ಎನ್, ಲಕ್ಷ್ಮಣ, ವೆಂಕಟರಾಜು, ಗೋಪಾಲಪ್ಪ, ಸಂತೋಷ್‌ಕುಮಾರ್, ಪ್ರಕಾಶ್ ಬಾಬು ಕಂಪನಿಯ ಷೇರುದಾರರರು ಉಪಸ್ಥಿತರಿದ್ದರು.

# ಅನಾಥ ಮಕ್ಕಳಿಗೆ ಕಂಪ್ಯೂಟರ್ ವಿತರಣೆ

ಚಿಕ್ಕಬಳ್ಳಾಪುರ



ಸಮಾಜ ಸೇವಕ ಕೆವಿ ಮತ್ತು ಪಂಚಗಿರಿ ದತ್ತಿ ಅಧ್ಯಕ್ಷ ಕೆ.ವಿ. ನವೀನ್ ಕಿರಣ್ ಅವರ ಹುಟ್ಟುಹಬ್ಬದ ಅಂಗವಾಗಿ ನಗರದ ಕಂದವಾರ ಪೇಟೆಯಲ್ಲಿನ ವೆಂಕಟಮ್ಮ ಗುರುಕುಲ ಆಶ್ರಮದ ಅನಾಥ ಮಕ್ಕಳಿಗಾಗಿ ಸಮಾನ ಮನಸ್ಕರ ಪರಿಸರ ವೇದಿಕೆಯಿಂದ ಉಚಿತ ಕಂಪ್ಯೂಟರ್ ವಿತರಣೆ ಮಾಡಲಾಯಿತು.

ಜಿಲ್ಲೆ ಆಗುವುದಕ್ಕೂ ಮುನ್ನ ಚಿಕ್ಕಬಳ್ಳಾಪುರ ಶೈಕ್ಷಣಿಕ ಜಿಲ್ಲೆಯಾಗಿ ಹೊರ ಹೊಮ್ಮಲು ಮಾಜಿ ಶಾಸಕ ದಿವಂಗತ ಸಿ.ಬಿ. ವೆಂಕಟರಾಯಪ್ಪನವರ ಕೊಡುಗೆ ಅಪಾರ ಅವರ ನಂತರದ ದಿನಗಳಲ್ಲಿ ಅವರ ಕುಡಿ ಕೆ.ವಿ. ನವೀನ್ ಕಿರಣ್ ಅವರು ಪ್ರತಿ ನಿತ್ಯವೂ ಹತ್ತು ಹಲವಾರು ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಮಾಜಕ್ಕೆ ತನ್ನದೇ ಆದ ಕೊಡುಗೆಯನ್ನು ನೀಡುತ್ತಾ ಬಂದಿದ್ದು, ಅದರಂತೆ ರಾಜಕೀಯವಾಗಿ, ಸಾಮಾಜಿಕವಾಗಿ ಜನಪರ ನಿಲುವುಳ್ಳ ನವೀನ್ ಕಿರಣ್ ಅವರು ತಮ್ಮ ಒಡೆತನದ ಶಿಕ್ಷಣ ಸಂಸ್ಥೆಗಳ ಮೂಲಕ ಸಹಸ್ರಾರ ಮಂದಿ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಾ ಬಂದಿರುವುದು ಅಲ್ಲದೇ ಸಹಸ್ರಾರು ಮಂದಿಯ ಜೀವನೋಪಾಯಕ್ಕೆ ಅಡಿಪಾಯ ಹಾಕಿದ್ದಾರೆ ಇಂತಹವರು ಸಮಾಜಕ್ಕೆ ಆದರ್ಶ ಪುರುಷರಾಗಿದ್ದಾರೆ.

ಇದನ್ನ ಮನಗಂಡ ಚಿಕ್ಕಬಳ್ಳಾಪುರದ ಸಮಾನ ಮನಸ್ಕ ಪರಿಸರ ವೇದಿಕೆ ಪದಾಧಿಕಾರಿಗಳು ಕೆ.ವಿ. ನವೀನ್ ಕಿರಣ್ ಅವರ ಹೆಸರಿನಲ್ಲಿ ಸಾಪ್ತಾಹಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅದರ ಎರಡನೇ ದಿನದ ಕಾರ್ಯಕ್ರಮವಾಗಿ ಗುರು ಕಲಾಶ್ರಮದ ಅನಾಥ ಮಕ್ಕಳಿಗೆ ಉಪಯುಕ್ತಕರವಾಗಲಿ ಎಂಬ ಕಾರಣಕ್ಕೆ ಇಂದು ಉಚಿತ ಕಂಪ್ಯೂಟರ್ ನೀಡಲಾಗಿದ್ದು, ಇದು ಸದುಪಯೋಗ ಆಗಲಿ ಎಂದು ಸಮಾನ ಮನಸ್ಕರ ಪರಿಸರ ವೇದಿಕೆಯ ಸದಸ್ಯ ಕೆ.ಎಸ್. ನಾರಾಯಣಸ್ವಾಮಿ ತಿಳಿಸಿದರು.

ಕಂದವಾರ ಪೇಟೆಯಲ್ಲಿನ ಗುರುಕು ಲಾಶ್ರಮದಲ್ಲಿ ನಡೆದ ಸರಳ ಕಾರ್ಯಕ್ರಮಕ್ಕೆ ಕೆ.ವಿ. ಪಂಚಗಿರಿ ದತ್ತಿಯ ವ್ಯವಸ್ಥಾಪಕ ಕೆ.ಆರ್. ಲಕ್ಷ್ಮಣ ಸ್ವಾಮಿ ದೀಪ ಬೆಳಗಿ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಸಮಾನಮನಸ್ಕಾರ ಪರಿಸರ ವೇದಿಕೆಯ ಮತ್ತೊರ್ವ ಸದಸ್ಯ ಹೆಲ್ಮೆಟ್ ರಾಮಣ್ಣ ಮಾತನಾಡಿದರು.

ಈ ವೇಳೆ ಕೆ.ವಿ.ನವೀನ್ ಕಿರಣ್ ಅಭಿಮಾನಿ ಬಳಗದ ಜಿಲ್ಲಾಧ್ಯಕ್ಷ ಗುಂಪು ಮರದ ಆನಂದ್ ಮಾತನಾಡಿ, ನವೀನ್ ಕಿರಣ್ ರವರು ಒಬ್ಬ ವ್ಯಕ್ತಿಯಲ್ಲ ಅವರು ಶಕ್ತಿ, ದಾನ ಧರ್ಮ ಮಾಡುವುದರಲ್ಲಿ ಅವರು ಚಿಕ್ಕಬಳ್ಳಾಪುರದ ಕರ್ಣ, ಅವರ ಸೇವಾ ಗುಣಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಗುರುಕುಲ ಆಶ್ರಮದ ಮೇಲ್ವಿಚಾರಕರಾದ ನಾರಾಯಣಸ್ವಾಮಿ, ಸಮಾನ ಮನಸ್ಕರ ಪ್ರಕೃತಿ ವೇದಿಕೆಯ ಖಲೀಲ್, ಹೋಟೆಲ್ ರಾಮಣ್ಣ, ವೆಂಕಟಪತಪ್ಪ ಕನ್ನಡ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕ ಈಶ್ವರ್ ಇದ್ದರು.

# ವಿವಿಧ ಬೇಡಿಕೆ ಈಡೇರಿಸಲು ಒತ್ತಾಯ

ಕೋಲಾರ



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು ಮತ್ತು ನೌಕರರ ವೃಂದ ಸಂಘಗಳು ಹಾಗೂ ಗ್ರಾ.ಪಂ. ಸದಸ್ಯರ ಒಕ್ಕೂಟದ ನೇತೃತ್ವದಲ್ಲಿ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಇದೇ 4 ರಿಂದ ರಾಜ್ಯಾದ್ಯಂತ ಗ್ರಾ.ಪಂ. ಸೇವೆಗಳನ್ನು ನಿಲ್ಲಿಸಿ ಅನಿರ್ಧಿಷ್ಟಾವಧಿ ಹೋರಾಟ ಹಮ್ಮಿಕೊಂಡಿರುವುದಾಗಿ ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ವತಿಯಿಂದ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಶಿವಕುಮಾರ್‌ಗೆ ಮನವಿ ಸಲ್ಲಿಸಲಾಯಿತು.

ರಾಜ್ಯದ ಶೇ. 68 ರಿಂದ 70 ಜನರಿಗೆ ಸ್ಥಳೀಯ ಸಂಸ್ಥೆಯಾದ ಗ್ರಾಮ ಪಂಚಾಯಿತಿಗಳಿಂದ ಶೇ. 70ರಷ್ಟು ಸೇವೆಗಳನ್ನು ನೀಡಲಾಗುತ್ತಿದೆ, ಈ ವ್ಯವಸ್ಥೆಯಲ್ಲಿ ಕೆಲಸ ಮಾಡುತ್ತಿರುವ ಗ್ರಾಮ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಗ್ರಾಮ ಪಂಚಾಯಿತಿಯ ಎಲ್ಲಾ ಪಂಚ ನೌಕರಾದ, ಡಿ.ಇ.ಓ ಕರ ವಸೂಲಿಗಾರರು, ಜಲಗಾರರು, ಕಚೇರಿ ಸಹಾಯಕರು, ಸ್ವಚ್ಛತಾಗಾರರು ತಮ್ಮ ಕಾರ್ಯ ನಿರ್ವಹಣೆಯಲ್ಲಿ ಎದುರಿಸುತ್ತಿರುವ ಹಲವು ಸಮಸ್ಯೆಗಳನ್ನು ಬಗೆಹರಿಸುವಂತೆ ಹಾಗೂ ಸೂಕ್ಷ್ಮ ವ್ಯವಸ್ಥೆ ಕಲ್ಪಿಸುವಂತೆ ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸುತ್ತಾ ಬಂದರು, ಯಾವುದೇ ಮನವಿಗೂ ಸ್ಪಂದಿಸದೆ ಕೇವಲ ಎಲ್ಲಾ ಸಮಸ್ಯೆಗಳಿಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು, ನೌಕರರ ಹಾಗೂ ಸಿಬ್ಬಂದಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡುತ್ತಿರುವ, ಸರ್ಕಾರ ಮತ್ತು ಇಲಾಖೆಯ ಧೋರಣೆ ಖಂಡಿಸಿ, ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ, ಗ್ರಾ.ಪಂ. ಸೇವೆಗಳಾದ ಬಾಪೂಜಿ ಸೇವೆ ಕೇಂದ್ರದ ಸೇವೆಗಳು, ಗ್ರಾಮ ಕಸ ಸಂಗ್ರಹಣೆ, (ಕುಡಿಯುವ ನೀರು ಸರಬರಾಜು ವಿದ್ಯುತ್ ದೀಪಗಳ ನಿರ್ವಹಣೆಯನ್ನು ಹೊರತುಪಡಿಸಿ) ಕಚೇರಿ ಕರ್ತವ್ಯ ನಿರ್ವಹಿಸುವುದನ್ನ ನಿಲ್ಲಿಸಿ ಅನಿರ್ದಿಷ್ಟಾವಧಿ ಹೋರಾಟ ಕೈಗೊಳ್ಳುತ್ತಿರುವುದಾಗಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿಗಳಾದ ಶಿವಕುಮಾರ್‌ರಿಗೆ ಮನವಿ ಸಲ್ಲಿಸಿದರು. ಗ್ರಾ.ಪಂ. ಸದಸ್ಯರ ಒಕ್ಕೂಟದ ರಾಜ್ಯ ಪರಿಷತ್ ಸದಸ್ಯ ಸುರೇಶ್ ಬಾಬು, ಖಜಾಂಚಿ ರಾಮಕೃಷ್ಣಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್, ತಾಲೂಕು ಅಧ್ಯಕ್ಷ ವಿಟ್ಟಪ್ಪನಹಳ್ಳಿ ನಾರಾಯಣಸ್ವಾಮಿ, ಡಿ.ಎಫ್.ಓ ಜಿಲ್ಲಾಧ್ಯಕ್ಷ ರವಿಕುಮಾರ್, ಹುತ್ತೂರು ಗ್ರಾಮ ಪಂಚಾಯ್ತಿ ಅಧ್ಯಕ್ಷ ಚಂದ್ರಪ್ಪ, ಕೆ.ಎಸ್.ಪಿ.ಡಿ.ಓ.ಡ್ಲ್ಯೂ.ಎ ತಾಲೂಕು ಅಧ್ಯಕ್ಷ ಸತೀಶ್ ಕುಮಾರ್ ಹಾಜರಿದ್ದರು.

# ಬ್ರಾಹ್ಮಿ ಮುಹೂರ್ತದಲ್ಲಿ ದೇವಿ ಪ್ರತಿಷ್ಠಾಪಿಸಲು ಸಕಲ ಸಿದ್ಧತೆಗೆ ಸೂಚನೆ

ತುಮಕೂರು



ದಸರಾ ಅಂಗವಾಗಿ ನಗರದ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಪೂಜಿಸುವ ಚಾಮುಂಡೇಶ್ವರಿ ದೇವಿಯನ್ನು ಶರನ್ನವರಾತ್ರಿಯ ಮೊದಲ ದಿನ ಇದೇ 3ರಂದು ಬೆಳಿಗ್ಗೆ 5.30 ಗಂಟೆಗೆ ಬ್ರಾಹ್ಮಿ ಮುಹೂರ್ತದಲ್ಲಿ ಪ್ರಾರಂಭಿಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಚೇರಿಯಲ್ಲಿ ಸೋಮವಾರ ದಸರಾ ಉತ್ಸವದ ವಿವಿಧ ಸಮಿತಿಗಳ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ದೇವಿಯನ್ನು ಶುಭ ಮುಹೂರ್ತದಲ್ಲಿ ಪ್ರತಿಷ್ಠಾಪಿಸುವುದರೊಂದಿಗೆ ಇದೇ 12ರವರೆಗೂ ಪ್ರತೀ ದಿನ ಬ್ರಾಹ್ಮಿ ಮುಹೂರ್ತದಲ್ಲಿ ಪುಣ್ಯಾಹ, ಗಣಪತಿ ಪೂಜೆ, ಪ್ರಧಾನ ಕಳಶಾರಾಧನೆ, ಪಂಚಾಮೃತ ಅಭಿಷೇಕ, ಹೋಮ–ಹವನ, ಮಹಾ ಮಂಗಳಾರತಿ, ಭಕ್ತಾಧಿಗಳಿಗೆ ತೀರ್ಥ ಪ್ರಸಾದ ವಿನಿಯೋಗ ಸೇರಿದಂತೆ ಎಲ್ಲಾ ಪೂಜಾ ವಿಧಾನಗಳು ಸಾಂಗವಾಗಿ ನಡೆಸಬೇಕು ಎಂದು ನಿರ್ದೇಶನ ನೀಡಿದರು.

ದಸರಾ ಸಂದರ್ಭದಲ್ಲಿ ಪೂಜಾ ವಿಧಿ– ವಿಧಾನಗಳೊಂದಿಗೆ ಪ್ರತಿ ದಿನ ಸಂಜೆ ಹರಿಕಥೆ, ಭಜನೆ, ಭಕ್ತಿಗೀತೆ, ಮತ್ತಿತರ ಭಕ್ತಿ ಪ್ರಧಾನ ಕಾರ್ಯಕ್ರಮಗಳನ್ನು ಏರ್ಪಡಿಸಲು ಕ್ರಮಕೈಗೊಳ್ಳಬೇಕು. ಜೂನಿಯರ್ ಕಾಲೇಜು ಮೈದಾನದಲ್ಲಿ ವೇದಿಕೆ ಸಿದ್ಧತೆ ಹಾಗೂ ಅಲಂಕಾರ, ನಿರಂತರ ವಿದ್ಯುತ್ ಸರಬರಾಜು, ಭಕ್ತಾದಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ನಗರ ಸ್ವಚ್ಛಗೊಳಿಸುವುದರೊಂದಿಗೆ ನಗರದಾದ್ಯಂತ ಎಲ್ಲಾ ಸರ್ಕಾರಿ ಇಲಾಖೆಗಳ ಕಚೇರಿ ಕಟ್ಟಡ ಹಾಗೂ ಪ್ರಮುಖ ಬೀದಿಗಳನ್ನು ವಿಶೇಷವಾಗಿ ವಿದ್ಯುತ್ ದೀಪಗಳಿಂದ ಕಂಗೊಳಿಸುವಂತೆ ಅಲಂಕರಿಸಬೇಕು ಎಂದು ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಜಿ.ಪ್ರಭು ಮಾತನಾಡಿ, ದಸರಾ ಉತ್ಸವ ಪ್ರಯುಕ್ತ ಇದೇ 12ರಂದು ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯಲ್ಲಿ ದೇವಿಯನ್ನು ಕೂರಿಸಿರುವ ಅಲಂಕೃತ ಅಂಬಾರಿ ಹೊತ್ತ ಆನೆ, ವಿಂಟೇಜ್ ಕಾರ್, ಹುಲಿವೇಷ, ಚಿಟ್ಟಿಮೇಳ, ವೀರಗಾಸೆ ಸೇರಿದಂತೆ ವಿವಿಧ ಕಲಾ ತಂಡಗಳು, ಹಳ್ಳಿಕಾರ್ ಎತ್ತುಗಳು, 70 ವಿವಿಧ ದೇವರ ಉತ್ಸವ ಮೂರ್ತಿಗಳು ಪಾಲ್ಗೊಳ್ಳಲಿವೆ ಎಂದು ತಿಳಿಸಿದರು.

ದಸರಾ ಪ್ರಯುಕ್ತ ಇದೇ 11 ಮತ್ತು 12ರಂದು ಸಂಜೆ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದ ಪ್ರಧಾನ ವೇದಿಕೆಯಲ್ಲಿ ಖ್ಯಾತ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮ, ರಸಸಂಜೆ, ಡ್ರೋಣ್ ಶೋ, ಬಾಣ– ಬಿರುಸುಗಳ ಪ್ರದರ್ಶನ, ವಸ್ತು ಪ್ರದರ್ಶನಗಳು ನಡೆಯಲಿವೆಯಲ್ಲದೆ, ಯುವ ದಸರಾದ ಅಂಗವಾಗಿ ಇದೇ 6 ರಿಂದ 10ರವರೆಗೆ ಗುಬ್ಬಿ ವೀರಣ್ಣ ಕಲಾ ಕ್ಷೇತ್ರದಲ್ಲಿಯೂ ಸಹ ಖ್ಯಾತ ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿ ಕೊಡಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಪಾಲಿಕೆ ಆಯುಕ್ತ ಬಿ.ವಿ.ಅಶ್ವಿಜ, ಅರಣ್ಯ ಉಪ ಸಂರಕ್ಷಣಾಧಿಕಾರಿ ಅನುಪಮ, ಮುಜರಾಯಿ ತಹಶೀಲ್ದಾರ್ ಸವಿತ, ಅರ್ಚಕರ ಸಂಘದ ಅಧ್ಯಕ್ಷ ರಾಮತೀರ್ಥನ್, ವಿವಿಧ ದೇವಾಲಯದ ಧರ್ಮಾಧಿಕಾರಿಗಳು, ದಸರಾ ಉತ್ಸವ ಸಮಿತಿಗಳ ಪತ್ರಕರ್ತ ಸದಸ್ಯರು, ವಿವಿಧ ಅಧಿಕಾರಿಗಳು ಹಾಜರಿದ್ದರು.

ಭಾರತ ಸಾರಥಿ BHARATHA SARATHI KANNADA DAILY
02 OCTOBER 2024 ಬುಧವಾರ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.



# ಪೊಲೀಸರಿಗೆ ಚಾಲೆಂಜ್ ಮಾಡಿದ ಕಳ್ಳರ ಗ್ಯಾಂಗ್

ಬಂಗಾರಪೇಟೆ



ನಗರದಲ್ಲಿ ಕಳ್ಳರು ಅಟ್ಟಹಾಸ ಮೆರೆದಿದ್ದಾರೆ. ಹತ್ತಕ್ಕೂ ಹೆಚ್ಚು ಮನೆಗಳಲ್ಲಿ ಕಳ್ಳತನಕ್ಕೆ ವಿಫಲ ಯತ್ನ ನಡೆಸುವ ಮೂಲಕ ಮತ್ತೆ ಕಳ್ಳರ ಗ್ಯಾಂಗ್‌ವೊಂದು ಪೊಲೀಸರಿಗೆ ಚಾಲೆಂಜ್ ಮಾಡಿದರು.

ಪಟ್ಟಣ ಅಮರಾವತಿ ಬಡಾವಣೆಯಲ್ಲಿ ಈ ಘಟನೆ ನಡೆದಿದ್ದು, ಮನೆಯ ಬಾಗಿಲಿಗೆ ಅಳವಡಿಸಿರುವ ತಾಮ್ರದ ಮತ್ತು ಕಬ್ಬಿಣದ ಚಿಲಕಗಳನ್ನು ಮಾತ್ರ ಕಳವು ಮಾಡಿ ಪೊಲೀಸರಿಗೆ ಎಚ್ಚರಿಕೆ ಸಂದೇಶ ರವಾನಿಸಿದಂತಿದೆ?.

ಕಳೆದ ಒಂದೂವರೆ ತಿಂಗಳಿನಿಂದ ವಿರಾಮ ಕೊಟ್ಟಿದ್ದ ಕಳ್ಳರ ತಂಡ ಮತ್ತೆ ಪಟ್ಟಣದಲ್ಲಿ ಆಕ್ಟೀವ್ ಆಗುವ ಮೂಲಕ ಕೇವಲ ಬಾಗಿಲ ಚಿಲಕ ಹೊಡೆದು ಪೊಲೀಸರಿಗೆ ಹಾಗೂ ನಿವಾಸಿಗಳಲ್ಲಿ ಭಯ ಹುಟ್ಟಿಸುವ ಕೆಲಸಕ್ಕೆ ಕಳ್ಳರು ಮುಂದಾಗಿದ್ದಾರೆ.

ಈ ಹಿಂದೆ ಬಂಗಾರಪೇಟೆಯಲ್ಲಿ ಚಡ್ಡಿ ಗ್ಯಾಂಗ್ ಹಾಗೂ ಟೋಪಿ ಗ್ಯಾಂಗ್ ಆಕ್ಟೀವ್ ಆಗಿತ್ತು. ಅದರಂತೆ ಪೊಲೀಸರು ಕಳ್ಳರ ಹೆಡೆಮುರಿ ಕಟ್ಟಿ ಜೈಲಿಗೆ ಕಳುಹಿಸುವ ಕೆಲಸ ಮಾಡಿದ್ದರು. ಆದರೆ ಮತ್ತೆ ಆಕ್ಟೀವ್ ಆಗಿರುವ ಕಳ್ಳರ ಗ್ಯಾಂಗ್ ಎಚ್ಚರಿಕೆ ಗಂಟೆ ಭಾರಿಸಿದಂತಿದೆ. ಒಂದೇ ಬಡಾವಣೆಯ 2 ರಸ್ತೆಯಲ್ಲಿರುವ 10ಕ್ಕೂ ಹೆಚ್ಚು ಮನೆಗಳಿಗೆ ಕನ್ನ ಹಾಕಲು ಯತ್ನಿಸಿರುವ ಕಳ್ಳರು ಕೇವಲ ಬಾಗಿಲಿಗೆ ಅಳವಡಿಸಿದ್ದ ಬೀಗ ಕದ್ದು ಪರಾರಿಯಾಗಿದ್ದಾರೆ.

ಬೀಗ ಕದ್ದ ನಮಗೆ ಮನೆಯ ಕಳ್ಳತನ ದೊಡ್ಡ ವಿಷಯವಲ್ಲ ಅನ್ನೋ ಸಂದೇಶವನ್ನು ಎಚ್ಚರಿಕೆ ನೀಡಿದಂತೆ ಈ ಕಳ್ಳತನದ ವಿಫಲ ಯತ್ನ. ಇನ್ನೂ ಬೀದಿ ನಾಯಿಗಳ ಗಲಾಟೆಯಿಂದ ರಾತ್ರಿ ಹೊರ ಬಂದಿರುವ ಬಡಾವಣೆ ನಿವಾಸಿಗಳನ್ನ ನೋಡುತ್ತಿದ್ದಂತೆ ಕಳ್ಳರು ಪರಾರಿಯಾಗಿದ್ದಾರೆ.

ಸ್ಥಳಕ್ಕೆ ಕೆಜಿಎಫ್ ಎಸ್ಪಿ ಶಾಂತರಾಜು, ಡಿವೈಎಸ್‌ಪಿ ಪಾಂಡುರಂಗ ಹಾಗೂ ಬಂಗಾರಪೇಟೆ ಪೊಲೀಸರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಚನ್ನಪಟ್ಟಣದಲ್ಲಿ ಗುರುಭವನ ನಿರ್ಮಾಣಕ್ಕೆ ಅಗತ್ಯ ಕ್ರಮ: ಡಿಸಿಎಂ

ರಾಮನಗರ

ಸಮಾಜದಲ್ಲಿ ಸತ್ಪ್ರಜೆಗಳನ್ನು ನಿರ್ಮಿಸುವುದರಲ್ಲಿ ಶಿಕ್ಷರ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಅವರ ಕೆಲಸ ಕಾರ್ಯಗಳಿಗೆ ಅನುಕೂಲವಾಗುವ ಗುರುಭವನವನ್ನು ಚನ್ನಪಟ್ಟಣ ತಾಲ್ಲೂಕಿನಲ್ಲಿ ನಿರ್ಮಿಸಲು ಸರ್ಕಾರ ಸಿದ್ಧವಿದ್ದು, ಅಗತ್ಯ ರೂಪು ರೇಷೆಗಳನ್ನು ಸಿದ್ದ ಮಾಡಿಕೊಳ್ಳುವಂತೆ ಉಪ ಮುಖ್ಯಮಂತ್ರಿ, ಭಾರಿ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವ ಡಿ.ಕೆ. ಶಿವಕುಮಾರ್ ಸೂಚಿಸಿದರು.

ಸೋಮವಾರ ಬಿ.ಎಂ. ರಸ್ತೆಯ ಕೆಂಗಲ್ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಇರುವ ತಿಮ್ಮಮ್ಮ ದಾಸೇಗೌಡ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ರಾಮನಗರ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಚನ್ನಪಟ್ಟಣ ತಾಲ್ಲೂಕಿಗೆ ಅಗತ್ಯವಿರುವ ಗುರುಭವವನ್ನು ನಿರ್ಮಿಸಲು ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಡಿಡಿಪಿಐ ಅಗತ್ಯ ಸ್ಥಳವನ್ನು ಪರಿಶೀಲಿಸಿ, ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ಅನುದಾನದ ವರದಿ ಸಿದ್ಧಪಡಿಸಿ ಕೊಟ್ಟಲ್ಲಿ ಗುರು ಭವನ ನಿರ್ಮಾಣಕ್ಕೆ ಸರ್ಕಾರದಿಂದ ಕ್ರಮ ವಹಿಸಲಾಗುವುದು. ಆ ಮೂಲಕ ಶಿಕ್ಷಕರ ಅಗತ್ಯ ಚಟುವಟಿಕೆಗಳನ್ನು ಅಲ್ಲಿ ಹಮ್ಮಿಕೊಳ್ಳಲು ಸಾಧ್ಯವಾಗಲಿದೆ ಎಂದವರು ಹೇಳಿದರು.



ಸಮಾಜದ ಆಧಾರ ಸ್ತಂಭವಾಗಿರುವ ಶಿಕ್ಷಕರ ಜವಾಬ್ದಾರಿ ಹೆಚ್ಚಿದ್ದು, ರಾಜ್ಯದಲ್ಲಿ ವರ್ಷಕ್ಕೆ ಹತ್ತು ಸಾವಿರ ಕೋಟಿ ರೂ.ಗಳ ಸಿಎಸ್‌ಆರ್ ನಿಧಿ ಸಂಗ್ರಹವಾಗುತ್ತದೆ, ಆ ನಿಧಿಯನ್ನು ಶಿಕ್ಷಣ ಕ್ಷೇತ್ರಕ್ಕೆ ಸದ್ಬಳಕೆ ಮಾಡಿಕೊಳ್ಳಲು ತೀರ್ಮಾನಿಸಲಾಗಿದೆ, ಈ ದಿಸೆಯಲ್ಲಿ ಮುಖ್ಯಮಂತ್ರಿಯವರಿಗೆ ಗಮನಕ್ಕೆ ತಂದು ಒಂದು ಸಮಿತಿ ರಚಿಸಲಾಗಿದೆ. ಸಮಿತಿಯಲ್ಲಿ ಐಟಿಬಿಟಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಸದಸ್ಯರಾಗಿರುತ್ತಾರೆ. 3 ರಿಂದ 4 ಗ್ರಾಮ ಪಂಚಾಯತ್ ಮಟ್ಟದಲ್ಲಿ ಪಬ್ಲಿಕ್ ಶಾಲೆಗಳನ್ನು ನಿರ್ಮಿಸಲು ತೀರ್ಮಾನಿಸಲಾಗಿದೆ, ಈ ಶಾಲೆಗಳನ್ನು ಖಾಸಗಿಯಿಂದ ನಿಭಾಯಿಸಲಾಗುವುದು, ಈ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸಲಾಗುವುದು ಎಂದರು.

ಸಮಾಜದ ಯಾವುದೇ ವೃತ್ತಿ ಶಿಕ್ಷಕ ವೃತ್ತಿಗೆ ಪರ್ಯಾಯವಲ್ಲ. ಶಿಕ್ಷಕರಿಗೆ ನೀಡುವ ಗೌರವ ಬೇರೆಯವರಿಗೆ ನೀಡಲು ಸಾಧ್ಯವಿಲ್ಲ. ಮಕ್ಕಳನ್ನು ಸರಿದಾರಿಯಲ್ಲಿ ಬೆಳೆಸುವ ನಿಮ್ಮ ಶ್ರಮಕ್ಕೆ ತಕ್ಕ ಫಲವಿದೆ. ಹೃದಯವಂತಿಕೆ ಬಳಸಿಕೊಂಡು ಕೆಲಸ ಮಾಡಬೇಕು ಎಂದರು.

ಚನ್ನಪಟ್ಟಣದಲ್ಲಿ ಸಾಕಷ್ಟು ಶಿಕ್ಷಕರಿಗೆ ನಿವೇಶನ ಹಾಗೂ ಮನೆಗಳಿರುವುದಿಲ್ಲ. ಇದನ್ನು ಗಮನಿಸಿರುವ ಸರ್ಕಾರ ಮುಂಬರುವ ದಿನಗಳಲ್ಲಿ ನಿವೇಶನಗಳನ್ನು ನೀಡಲು ಚಿಂತಿಸಿದ್ದು, ಶಿಕ್ಷಕರಿಗಾಗಿಯೇ ಪ್ರತ್ಯೇಕ ಬಡಾವಣೆಯೊಂದನ್ನು ನಿರ್ಮಿಸಲು ಜಮೀನನ್ನು ಗುರುತಿಸಲಾಗುವುದು. ಇದಕ್ಕಾಗಿ ಪ್ರತ್ಯೇಕವಾಗಿ ಒಂದು ಕಾರ್ಯಕ್ರಮವನ್ನು ಮಾಡಲಾಗುವುದು ಎಂದು ಹೇಳಿದರು.

ಚನ್ನಪಟ್ಟಣದ ವಿದ್ಯಾರ್ಥಿಗಳು ಬೆಂಗಳೂರು ಸೇರಿದಂತೆ ಜಾಗತಿಕ ಮಟ್ಟದಲ್ಲಿ ಸ್ಪರ್ಧೆಗೆ ತಯಾರಾಗಬೇಕು. ಚನ್ನಪಟ್ಟಣದಲ್ಲಿ ವಿದ್ಯಾವಂತ, ಬುದ್ಧಿವಂತ, ಪ್ರಜ್ಞಾವಂತ ಜನರಿದ್ದಾರೆ ಎಂದವರು ಹೇಳಿದರು.

ವಿಧಾನ ಪರಿಷತ್ ಶಾಸಕ ಪುಟ್ಟಣ್ಣ ಅವರು ಮಾತನಾಡಿ, ಶಿಕ್ಷಕರನ್ನು ಪ್ರೋತ್ಸಾಹಿಸುವ ಕೆಲಸ ರಾಜ್ಯ ಸರ್ಕಾರ ಮಾಡುತ್ತಿದೆ. ಈಗಾಗಲೇ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರಿಗೆ ಒಪಿಎಸ್ ಜಾರಿಗೆ ಬರುವಂತೆ ಕ್ರಮವಹಿಸಲಾಗುತ್ತಿದೆ. ನಂತರ ಪಿಂಚಣಿ ಸೌಲಭ್ಯವನ್ನು ಶಿಕ್ಷಕರಿಗೆ ನೀಡಲಾಗುವುದು. ಕಳೆದ ವರ್ಷದಲ್ಲಿ ಈ ಎರಡು ಸೌಲಭ್ಯಗಳಿಗಾಗಿ ನಿರಂತರ ಹೋರಾಟ ನಡೆದಿತ್ತು. ಅದರ ಫಲವಾಗಿ ರಾಜ್ಯ ಸರ್ಕಾರ ಈ ಸೌಲಭ್ಯವನ್ನು ಕಾರ್ಯಗತಗೊಳಿಸುವುದಾಗಿ ಭರವಸೆ ನೀಡಿದೆ ಎಂದರು.

ವಿಧಾನ ಪರಿಷತ್ ಶಾಸಕರಾದ ಎಸ್. ರವಿ, ರಾಮೋಜಿಗೌಡ, ಬಿ.ಎಂ.ಐ.ಸಿ.ಪಿ.ಎ ಪ್ರಾಧಿಕಾರದ ಅಧ್ಯಕ್ಷರಾದ ರಘುನಂದನ್ ರಾಮಣ್ಣ, ಚನ್ನಪಟ್ಟಣ ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರಮೋದ್, ಚನ್ನಪಟ್ಟಣ ತಾಲ್ಲೂಕು ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ರಂಗನಾಥ್, ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ದಿಗ್ವಿಜಯ್ ಬೋಡ್ಕೆ ಸೇರಿದಂತೆ ವಿವಿಧ ಶಾಲೆಯ ಶಿಕ್ಷಕರು ಉಪಸ್ಥಿತರಿದ್ದರು. ರಾಮನಗರ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ವಿ.ಸಿ. ಬಸವರಾಜೇಗೌಡ ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ಅತ್ಯುತ್ತಮ ಕೆಲಸ ನಿರ್ವಹಿಸಿರುವ ಶಿಕ್ಷಕರನ್ನು ಸನ್ಮಾನಿಸಲಾಯಿತು.

# ದೇವನಹಳ್ಳಿಯಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ

ದೇವನಹಳ್ಳಿ

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಹಯೋಗದಲ್ಲಿ ಮಂಗಳವಾರ ಬೆಳಗ್ಗೆ 10.30 ಗಂಟೆಗೆ ದೇವನಹಳ್ಳಿ ತಾಲೂಕಿನ ಬೀರಸಂದ್ರ ಗ್ರಾಮದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ–2024ರ ಸಮಾರಂಭವನ್ನು ಹಾಗೂ ಅಲಿಂಕೋ ವತಿಯಿಂದ ಅಡಿಪ್ ಮತ್ತು ವಯೋ ಶ್ರೀ ಯೋಜನೆಯಡಿ ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ಸಾಧನೆ ಸಲಕರಣೆಗಳನ್ನು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆ ಹಾಗೂ ಉದ್ಘಾಟನೆಯನ್ನು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯಹಾರಗಳ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ಮಾಡಲಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ. ಕೆ.ಎನ್.ಅನುರಾಧ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿ.ಕೆ ಬಾಬಾ,ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜಗದೀಶ ಎನ್.ಎಂ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಮುದ್ದಣ್ಣ ಎಂ ಅವರು ಕಾರ್ಯಕ್ರಮದ ಸ್ವಾಗತ ಕೋರಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ಹಿರಿಯ ನಾಗರಿಕರು, ಎಲ್ಲಾ ಚುನಾಯಿತ ಪ್ರತಿನಿಧಿಗಳು, ಎಲ್ಲಾ ನಾಮನಿರ್ದೇಶಿತ ಸದಸ್ಯರುಗಳು, ಪತ್ರಿಕಾ ಮತ್ತು ಮಾಧ್ಯಮ ಪ್ರತಿನಿಧಿಗಳು ಹಾಗೂ ಪ್ರಗತಿಪರ ಸಂಘಟನೆಗಳು, ಎಲ್ಲಾ ವಿವಿದೋದ್ದೇಶ, ನಗರ, ಗ್ರಾಮೀಣ ಪುಸರ್ವಸತಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದಾರೆ.

# ಕಟ್ಟಡ ಕಾರ್ಮಿಕರಿಗೆ ಮರಣ ಪರಿಹಾರ ಬಾಂಡ್ ವಿತರಣೆ

ಕೋಲಾರ

ಜಿಲ್ಲಾ ಕಟ್ಟಡ ಕಾರ್ಮಿಕ ಸಂಘದ ನೇತೃತ್ವದಲ್ಲಿ ಜಿಲ್ಲೆಯ ಇಬ್ಬರೂ ಕಟ್ಟಡ ಕಾರ್ಮಿಕರಿಗೆ ಸುಮಾರು 3.25 ಲಕ್ಷದ ಮರಣ ಪರಿಹಾರ ಬಾಂಡ್ ಅನ್ನು ಸಹಾಯಕ ಕಾರ್ಮಿಕ ಆಯುಕ್ತ ಸಂತೋಷ್ ಇಪ್ಪರಗಿ ಅವರು ವಿತರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ಹೆಚ್.ಸಿ ಶ್ಯಾಮಣ್ಣರೆಡ್ಡಿ, ಪ್ರಧಾನ ಕಾರ್ಯದರ್ಶಿ ಹೊನ್ನೇನಹಳ್ಳಿ ಯಲ್ಲಪ್ಪ, ಮುಖಂಡರಾದ ನದೀಂ, ನರಸಿಂಹಪ್ಪ ಮುಂತಾದವರು

# ಸ್ವಚ್ಛತಾ ಕಾರ್ಯಕ್ರಮ

ಕೋಲಾರ

ನೆಹರು ಯುವ ಕೇಂದ್ರ, ಕೋಲಾರ, ನವ ಸಮಾಜ ಮತ್ತು ಪರಿಸರ ಅಭಿವೃದ್ಧಿ ಸಂಸ್ಥೆ ಮತ್ತು ಯುವ ಸಬಲೀಕರಣ ಕ್ರೀಡಾ ಇಲಾಖೆ ಮತ್ತು ಕೋಲಾರ ರೋಟರಿ ಲೇಕ್ ಸೇಡ್‌ಯಿಂದ ಸ್ವಚ್ಛತಾ ಕಾರ್ಯಕ್ರಮವನ್ನು ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಾಂಶುಪಾಲರು ಬಾಲಕೃಷ್ಣ ಚಾಲನೆ ನೀಡಿದರು.

ಕಾಲೇಜಿನಲ್ಲಿ ಸ್ವಚ್ಛತೆಯ ಅರಿವು ಮೂಡಿಸಿದರು ಹಾಗೆಯೇ ಕಾಲೇಜಿನಲ್ಲಿ ಸ್ವಚ್ಛತೆ ಕಾರ್ಯ ಮಾಡಲಾಯಿತು.

ಪ್ರಾಂಶುಪಾಲರು, ಬಾಲಕೃಷ್ಣ ಮಾತನಾಡಿ, ವಿದ್ಯಾರ್ಥಿಗಳು ಕೇವಲ ಪಠ್ಯಾಭ್ಯಾಸಕ್ಕೆ ಸೀಮಿತಗೊಳ್ಳದೆ ಗ್ರಾಮೀಣ ಜನರಲ್ಲಿ ಸ್ವಚ್ಛ ಭಾರತ್, ಪರಿಸರ ಸಂರಕ್ಷಣೆಯಂತಹ ಸರಕಾರದ ಉಪಯುಕ್ತ ಯೋಜನೆ, ಶಿಕ್ಷಣದ ಅವಶ್ಯಕತೆ, ಮೂಢನಂಬಿಕೆಗಳಿಂದ ಉಂಟಾಗುವ ದುಷ್ಪರಿಣಾಮ, ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ವಹಿಸಬೇಕಾದ ಮುಂಜಾಗ್ರತೆ ಕ್ರಮಗಳ ಬಗ್ಗೆ ಅರಿವು ಮೂಡಿಸುವ ಕಾರ್ಯದಲ್ಲಿ ಪಾಲ್ಗೊಳ್ಳಬೇಕು. ಇದರಿಂದ ಮಾತ್ರ ಯೋಜನೆಗಳ ಉದ್ದೇಶಿತ ಪರಿಕಲ್ಪನೆಗಳು ಈಡೇರಲು ಸಾಧ್ಯ. ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಸೇವಾ ಮನೋಭಾವ ಬೆಳೆಸಲು ಇಂತಹ ಶಿಬಿರಗಳು ಸಹಕಾರಿಯಾಗಿವೆ ಎಂದರು.

ಷಮ್ಸ್ ಅಧ್ಯಕ್ಷರು ನವ ಸಮಾಜ ಮತ್ತು ಪರಿಸರ ಅಭಿವೃದ್ಧಿ ಸಂಸ್ಥೆ ಮಾತನಾಡಿ, 'ಸದೃಢವಾದ ಶರೀರದಲ್ಲಿ ಸದೃಢವಾದ ಮನಸ್ಸು ಇರುತ್ತದೆ.' ಎಂಬ ನಾಣ್ನುಡಿಯಂತೆ ನಮ್ಮ ಆರೋಗ್ಯದ ದೃಷ್ಟಿಯಿಂದ ನಾವು ವಾಸಿಸುವ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ನಮ್ಮ ಆದ್ಯ ಕರ್ತವ್ಯವಾಗಿದೆ. ಈ ದಿಸೆಯಲ್ಲಿ ಪ್ರತಿಯೊಬ್ಬರೂ ಸ್ವಯಂ ಪ್ರೇರಿತರಾಗಿ ಸ್ವಚ್ಛತೆಯ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು. ಇದು ನಮ್ಮ ಮನೆ ಪರಿಸರದಿಂದಲೇ, ನಮ್ಮಿಂದಲೇ ಅಂದರೆ ವಿದ್ಯಾರ್ಥಿಗಳಿಂದಲೇ ಪ್ರಾರಂಭವಾದಾಗ 'ಸ್ವಚ್ಛ ಭಾರತ ಅಭಿಯಾನ'ಕ್ಕೆ ಸಂಪೂರ್ಣವಾಗಿ ಯಶಸ್ಸು ದೊರೆಯುತ್ತದೆ ಎಂದರು.

# 'ದೂರದರ್ಶನ ಚಂದನದಲ್ಲಿ ನಾಟಕಗಳ ಪ್ರದರ್ಶನಕ್ಕೆ ವ್ಯವಸ್ಥೆ'

ಬೆಂಗಳೂರು

ಮುಂಬರುವ ದಿನಗಳಲ್ಲಿ ದೂರದರ್ಶನ ಚಂದನದಲ್ಲಿ ನಾಟಕಗಳ ಪ್ರದರ್ಶನಕ್ಕೆ ವ್ಯವಸ್ಥೆಯನ್ನು ಮಾಡಲು ಪ್ರಯತ್ನಿಸುವೆ ಎಂದು ದೂರದರ್ಶನ ಚಂದನ ವಾಹಿನಿಯ ಉಪ ನಿರ್ದೇಶಕರಾದ ಸತೀಶ್ ಕೆ. ಹೇಳಿದರು,

ರಂಗಪರಂಪರೆ ಟ್ರಸ್ಟ್ ಅಭಯಹಸ್ತ ಬಲಮುರಿ ಗಣಪತಿ ದೇವಸ್ಥಾನ ಸೇವಾ ಟ್ರಸ್ಟ್ ಸಹಯೋಗದೊಂದಿಗೆ ಆಯೋಜಿಸಿದ್ದ ಮೂರು ದಿನಗಳ ರಂಗ ಪರಂಪರೋತ್ಸವದ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿ, ನಮ್ಮ ಸಂಸ್ಕೃತಿ ಕಲೆಯನ್ನು ಪ್ರೋತ್ಸಾಹಹಿಸುವ ಕಾರ್ಯವನ್ನು ದೂರದರ್ಶನ ಆರಂಭದಿಂದಲೂ ಮಾಡಿಕೊಂಡು ಬಂದಿದ್ದು ಅದು ಮುಂದೆಯೂ ಮುಂದುವರಿಯಲಿದೆ ಎಂದರು.

ಈ ವೇಳೆ ಕ್ಯಾತ ರಂಗಭೂಮಿ ಹಾಗು ಚಿತ್ರನಟ ರಮೇಶ್ ಪಂಡಿತ್ ಮಾತನಾಡಿ, ಪ್ರತಿಯೊಂದು ಬಡಾವಣೆಯಲ್ಲೂ ಈ ರೀತಿಯ ಸಾಂಸ್ಕೃತಿಕ ಭವನಗಳು ಆಗಬೇಕು ಆಗ ಸ್ಥಳೀಯ ಪ್ರತಿಭೆಗಳು ಬೆಳಕಿಗೆ ಬರಲು ಸಹಕಾರಿಯಾಗುತ್ತೆ ಎಂದರು.



ಸಮಾರಂಭದಲ್ಲಿ ಕಾಮಿಡಿ ಕಿಲಾಡಿಯ ದಾನಪ್ಪ, ಹಿರಿಯ ಪತ್ರಕರ್ತ ಎನ್.ಎಸ್. ಸುಧೀಂದ್ರ ರಾವ್ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ಕೆಂಗೇರಿ ಪುರಸಭೆ ಮಾಜಿ ಉಪಾಧ್ಯಕ್ಷ ಜಿ ಮುನಿರಾಜು ವಹಿಸಿ ಮಾತನಾಡಿದರು.

ನಾಟಕೋತ್ಸವದಲ್ಲಿ ಕುವೆಂಪು ವಿರಚಿತ ಜನಪದ ನಾಟಕ ಶ್ರೀಮನ್ ಮುಖವಾಗಿತ್ತು, ಸಾಲದ ಮಗು ಮತ್ತು ಪೌರಾಣಿಕ ನಾಟಕ ಚಂದ್ರಹಾಸ ಹಾಗು ಎನ್ ಎಸ್ ರಾವ್ ವಿರಚಿತ 36 ಅಲ್ಲ 63 ನಾಟಕ ಪ್ರದರ್ಶನ ಯಶಸ್ವಿಯಾಗಿ ನಡೆಯಿತು.

ರಂಗ ಪರಂಪರೋತ್ಸವದಲ್ಲಿ ರಾಮಪ್ಪ, ಸಂಜೀವರೆಡ್ಡಿ, ಕುಮಾರ್, ರವಿ ವಿ.ಆರ್. ವ್ಯವಸ್ಥಾಪಕ ಟ್ರಸ್ಟಿ ಧನವಂತ್ರಿ, ಕಾರ್ಯದರ್ಶಿ ಆಂಜನೇಯ, ಗಣಪತಿ ಗೌಡ, ಮೂಗು ಸುರೇಶ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಕಲಾ ಪೋಷಕರು ಉಪಸ್ಥಿತರಿದ್ದರು.

# 2 ರಂದು ಮಾಂಸ ಮಾರಾಟ ನಿಷೇಧ

ಬೆಂಗಳೂರು

ಇದೇ 2ರಂದು ಬುಧವಾರ ಗಾಂಧಿ ಜಯಂತಿ ಪ್ರಯುಕ್ತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕಾಸಾಯಿ ಖಾನೆಯಲ್ಲಿ ಪ್ರಾಣಿವಧೆ ಹಾಗೂ ಮಾರಾಟ ಮಳಿಗೆಗಳಲ್ಲಿ ಮಾಂಸ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಪಶುಪಾಲನೆ ವಿಭಾಗದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# 'ಲೋಕಾಯುಕ್ತ ಎಡಿಜಿಪಿ ಎಂ.ಚಂದ್ರಶೇಖರ್ ವಿರುದ್ಧ ಕ್ರಮ ಕೈಗೊಳ್ಳಿ'

ಬೆಂಗಳೂರು



ಮುಡಾ ಹಗರಣ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡುವವರೆಗೂ ಹಾಗೂ ಸಿಬಿಐ ತನಿಖೆಗೆ ವಹಿಸುವವರೆಗೂ ಬಿಜೆಪಿಯಿಂದ ಹೋರಾಟ ನಡೆಯಲಿದೆ. ಈ ಹೋರಾಟ ನಿಲ್ಲುವುದಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯ ಹೋರಾಟದ ಫಲವಾಗಿ ಮುಡಾ ಹಗರಣ ಈ ಹಂತಕ್ಕೆ ಬಂದಿದೆ. ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಹಾಗೂ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂಬುದು ನಮ್ಮ ಆಗ್ರಹ. ಈ ಗುರಿ ಈಡೇರುವವರೆಗೂ ಹೋರಾಟ ಮಾಡುತ್ತೇವೆ. ಈ ಹೋರಾಟ ನಿಲ್ಲಲ್ಲ. ಸಚಿವ ಬಿ.ನಾಗೇಂದ್ರ ರಾಜೀನಾಮೆ ಕೊಡಲ್ಲ ಎಂದಿದ್ದರು. ಬಳಿಕ ಕಾನೂನಿನ ಕುಣಿಕೆಯಲ್ಲಿ ಸಿಲುಕಿಕೊಂಡು ರಾಜೀನಾಮೆ ನೀಡಿದರು. ಇದೇ ರೀತಿ ಸಿದ್ದರಾಮಯ್ಯ ಕೂಡ ರಾಜೀನಾಮೆ ನೀಡಬೇಕಾಗುತ್ತದೆ ಎಂದರು.

ಚುನಾವಣಾ ಬಾಂಡ್ ಬಗ್ಗೆ ಕಾಂಗ್ರೆಸ್ ದೊಡ್ಡದಾಗಿ ಮಾತಾಡುತ್ತಿದೆ. ಕಾಂಗ್ರೆಸ್ ಪಕ್ಷಕ್ಕೆ 1,500 ಕೋಟಿ ರೂ.ಗೂ ಅಧಿಕ ಹಣ ದೇಣಿಗೆ ಬಂದಿದೆ. ತೃಣಮೂಲ ಕಾಂಗ್ರೆಸ್‌ಗೆ 1,610 ಕೋಟಿ ರೂ. ಬಂದಿದೆ. ವಿರೋಧ ಪಕ್ಷಗಳ ಒಟ್ಟು ಹಣಕ್ಕೆ ಹೋಲಿಸಿದರೆ ಬಿಜೆಪಿಯದ್ದು ತೀರಾ ಕಡಿಮೆ. ಇದು ನ್ಯಾಯಾಲಯದಲ್ಲಿ ವಿಚಾರಣೆಯಾಗಿ ಮುಗಿದುಹೋಗಿದೆ. ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರ ವಿರುದ್ಧ ಮಾತನಾಡಲು ಈ ವಿವಾದ ಮಾಡಲಾಗಿದೆ. ಇದು ಮುಡಾ ಹಗರಣದ ಹಿನ್ನೆಲೆಯಲ್ಲಿ ಹುಟ್ಟುಹಾಕಿದ ವಿವಾದ. ಇವೆಲ್ಲವೂ ಕಾಂಗ್ರೆಸ್ ಪ್ರಾಯೋಜಿತ ಎಂದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೂರು ವರ್ಷ ಬಾಳಲಿ. ಖರ್ಗೆಯವರು ಪ್ರಧಾನಿ ನರೇಂದ್ರ ಮೋದಿಯವರ ವಿರುದ್ಧ ಸವಾಲೆಸೆಯುವುದು ಬೇಡ. ಕರ್ನಾಟಕದಲ್ಲಿ ಒಮ್ಮೆ ಸಿಎಂ ಆಗಬೇಕು ಎಂಬ ಆಸೆಯನ್ನು ಮಲ್ಲಿಕಾರ್ಜುನ ಖರ್ಗೆ ತೀರಿಸಿಕೊಳ್ಳಬಹುದು. ಆದರೆ ಮೋದಿಯವರನ್ನು ಪ್ರಧಾನಿ ಹುದ್ದೆಯಿಂದ ಕೆಳಕ್ಕಿಳಿಸಲು ಸಾಧ್ಯವಿಲ್ಲ. ಮುಳುಗುತ್ತಿರುವ ಹಡಗಾಗಿರುವ ಕಾಂಗ್ರೆಸ್ ದೋಣಿಯ ಮೂಲಕ ಈ ಕೆಲಸ ಮಾಡಲು ಹೋಗುವುದು ಹಗಲುಗನಸು ಎಂದು ವ್ಯಂಗ್ಯವಾಡಿದರು.

ಅಧಿಕಾರಿ ವಿರುದ್ಧ ಕ್ರಮ ವಹಿಸಿ: ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಲೋಕಾಯುಕ್ತ ಎಡಿಜಿಪಿ ಎಂ.ಚಂದ್ರಶೇಖರ್ ಹಂದಿ ಎಂದು ನಿಂದಿಸಿದ್ದಾರೆ. ಈ ಅಧಿಕಾರಿಯ ವಿರುದ್ಧ ಕೇಂದ್ರ ಮತ್ತು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು. ಕಾನೂನಿನಿಂದ ನುಣುಚಿಕೊಳ್ಳಲು ನೇರವಾಗಿ ಪತ್ರ ಬರೆಯದೆ, ಕೆಳ ಹಂತದ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಅಧಿಕಾರಿ ತನ್ನ ಮಿತಿ ಮೀರಿ ವರ್ತಿಸಿರುವುದು ಖಂಡನೀಯ. ಸರ್ಕಾರದ ಮುಖ್ಯ ಕಾರ್ಯದರ್ಶಿ ಇವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

# ಬದುಕಿಗಾಗಿ, ಜ್ಞಾನ ವಿಕಾಸಕ್ಕಾಗಿ ಪುಸ್ತಕ ಓದಿ: ಚೌಡರೆಡ್ಡಿ

ಶ್ರೀನಿವಾಸಪುರ

ವಿದ್ಯಾರ್ಥಿಗಳು ಬದುಕಿಗಾಗಿ ಹಾಗೂ ಜ್ಞಾನಾರ್ಜನೆಗಾಗಿ ಪುಸ್ತಕಗಳನ್ನು ಓದಬೇಕೆಂದು ಸಾಹಿತಿ, ಕವಿ, ಪತ್ರಕರ್ತ ಪಣಸಮಾಕನಹಳ್ಳಿ ಆರ್.ಚೌಡರೆಡ್ಡಿ ಹೇಳಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ಮನ್ವಂತರ ಪ್ರಕಾಶನ, ಕೋಲಾರ, ಶ್ರೀನಿವಾಪುರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಮತ್ತು ಅಖಿಲ ಭಾರತೀಯ ಸಾಹಿತ್ಯ ಪರಿಷತ್ ವತಿಯಿಂದ ಹಮ್ಮಿಕೊಂಡಿದ್ದ ಜ್ಞಾನ ವಿಕಾಸ ಅಭಿಯಾನದಲ್ಲಿ ಮಾತನಾಡಿ, ವಿದ್ಯಾರ್ಥಿಗಳು ಕೇವಲ ಉದ್ಯೋಗಕ್ಕಾಗಿ, ಬದುಕಿಗಾಗಿ ಪುಸ್ತಕಗಳನ್ನು ಓದಿದರೆ ಸಾಲದು ಮೌಲ್ಯಯುತವಾದ ಜೀವನಕ್ಕಾಗಿ ಜ್ಞಾನ ಸಂಪಾದಿಸಲು ಒಳ್ಳೆಯ ಪುಸ್ತಕಗಳನ್ನು, ಪತ್ರಿಕೆಗಳನ್ನು ಓದಬೇಕೆಂದು ಸಲಹೆ ನೀಡಿದರು.

ಓದುವ ಸಂಸ್ಕೃತಿ ಹೆಚ್ಚಿಸಿಕೊಳ್ಳಿ: ಶ್ರೀನಿವಾಸಪುರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷೆ ಮಂಜುಳಾ ಅವರು ಮಾತನಾಡಿ ಮನ್ವಂತರ ಪ್ರಕಾಶನದಿಂದ ಹಮ್ಮಿಕೊಂಡಿರುವ ಜ್ಞಾನ ವಿಕಾಸ ಅಭಿಯಾನದಿಂದ ಓದುವ ಸಂಸ್ಕೃತಿ ವೃದ್ಧಿಗೆ ಸಹಕಾರಿಯಾಗಿದೆ.

ಸ್ಥಳೀಯ ಸಾಹಿತಿಗಳ ಪರಿಚಯ: ಸ್ಥಳೀಯ ಸಾಹಿತಿಗಳು, ಕವಿಗಳು ಹಾಗೂ ಲೇಖಕರ ಕೃತಿಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಕಾರ್ಯವನ್ನು ಕೈಗೆತ್ತಿಕೊಂಡು ಮನ್ವಂತರ ಪ್ರಕಾಶನ ಜಿಲ್ಲೆಯಾದ್ಯಂತ ಜ್ಞಾನ ವಿಕಾಸ ಅಭಿಯಾನ ನಡೆಸುತ್ತಿರುವುದು ಶ್ಲಾಘನೀಯ, ಇಂತಹ ಕೆಲಸಕ್ಕೆ ಆಖಿಲ ಭಾರತೀಯ ಸಾಹಿತ್ಯ ಪರಿಷತ್ ಸದಾ ಬೆಂಬಲ ನೀಡುತ್ತದೆ ಎಂದು ಪರಿಷತ್ತಿನ ಪ್ರಧಾನ ಕಾರ್ಯದರ್ಶಿ, ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕ ಎನ್.ಶಂಕರೇಗೌಡ ಹೇಳಿದರು.



ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಜಿ.ಎಂ. ಸೌಮ್ಯ, ಮಾನಸ, ಮೌನಿಕ, ಲತಾ, ಐಶ್ವರ್ಯ, ಎಸ್. ಸೌಮ್ಯ, ಶುಭ ಹಾಗೂ ಸಂಧ್ಯಾ ಅವರುಗಳು ಸಾಹಿತಿ ಚೌಡರೆಡ್ಡಿ, ಎನ್. ಶಂಕರೇಗೌಡ, ಅರುಣ್ ಕುಮಾರ್ ಹಾಗೂ ಮಯಾ ಬಾಲಚಂದ್ರ ಅವರುಗಳು ರಚಿಸಿರುವ ಕವನ, ಚುಟುಕು, ಲೇಖನಗಳನ್ನು ಓದಿ ವಿಮರ್ಶೆ ಮಾಡಿದ್ದು ವಿಶೇಷವಾಗಿತ್ತು.

ಬುಕ್ ಬ್ಯಾಂಕ್ ಸ್ಥಾಪನೆಗೆ ಸಿದ್ಧತೆ: ಕಳೆದ ಎರಡೂವರೆ ತಿಂಗಳ ಹಿಂದೆ ಶ್ರೀನಿವಾಸಪುರ ತಾಲೂಕಿನ ಅಖಿಲ ಭಾರತೀಯ ಸಾಹಿತ್ಯ ಪರಿಷತ್ ಅಧ್ಯಕ್ಷೆ ಮಯಾ ಬಾಲಚಂದ್ರ ಅವರ ಮನೆಯಲ್ಲಿ ಪುಸ್ತಕ ಸಂಗ್ರಹಣೆ ಮೂಲಕ ಆರಂಭಗೊಂಡ ಜ್ಞಾನ ವಿಕಾಸ ಅಭಿಯಾನದ ಮೊದಲ ಹಂತದ ಜಿಲ್ಲೆ ಮಟ್ಟದ ಕಾರ್ಯಕ್ರಮ ಯಶಸ್ವಿಯಾಗಿ ಸಂಪನ್ನಗೊಂಡಿದೆ, ಅಕ್ಟೋಬರ್ ತಿಂಗಳ 2ನೇ ವಾರದಲ್ಲಿ 2ನೇ ಹಂತದ ಅಭಿಯಾನ ಮುಂದುವರೆಯಲಿದೆ ಎಂದು ಮನ್ವಂತರ ಪ್ರಕಾಶನದ ಅಧ್ಯಕ್ಷ ಪಾ.ಶ್ರೀ.ಅನಂತರಾಮ ತಿಳಿಸಿದರು.

ಮನ್ವಂತರ ಪ್ರಕಾಶನದ ಅಧ್ಯಕ್ಷ ಪಾ.ಶ್ರೀ. ಅನಂತರಾಮ ಅಭಿಯಾನಕ್ಕೆ ಸಂಬಂಧಿಸಿದಂತೆ ಮಾಹಿತಿ ನೀಡಿದರು. ಪ್ರಕಾಶನದ ಸಂಚಾಲಕ ಎಸ್.ಎನ್.ಪ್ರಕಾಶ್, ಕಾಲೇಜಿನ ಉಪನ್ಯಾಸಕ ಜಿ.ಕೆ. ನಾರಾಯಣಸ್ವಾಮಿ, ಶ್ರೀನಾಥ್, ವೇಣು ಗೋಪಾಲ್, ಬಿ.ಎನ್.ವೀಣಾ, ಗೋಪಿನಾಥ್, ಎನ್.ವಾಸು ಇದ್ದರು.

# ನಿಷ್ಪಕ್ಷಪಾತ ತನಿಖೆ ಆಗಬೇಕೆಂದರೆ ಇದು ಸಿಬಿಐನಿಂದಲೇ ಆಗಬೇಕು: ಪಿ.ರಾಜೀವ್

ಬೆಂಗಳೂರು

ವಿಧಾನಮಂಡಲದ ಸದನ ಅನಿರ್ದಿಷ್ಟ ಕಾಲ ಮುಂದೂಡಲ್ಪಟ್ಟ ದಿನವಾದ ಜುಲೈ 25ರಂದೇ ಮಾನ್ಯ ಮುಖ್ಯಮಂತ್ರಿಗಳು ಆದೇಶ ಹೊರಡಿಸಿ ಮನೀಶ್ ಕರ್ವೇಕರ್ ಅವರನ್ನು ಲೋಕಾಯುಕ್ತ ಚೀಫ್ ಆಗಿ ಮಾಡಿದ್ದಾರೆ. ಇದರ ಹಿಂದೆ ತಮ್ಮ ತಪ್ಪನ್ನು ಸಂಪೂರ್ಣವಾಗಿ ಸಂರಕ್ಷಿಸಿಕೊಳ್ಳುವ ಷಡ್ಯಂತ್ರ ನಡೆದಿದೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್ ಆರೋಪಿಸಿದರು.

ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಸೋಮವಾರ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಇದೇ ಕಾರಣಕ್ಕೆ ಮುಖ್ಯಮಂತ್ರಿಗಳು ಪ್ರಕರಣವನ್ನು ಲೋಕಾಯುಕ್ತದಿಂದಲೇ ತನಿಖೆ ಆಗಬೇಕೆಂದು ಒತ್ತಾಯಿಸಿದ್ದರು.

ಲೋಕಾಯುಕ್ತ ಪೊಲೀಸ್ ಅಧಿಕಾರಿಗೆ ಹೆಚ್ಚುವರಿಯಾಗಿ ಸರಕಾರದ ಅಧೀನ ಸಂಸ್ಥೆಗಳ ತನಿಖೆ ಜವಾಬ್ದಾರಿ ಕೊಟ್ಟ ಉದಾಹರಣೆ ಇಡೀ ಭಾರತ ದೇಶದಲ್ಲಿ ಇಲ್ಲ. ಅಂಥ ಒಂದು ಕೆಟ್ಟ ಪರಂಪರೆಯನ್ನು ಸಿದ್ದರಾಮಯ್ಯನವರು ಪ್ರಾರಂಭಿಸಿದ್ದಾರೆ ಎಂದು ಆಕ್ಷೇಪಿಸಿದರು.



ಲೋಕಾಯುಕ್ತದ ಶಕ್ತಿ ಕುಂದಿಸಿದ್ದ ಮುಖ್ಯಮಂತ್ರಿ: ಮುಖ್ಯಮಂತ್ರಿಗಳು ತಮ್ಮ ವಿರುದ್ಧದ ಪ್ರಕರಣ ಸಿಬಿಐ ಅಥವಾ ಲೋಕಾಯುಕ್ತಕ್ಕೆ ಹೋಗಲಿದೆ ಎಂದು ಮೊದಲೇ ಆಗ್ರಹಿಸಿದ್ದರು. ಹಾಗಾಗಿ ತಮ್ಮನ್ನು ರಕ್ಷಿಸಲು ಆ ಸ್ಥಾನವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ. ಅವರ ವಿರುದ್ಧ ಲೋಕಾಯುಕ್ತದಲ್ಲಿ 70ಕ್ಕೂ ಹೆಚ್ಚು ಪ್ರಕರಣಗಳು ತನಿಖಾ ಹಂತದಲ್ಲಿ ಇರುವಾಗಲೇ ಲೋಕಾಯುಕ್ತದ ಶಕ್ತಿ ಕುಂದಿಸುವ ಕೆಲಸವನ್ನು ಮುಖ್ಯಮಂತ್ರಿಗಳು ಮಾಡಿದ್ದರು. ಆದರೆ, ಮುಡಾ ಪ್ರಕರಣ ದಾಖಲಾಗುತ್ತಿದ್ದಂತೆ ಮುಖ್ಯಮಂತ್ರಿಗಳು ತಮ್ಮ ರಕ್ಷಣೆ ಮಾಡಿಕೊಳ್ಳಲು ಸಚಿವಸಂಪುಟದ ಅನುಮತಿ ಇಲ್ಲದೇ ಸಿಬಿಐ ತನಿಖೆ ಮಾಡಬಾರದು ಎಂಬ ಬದಲಾವಣೆ ಮಾಡಿ ಭ್ರಷ್ಟಾಚಾರ ಮುಚ್ಚಿಟ್ಟುಕೊಳ್ಳುವ ಪ್ರಯತ್ನ ಮಾಡಿದರು ಎಂದು ದೂರಿದರು.

ಎಸ್‌ಐಟಿ ಮೇಲೆ ವಿಶ್ವಾಸಾರ್ಹತೆ ಇಲ್ಲ: ಎಸ್‌ಐಟಿ ಮೇಲೆ ವಿಶ್ವಾಸಾರ್ಹತೆ ಹೊರಟುಹೋಗಿದೆ. ಈಚಿನ ನ್ಯಾಯಾಲಯದ ಪ್ರಕರಣಗಳಲ್ಲಿ ನ್ಯಾಯಾಧೀಶರು ಮಾತನಾಡಿದ್ದನ್ನು ಗಮನಿಸಿದಾಗ ಎಸ್‌ಐಟಿ, ಯಾರದ್ದೋ ಓಲೈಕೆಗಾಗಿ ಕೆಲಸ ಮಾಡುತ್ತಿರುವುದು ಮೇಲ್ನೋಟಕ್ಕೆ ಕಾಣುತ್ತಿದೆ ಎಂದು ವಿಶ್ಲೇಷಿಸಿದರು. ಮಹರ್ಷಿ ವಾಲ್ಮೀಕಿ ನಿಗಮದ ಹಗರಣದ ತನಿಖೆ, ಕ್ರಿಪ್ಟೊ ಕರೆನ್ಸಿ ಹ್ಯಾಕ್ ಮಾಡಿದ ಹಗರಣ ತನಿಖೆಯಲ್ಲಿ ಮನೀಶ್ ಕರ್ವೇಕರ್ ಅವರಿಗೆ ಎಸ್‌ಐಟಿ ಮುಖ್ಯಸ್ಥರಾಗಿ ಜವಾಬ್ದಾರಿ ಕೊಟ್ಟಿದ್ದಾರೆ ಎಂದು ವಿವರಿಸಿದರು.

ಪೊಲೀಸ್ ಅಧಿಕಾರಿಗಳು ಎಸ್‌ಐಟಿ ಮುಖ್ಯಸ್ಥರಾಗಿ ಮಹರ್ಷಿ ವಾಲ್ಮೀಕಿ ನಿಗಮದ ಹಗರಣದಲ್ಲಿ ನಾಗೇಂದ್ರರಿಗೆ ಕ್ಲೀನ್ ಚಿಟ್ ಕೊಟ್ಟಿದ್ದು, ಇದು ರಾಜ್ಯದ ಜನತೆಗೆ ಸಂಶಯ ಕಾಡುವಂತೆ ಮಾಡಿದೆ. ಹಣ ದುರ್ಬಳಕೆ, ಬಳ್ಳಾರಿ, ರಾಯಚೂರು ಲೋಕಸಭಾ ಚುನಾವಣೆಗೆ ದುರ್ಬಳಕೆ ಆಗಿದೆ ಎಂದು ಇ.ಡಿ. ವರದಿ ಕೊಟ್ಟಿದೆ. ಎಸ್‌ಐಟಿ ಮಾತ್ರ ನಾಗೇಂದ್ರರ ಹೆಸರು ಕೈಬಿಟ್ಟಿದೆ ಎಂದು ತಿಳಿಸಿದರು.

ಎಮನೀಶ್ ಕರ್ವೇಕರ್ ಅವರು ಇಲ್ಲಿನವರೆಗೆ ಎರಡು ವರ್ಷದ ಅವಧಿಯಲ್ಲಿ ತನಿಖೆ ಮಾಡಿ ಅಮಾಯಕ ಪೊಲೀಸ್ ಅಧಿಕಾರಿಗಳನ್ನು ಬಂಧಿಸಿದ್ದು ಬಿಟ್ಟರೆ ಬೇರ್ಯಾವ ಸಾಧನೆಯನ್ನೂ ಮಾಡಿಲ್ಲ. ಯಾವುದೇ ತಪ್ಪು ಮಾಡದ ತನಿಖಾಧಿಕಾರಿ, ಇನ್‌ಸ್ಪೆಕ್ಟರ್‌ಗಳಾದ ಪ್ರಶಾಂತಬಾಬು, ಲಕ್ಷ್ಮೀಕಾಂತ್, ಚಂದ್ರಧರರನ್ನು ಅರೆಸ್ಟ್ ಮಾಡಿ ಕಳಿಸಿದ್ದಾರೆ. ಅವರಿಂದ ರಿಕವರಿ ಏನಾಗಿದೆ? ಒಂದು ರೂಪಾಯಿ ಮೌಲ್ಯದ ಬಿಟ್ ಕಾಯಿನ್ ರಿಕವರಿ ಮಾಡಲು ಇವರಿಗೆ ಆಗಿಲ್ಲ ಎಂದು ಆರೋಪಿಸಿದರು.

ರಾಜ್ಯ ವಕ್ತಾರರಾದ ಮೋಹನ್ ವಿಶ್ವ, ಎಚ್.ಎನ್. ಚಂದ್ರಶೇಖರ್ ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy